# ಯೊವಾನ್ನನು ಕಂಡ ದಿವ್ಯ ದರ್ಶನಗಳ ಪ್ರಕಟನೆ

## ಮುನ್ನುಡಿ

ಧರ್ಮಸಭೆಯ ಪ್ರಾರಂಭದಲ್ಲಿ ಕ್ರೈಸ್ತಭಕ್ತರು ನಾನಾತರದ ಚಿತ್ರಹಿಂಸೆಗಳನ್ನು ಅನುಭವಿಸಬೇಕಾಗಿತ್ತು. ಯೇಸುಕ್ರಿಸ್ತರೇ "ತಮ್ಮ ಪ್ರಭು, ತಮ್ಮ ಜೀವೋದ್ಧಾರಕ" ಎಂದು ವಿಶ್ವಾಸವಿಟ್ಟುದರ ಕಾರಣ, ಅನೇಕರು ಪ್ರಾಣತ್ಯಾಗ ಮಾಡಬೇಕಾಯಿತು. ಈ ಸಂದರ್ಭದಲ್ಲಿ ಯೇಸುಸ್ವಾಮಿ ಯೊವಾನ್ನನಿಗೆ ಕೆಲವು ಸಂಗತಿಗಳನ್ನು ದಿವ್ಯದರ್ಶನಗಳ ಮೂಲಕ ಶ್ರುತಿಸುತ್ತಾರೆ. ಅವುಗಳನ್ನು ಈ ಪುಸ್ತಕದಲ್ಲಿ ಯೊವಾನ್ನನು ಬರೆದಿದ್ದಾನೆ. ಕ್ರೈಸ್ತ ಭಕ್ತರಲ್ಲಿ ನಂಬಿಕೆ-ನಿರೀಕ್ಷೆಗಳನ್ನು ಮೂಡಿಸಿ, ಅವರಲ್ಲಿ ಧೈರ್ಯಸ್ಥೈರ್ಯವನ್ನು ತುಂಬಿ, ಬಂದೊದಗಿರುವ ಹಿಂಸೆಬಾಧೆಗಳನ್ನು ಸಹನೆಯಿಂದ ತಾಳಿಕೊಂಡು ಪ್ರಾಮಾಣಿಕ ವಿಶ್ವಾಸಿಗಳಾಗಿ ಬಾಳುವಂತೆ ಪ್ರೋತ್ಸಾಹಿಸುವುದೇ ಈ ಪುಸ್ತಕದ ಉದ್ದೇಶ.

ಯೊವಾನ್ನನು ಕಂಡ ಹಲವಾರು ದರ್ಶನಗಳೂ ಆತನಿಗೆ ಶ್ರುತಿಸಲಾದ ಭೀಕರ, ವಿಸ್ಮಯಕರ ಹಾಗೂ ಸುಂದರವಾದ ವಿಷಯಗಳೂ ಈ ಹೊತ್ತಿಗೆಯಲ್ಲಿ ಅಡಗಿವೆ. ಇವೆಲ್ಲವೂ ಸಂಕೇತ ಹಾಗೂ ಅಲಂಕಾರ ರೂಪದಲ್ಲಿವೆ. ಯೊವಾನ್ನನ ಸಮಕಾಲೀನ ಕ್ರೈಸ್ತಭಕ್ತರಿಗೆ ಇವು ಅರ್ಥವಾಗುತ್ತಿದ್ದರೂ, ಇತರರಿಗೆ ನಿಗೂಢ ರಹಸ್ಯವಾಗಿಯೇ ಇದ್ದವು; ಈಗಲೂ ರಹಸ್ಯವಾಗಿಯೇ ಉಳಿದಿವೆ. ಸಂಗೀತದ ಪಲ್ಲವಿಯಂತೆ ಮುಖ್ಯ ವಿಷಯಗಳನ್ನು ಪದೇಪದೇ ಹಲವಾರು ದರ್ಶನಗಳಲ್ಲಿ ಪುನರಾವರ್ತಿಸಲಾಗಿದೆ.

ದರ್ಶನಗಳ ಅರ್ಥವಿವರಣೆಯ ಬಗ್ಗೆ ಗ್ರಂಥ ವಿಮರ್ಶಕರಲ್ಲಿ ಭಿನ್ನಾಭಿಪ್ರಾಯವಿದೆ. ಆದರೂ ಅವುಗಳ ಮೂಲಸೂತ್ರ ಮಾತ್ರ ಸುಸ್ಪಷ್ಟವಾಗಿದೆ ಎಂಬುದನ್ನು ಯಾರೂ ಅಲ್ಲಗಳೆಯುವಂತಿಲ್ಲ. ಅಂತಿಮವಾಗಿ, ದೇವರು ಪ್ರಭು ಯೇಸುಕ್ರಿಸ್ತರ ಮುಖಾಂತರ ಸೈತಾನನನ್ನೂ ಸಕಲ ಶತ್ರುಗಳನ್ನೂ ಸಂಪೂರ್ಣವಾಗಿ ವಿನಾಶಗೊಳಿಸುತ್ತಾರೆ. ಹೀಗೆ ವಿಜಯವು ಪ್ರಾಪ್ತವಾದಾಗ ತಮಗೆ ಪ್ರಾಮಾಣಿಕರಾಗಿದ್ದ ಸಜ್ಜನರಿಗಾಗಿ ನೂತನ ಆಕಾಶಮಂಡಲವನ್ನೂ ನೂತನ ಭೂಮಂಡಲವನ್ನೂ ಸೃಷ್ಟಿಸಿ, ಅವರಿಗೆ ಶಾಶ್ವತ ಸೌಭಾಗ್ಯವನ್ನು ದಯಪಾಲಿಸುತ್ತಾರೆ.


| | | ಪರಿವಿಡಿ |
|---|---|---|
| ಪೀಠಿಕೆ | – | 1.1 – 1.8 |
| ಪ್ರಾರಂಭ ದರ್ಶನ, ಏಳು ಸಭೆಗಳಿಗೆ ಸಂದೇಶ | – | 1.9 – 3.22 |
| ಏಳು ಮುದ್ರೆಗಳುಳ್ಳ ಸುರುಳಿ | – | 4.1 – 8.1 |
| ಏಳು ತುತೂರಿಗಳು | – | 8.2 – 11.19 |
| ಘಟಸರ್ಪವೂ ಎರಡು ಪ್ರಾಣಿಗಳೂ | – | 12.1 – 13.18 |
| ಹಲವಾರು ದರ್ಶನಗಳು | – | 14.1 – 15.8 |
| ದೈವ ರೌದ್ರ ತುಂಬಿದ ಏಳು ಪಾತ್ರೆಗಳು | – | 16.1 – 16.21 |
| ಬಾಬಿಲೋನಿನ ವಿನಾಶ, ಮೃಗ, ಸುಳ್ಳುಪ್ರವಾದಿ ಮತ್ತು ಸೈತಾನ ಇವರ ಸೋಲು | – | 17.1 – 20.10 |
| ಅಂತಿಮ ತೀರ್ಪು | – | 20.11 – 20.15 |

| | | |
|---|---|---|
| ನೂತನ ಆಕಾಶ, ನೂತನ ಭೂಮಿ, ನೂತನ ಜೆರುಸಲೇಮ್ | – | 21.1 – 22.5 |
| ಸಮಾಪ್ತಿ | – | 22.6 – 22.21 |

## ಪೀಠಿಕೆ

**1** ದೇವರು ಯೇಸುಕ್ರಿಸ್ತರಿಗಿತ್ತ ಪ್ರಕಟನೆ ಇದು. ಅತಿ ಶೀಘ್ರದಲ್ಲಿಯೇ ಸಂಭವಿಸಲಿರುವ ಘಟನೆಗಳನ್ನು
ತಮ್ಮ ದಾಸರಿಗೆ ತಿಳಿಯಪಡಿಸುವುದಕ್ಕಾಗಿ ಕ್ರಿಸ್ತಯೇಸುವಿಗೆ ಈ ಪ್ರಕಟನೆಯನ್ನು ದೇವರು
ದಯಪಾಲಿಸಿದರು. ಕ್ರಿಸ್ತಯೇಸು ತಮ್ಮ ದೂತನನ್ನು ಕಳುಹಿಸಿ ತಮ್ಮ ದಾಸನಾದ ಯೊವಾನ್ನನಿಗೆ
ಇವುಗಳನ್ನು ಪ್ರಕಟಿಸಿದರು. 2ಯೊವಾನ್ನನು ದೇವರ ಸಂದೇಶಕ್ಕೂ ಕ್ರಿಸ್ತೇಸು ತಿಳಿಸಿದ ಸತ್ಯಕ್ಕೂ ಸಾಕ್ಷಾತ್
ಸಾಕ್ಷಿಯಾಗಿದ್ದಾನೆ. 3ಈ ಪ್ರವಾದನಾ ಸಂದೇಶವನ್ನು ಓದುವವನು ಧನ್ಯನು; ಓದಿದ್ದನ್ನು
ಕೇಳಿಸಿಕೊಳ್ಳುವವರೂ ಧನ್ಯರು ಮತ್ತು ಈ ಪ್ರವಾದನೆಯಲ್ಲಿ ಲಿಖಿತವಾಗಿರುವುದನ್ನು ಕೈಗೊಂಡು
ನಡೆಯುವವರು ಸಹ ಧನ್ಯರು! ಏಕೆಂದರೆ, ಕಾಲ ಸನ್ನಿಹಿತವಾಯಿತು.

## ಶ್ರೀಸಭೆಗಳಿಗೆ ಶುಭಾಶಯಗಳು

4 ಏಷ್ಯಾಸೀಮೆಯಲ್ಲಿರುವ ಏಳು ಸಭೆಗಳಿಗೆ ಯೊವಾನ್ನನೆಂಬ ನಾನು ಬರೆಯುವುದೇನೆಂದರೆ:
ವರ್ತಮಾನಕಾಲದಲ್ಲಿ 'ಇರುವಾತನೂ,' ಭೂತಕಾಲದಲ್ಲಿ 'ಇದ್ದಾತನೂ,' ಭವಿಷ್ಯತ್‌ಕಾಲದಲ್ಲಿ
'ಬರುವಾತನೂ' ಆದ ದೇವರಿಂದ ನಿಮಗೆ ಕೃಪಾಶೀರ್ವಾದವೂ ಶಾಂತಿಸಮಾಧಾನವೂ ಲಭಿಸಲಿ!
ಇದಲ್ಲದೆ, ದೇವರ ಸಿಂಹಾಸನದ ಸಾನ್ನಿಧ್ಯದಲ್ಲಿ ಇರುವ ಸಪ್ತ ಆತ್ಮಗಳಿಂದಲೂ ಮತ್ತು
5ನಂಬಲರ್ಹವಾದ ಸಾಕ್ಷಿಯೂ ಮೃತ್ಯುವಿನಿಂದ ಪುನರುತ್ಥಾನ ಹೊಂದಿದವರಲ್ಲಿ ಪ್ರಪ್ರಥಮರೂ
ಭೂರಾಜರ ಒಡೆಯರೂ ಆದ ಯೇಸುಕ್ರಿಸ್ತರಿಂದಲೂ ನಿಮಗೆ ಕೃಪಾಶೀರ್ವಾದವೂ
ಶಾಂತಿಸಮಾಧಾನವೂ ಲಭಿಸಲಿ! ನಮ್ಮನ್ನು ಪ್ರೀತಿಸುವವರೂ ತಮ್ಮ ರಕ್ತದಿಂದ ನಮ್ಮ ಪಾಪಗಳನ್ನು
ತೊಳೆದವರೂ 6ತಮ್ಮ ಪಿತನಾದ ದೇವರ ಸೇವೆಗೆ ನಮ್ಮನ್ನು ದೈವೀರಾಜ್ಯದ ಯಾಜಕರನ್ನಾಗಿ
ಮಾಡಿದವರೂ ಆದ ಯೇಸುಕ್ರಿಸ್ತರಿಗೆ ಮಹಿಮೆ ಮತ್ತು ಅಧಿಪತ್ಯ ಯುಗಯುಗಾಂತರಕ್ಕೂ ಸಲ್ಲಲಿ!
ಆಮೆನ್.

7 ಇಗೋ ನೋಡು, ಮೇಘಾರೂಢನಾಗಿ
ಬರುತಿಹನು
ಪ್ರತಿಯೊಂದು ಕಣ್ಣೂ ಕಾಣುವುದು ಆತನನು,
ಆತನನ್ನು ಇರಿದವರೂ ವೀಕ್ಷಿಸುವರು,
ಗೋಳಾಡುವರಾತನನ್ನು ಕಂಡು
ಲೋಕದ ಜನರೆಲ್ಲರು.
ಹೌದು, ಅದರಂತೆಯೇ ಆಗುವುದು, ಆಮೆನ್.

8 " 'ಅ'ಕಾರವೂ 'ಳ' ಕಾರವೂ ನಾನೇ. ವರ್ತಮಾನಕಾಲದಲ್ಲಿ, 'ಇರುವಾತನೂ,' ಭೂತಕಾಲದಲ್ಲಿ
'ಇದ್ದಾತನೂ' ಭವಿಷ್ಯತ್ಕಾಲದಲ್ಲಿ 'ಬರುವಾತನೂ' ಸರ್ವಶಕ್ತನೂ ನಾನೇ" ಎಂದು ಪ್ರಭು ದೇವರು
ನುಡಿಯುತ್ತಾರೆ.

## ಕ್ರಿಸ್ತಯೇಸುವಿನ ದರ್ಶನ

9 ನಾನು ಯೊವಾನ್ನ, ನಿಮ್ಮ ಸಹೋದರ; ಕ್ರಿಸ್ತೇಸುವಿನಲ್ಲಿ ದೇವರ ಸಾಮ್ರಾಜ್ಯಕ್ಕೆ ಸೇರಿರುವವರಿಗೆ
ಬಂದೊದಗುವ ಕಷ್ಟಸಂಕಟಗಳನ್ನು ತಾಳ್ಮೆಯಿಂದ ಸಹಿಸಿಕೊಳ್ಳುವುದರಲ್ಲಿ ನಿಮ್ಮ ಪಾಲುಗಾರ. ದೇವರ

ವಾಕ್ಯವನ್ನು ಸಾರಿದುದರಿಂದಲೂ ಕ್ರಿಸ್ತೇಸುವಿಗೆ ಸಾಕ್ಷಿ ನೀಡಿದುದರಿಂದಲೂ ನಾನು ಪತ್ಮೋಸ್
ದ್ವೀಪವಾಸವನ್ನು ಅನುಭವಿಸಬೇಕಾಯಿತು. [10]ಪ್ರಭುವಿನ ದಿನದಂದು ನಾನು ದೇವರಾತ್ಮ ವಶನಾದೆ. ಆಗ
ನನ್ನ ಬೆನ್ನ ಹಿಂದೆ ಮಹಾಶಬ್ದವೊಂದು ಕೇಳಿಸಿತು. ಅದು ತುತೂರಿಯ ನಾದದಂತಿತ್ತು. [11]ಅದು
ಹೀಗೆಂದು ನುಡಿಯಿತು: "ನೀನು ಕಾಣುತ್ತಿರುವುದನ್ನು ಪುಸ್ತಕದಲ್ಲಿ ಬರೆದು ಎಫೆಸ, ಸ್ಮುರ್ನ, ಪೆರ್ಗಮ,
ಥುವತ್ತೈರ, ಸಾರ್ದಿಸ್, ಫಿಲದೆಲ್ಫಿಯ ಮತ್ತು ಲವೊದಿಕೀಯ ಎಂಬ ಪಟ್ಟಣಗಳಲ್ಲಿರುವ ಏಳು ಸಭೆಗಳಿಗೆ
ಕಳುಹಿಸು."

12 ನನ್ನ ಸಂಗಡ ಮಾತನಾಡುತ್ತಿರುವ ಈ ಶಬ್ದ ಯಾರದೆಂದು ನೋಡಲು ನಾನು ಹಿಂದಕ್ಕೆ
ತಿರುಗಿದೆ. ಹಾಗೆ ತಿರುಗಿದಾಗ, ಏಳು ಚಿನ್ನದ ದೀಪಸ್ತಂಭಗಳನ್ನು ಕಂಡೆ. [13]ಆ ದೀಪಸ್ತಂಭಗಳ ನಡುವೆ
'ನರಪುತ್ರ'ನಂಥ ಒಬ್ಬ ವ್ಯಕ್ತಿಯಿದ್ದರು. ಅವರು ನಿಲುವಂಗಿಯನ್ನು ತೊಟ್ಟಿದ್ದರು. ಅದು ಅವರ
ಪಾದಗಳನ್ನು ಮುಟ್ಟುವಷ್ಟು ನೀಳವಾಗಿತ್ತು. ಅಲ್ಲದೆ, ಚಿನ್ನದ ಎದೆಪಟ್ಟಿಯನ್ನು ಕಟ್ಟಿಕೊಂಡಿದ್ದರು. [14]ಅವರ
ತಲೆಗೂದಲು ಹಿಮದಂತೆಯೂ ಬಿಳಿಯ ಉಣ್ಣೆಯಂತೆಯೂ ಬಿಳುಪಾಗಿತ್ತು. ಕಣ್ಣುಗಳು ಪ್ರಜ್ವಲಿಸುವ
ಬೆಂಕಿಯ ಕೆಂಡದಂತಿದ್ದವು. [15]ಅವರ ಪಾದಗಳು ಕುಲುಮೆಯಲ್ಲಿ ಕಾಯಿಸಿದ ತಾಮ್ರದಂತೆ
ಥಳಥಳಿಸುತ್ತಾ ಇದ್ದವು. ಧ್ವನಿ, ಜಲಪಾತದಂತೆ ಭೋರ್ಗರೆಯುತ್ತಿತ್ತು. [16]ಅವರ ಬಲಗೈಯಲ್ಲಿ ಏಳು
ನಕ್ಷತ್ರಗಳಿದ್ದವು. ಬಾಯೊಳಗಿಂದ ಹರಿತವಾದ ಇಬ್ಬಾಯಿಯ ಖಡ್ಗವು ಹೊರಬಂದಿತ್ತು. ಅವರ ಮುಖ
ನಡುಮಧ್ಯಾಹ್ನದ ಸೂರ್ಯನಂತೆ ಪ್ರಕಾಶಿಸುತ್ತಿತ್ತು. [17]ನಾನು ಅವರನ್ನು ಕಂಡಾಗ, ಸತ್ತವನಂತಾದೆ.
ಅವರ ಪಾದಗಳ ಮುಂದೆ ಬಿದ್ದೆ. ಅವರು ತಮ್ಮ ಬಲಗೈಯನ್ನು ನನ್ನ ಮೇಲಿಟ್ಟು, "ಭಯಪಡಬೇಡ,
ನಾನೇ ಮೊದಲನೆಯವನೂ ಕಡೆಯವನೂ [18]ಸದಾ ಜೀವಿಸುವವನೂ ಆಗಿ ಇದ್ದೇನೆ. ಮರಣಹೊಂದಿದೆ
ನಿಜ. ಆದರೆ ಇಗೋ ನೋಡು, ಯುಗಯುಗಾಂತರಕ್ಕೂ ಜೀವಿಸುವವನಾಗಿದ್ದೇನೆ. ಮೃತ್ಯುವಿನ ಮತ್ತು
ಮೃತ್ಯುಲೋಕದ ಬೀಗದ ಕೈಗಳು ನನ್ನಲ್ಲಿವೆ. [19]ಆದುದರಿಂದ ನೀನು ಕಂಡ ಘಟನೆಗಳನ್ನು ಅಂದರೆ,
ಈಗ ನಡೆಯುತ್ತಿರುವ ಘಟನೆಗಳನ್ನೂ ಮುಂದೆ ಸಂಭವಿಸಲಿರುವ ಘಟನೆಗಳನ್ನೂ ಕುರಿತು ಬರೆ. [20]ನನ್ನ
ಬಲಗೈಯಲ್ಲಿ ನೀನು ಕಂಡ ಏಳು ನಕ್ಷತ್ರಗಳ ಮತ್ತು ಏಳು ಚಿನ್ನದ ದೀಪಸ್ತಂಭಗಳ ರಹಸ್ಯವಿಷ್ಟೆ: ಆ
ಏಳು ನಕ್ಷತ್ರಗಳು ಏಳು ಸಭೆಗಳ ದೂತರನ್ನು ಸೂಚಿಸುತ್ತವೆ. ಆ ಏಳು ಚಿನ್ನದ ದೀಪಸ್ತಂಭಗಳು ಏಳು
ಸಭೆಗಳನ್ನು ಸೂಚಿಸುತ್ತವೆ," ಎಂದರು.

## ಎಫೆಸ ಸಭೆಗೆ ಸಂದೇಶ

**2** "ಎಫೆಸದಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ಏಳು ನಕ್ಷತ್ರಗಳನ್ನು ತನ್ನ ಬಲಗೈಯಲ್ಲಿ
ಹಿಡಿದಿರುವಾತನೂ ಏಳು ಚಿನ್ನದ ದೀಪಸ್ತಂಭಗಳ ನಡುವೆ ನಡೆದಾಡುವಾತನೂ ನೀಡುವ
ಸಂದೇಶವಿದು: [2]ನಾನು ನಿನ್ನ ಸುಕೃತ್ಯಗಳನ್ನು ಬಲ್ಲೆ. ನಿನ್ನ ಶ್ರಮಜೀವನವನ್ನು ಅರಿತು ಇದ್ದೇನೆ. ನಿನ್ನ
ಸಹನಾಶಕ್ತಿಯನ್ನು ಮನಗಂಡಿದ್ದೇನೆ. ದುರ್ಜನರನ್ನು ನೀನು ಸಹಿಸಲಾರೆ ಎಂಬುದು ನನಗೆ ಗೊತ್ತು.
ಪ್ರೇಷಿತರಲ್ಲದಿದ್ದರೂ ಪ್ರೇಷಿತರೆಂದು ಹೇಳಿಕೊಳ್ಳುವವರನ್ನು ನೀನು ಪರಿಶೋಧಿಸಿರುವೆ. ಅವರು
ಸುಳ್ಳುಗಾರರೆಂಬುದನ್ನು ಕಂಡುಹಿಡಿದಿರುವೆ. [3]ಹೌದು, ಸಹನಾಶಕ್ತಿ ನಿನಗಿದೆ. ಬೇಸರಗೊಳ್ಳದೆ ನನ್ನ
ಹೆಸರಿನ ನಿಮಿತ್ತ ನೀನು ಕಷ್ಟಸಂಕಟಗಳನ್ನು ತಾಳಿಕೊಂಡೆ. [4]ಆದರೂ ನಿನ್ನ ಮೇಲೆ ಹೊರಿಸಬೇಕಾದ
ಆಪಾದನೆ ಒಂದಿದೆ: ಮೊದಲು ನಿನಗೆ ನನ್ನ ಮೇಲಿದ್ದ ಪ್ರೀತಿ ಈಗಿಲ್ಲ. [5]ಆದುದರಿಂದ ನೀನು ಹೇಗೆ
ಪತನಹೊಂದಿದೆ ಎಂಬುದನ್ನು ಜ್ಞಾಪಿಸಿಕೋ. ಪಶ್ಚಾತ್ತಾಪಪಟ್ಟ ಪಾಪಕ್ಕೆ ವಿಮುಖನಾಗು. ನೀನು
ಮೊದಲು ಮಾಡಿದ ಸುಕೃತ್ಯಗಳನ್ನು ಸಾಧಿಸು. ನೀನು ಪಾಪಕ್ಕೆ ವಿಮುಖನಾಗದೆ ಹೋದರೆ, ನಾನು
ನಿನ್ನ ಬಳಿಗೆ ಬಂದು ನಿನ್ನ ದೀಪಸ್ತಂಭವನ್ನು ಅದರ ಸ್ಥಳದಿಂದ ತೆಗೆದು ಹಾಕುತ್ತೇನೆ. [6]ಆದರೆ ನಿನ್ನಲ್ಲಿ
ಒಂದು ಒಳ್ಳೆಯ ಗುಣವಿದೆ. ನಾನು ದ್ವೇಷಿಸುವಂತೆ ನೀನು ಸಹ ನಿಕೊಲಾಯಿತರ ದುಷ್ಕೃತ್ಯಗಳನ್ನು

ದ್ವೇಷಿಸುತ್ತಿರುವೆ. [7]ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು ಕೇಳಲಿ. ಯಾರು
ಜಯಹೊಂದುತ್ತಾನೋ ಅಂಥವನಿಗೆ ದೇವರ ಪರಂಧಾಮದಲ್ಲಿ ಇರುವ ಜೀವವೃಕ್ಷದ ಫಲವನ್ನು
ಸವಿಯುವ ಸೌಭಾಗ್ಯವನ್ನು ನಾನು ಅನುಗ್ರಹಿಸುತ್ತೇನೆ.

## ಸ್ಮುರ್ನದ ಸಭೆಗೆ ಸಂದೇಶ

8 "ಸ್ಮುರ್ನದಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ಮೊದಲನೆಯವನೂ ಕಡೆಯವನೂ,
ಮೃತನಾದರೂ ಮೃತ್ಯುಂಜಯನಾದವನು ನೀಡುವ ಸಂದೇಶವಿದು: [9]ನಾನು ನಿನ್ನ ಕಷ್ಟಸಂಕಟಗಳನ್ನು
ತಿಳಿದಿರುವಾತನು. ನಿನ್ನ ಬಡತನವನ್ನು ನಾನು ಬಲ್ಲೆ. ಆದರೆ ವಾಸ್ತವವಾಗಿ ನೀನು ಶ್ರೀಮಂತನೇ
ಆಗಿರುವೆ. ಯೆಹೂದ್ಯರೆಂದು ಕೊಚ್ಚಿಕೊಳ್ಳುವವರು ನಿನ್ನನ್ನು ತೆಗಳುವುದು ನನಗೆ ತಿಳಿದಿದೆ. ಆದರೆ
ಅವರು ಯೆಹೂದ್ಯರಲ್ಲ, ಸೈತಾನನ ಕೂಟದವರಾಗಿದ್ದಾರೆ. [10]ನಿನಗೆ ಬಂದೊದಗಲಿರುವ
ಯಾತನೆಯಿಂದಾಗಿ ಎದೆಗುಂದಬೇಡ. ನೋಡು, ಪರಿಶೋಧನೆಗೆ ಗುರಿಯಾಗುವಂತೆ ನಿಮ್ಮಲ್ಲಿ
ಕೆಲವರನ್ನು ಸೈತಾನನು ಸೆರೆಮನೆಗೆ ತಳ್ಳುವನು. ಹತ್ತು ದಿನಗಳು ನೀನು ಕಷ್ಟಸಂಕಟಗಳನ್ನು
ಅನುಭವಿಸಬೇಕಾಗುವುದು; ಸಾಯಬೇಕಾಗಿ ಬಂದರೂ ಸ್ವಾಮಿನಿಷ್ಠೆಯಿಂದಿರು. ಆಗ ನಾನು ಜೀವವೆಂಬ
ಜಯಮಾಲೆಯನ್ನು ನಿನಗೆ ಕೊಡುತ್ತೇನೆ. [11]ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು
ಕೇಳಲಿ. ಜಯಹೊಂದುವವನಿಗೆ ಎರಡನೆಯ ಮರಣದಿಂದ ಯಾವ ಕೇಡೂ ಸಂಭವಿಸದು.

## ಪೆರ್ಗಮದ ಸಭೆಗೆ ಸಂದೇಶ

12 "ಪೆರ್ಗಮದಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ಹರಿತವಾದ ಇಬ್ಬಾಯಿಯ
ಖಡ್ಗವುಳ್ಳವನು ನೀಡುವ ಸಂದೇಶವಿದು: [13]ನಿನ್ನ ನಿವಾಸಸ್ಥಳವನ್ನು ನಾನು ಬಲ್ಲೆ. ಅದು ಸೈತಾನನ
ಅಧಿಕಾರಸ್ಥಾನ. ಆದರೂ ನೀನು ನನ್ನ ನಾಮವನ್ನೇ ದೃಢವಾಗಿ ಆಶ್ರಯಿಸಿರುವೆ. ಸೈತಾನನ ಬಿಡಾರವಾದ
ನಿನ್ನ ಆ ನಗರದಲ್ಲಿಯೇ ನನ್ನ ನಂಬಿಕಸ್ಥನೂ ಸಾಕ್ಷಿಯೂ ಆದ ಅಂತಿಪನನ್ನು ಕೊಂದುಹಾಕಿದರು. ಆ
ದಿವಸಗಳಲ್ಲೂ ನೀನು ನನ್ನಲ್ಲಿಟ್ಟಿರುವ ವಿಶ್ವಾಸವನ್ನು ನಿರಾಕರಿಸಲಿಲ್ಲ. [14]ಇಷ್ಟಾದರೂ ನಿನ್ನ ವಿರುದ್ಧ
ಹೇಳಬೇಕಾದ ಕೆಲವು ಆಪಾದನೆಗಳಿವೆ. ಬಿಳಾಮನ ದುರ್ಬೋಧನೆಯನ್ನು ಅವಲಂಬಿಸುವವರು
ಕೆಲವರು ನಿನ್ನಲ್ಲಿ ಇದ್ದಾರೆ. ಈ ಬಿಳಾಮನೇ ಇಸ್ರಯೇಲ್ ಜನರು ಪಾಪದಲ್ಲಿ ಬೀಳುವಂತೆ ಮಾಡಲು
ಬಾಲಾಕನನ್ನು ಪ್ರಚೋದಿಸಿದವನು. ಈ ಕಾರಣ, ಅವರು ವಿಗ್ರಹಕ್ಕೆ ನೈವೇದ್ಯಮಾಡಿದ ಪದಾರ್ಥಗಳನ್ನು
ತಿಂದರು; ಲೈಂಗಿಕ ಅನೈತಿಕತೆಗೆ ತುತ್ತಾದರು. [15]ಅಂತೆಯೇ, ನಿಕೊಲಾಯಿತರ ಬೋಧನೆಯನ್ನು
ಅವಲಂಬಿಸುವವರು ಸಹ ನಿನ್ನಲ್ಲಿದ್ದಾರೆ. [16]ಆದುದರಿಂದ ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖನಾಗು.
ಇಲ್ಲದಿದ್ದರೆ, ಬೇಗನೆ ನಿನ್ನ ಬಳಿಗೆ ಬರುತ್ತಾನೆ. ಬಂದು ನನ್ನ ಬಾಯಲ್ಲಿರುವ ಖಡ್ಗದಿಂದ ಅವರೊಡನೆ
ಕಾದಾಡುತ್ತೇನೆ.

17 "ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು ಕೇಳಲಿ. ಜಯಹೊಂದಿದವನಿಗೆ
ಮರೆಯಾಗಿರುವ ಮನ್ನವನ್ನು ನಾನು ದಯಪಾಲಿಸುತ್ತೇನೆ. ಇದಲ್ಲದೆ, ಆತನಿಗೆ ಒಂದು ಬಿಳಿಯ ಕಲ್ಲನ್ನು
ನಾನು ಕೊಡುತ್ತೇನೆ. ಆ ಕಲ್ಲಿನ ಮೇಲೆ ಒಂದು ಹೊಸ ಹೆಸರನ್ನು ಕೆತ್ತಲಾಗಿರುತ್ತದೆ. ಆ ಕಲ್ಲನ್ನು
ಸ್ವೀಕರಿಸಿದವನಿಗೇ ಹೊರತು ಮತ್ಯಾರಿಗೂ ಆ ಹೆಸರು ತಿಳಿಯದು.

## ಥುವತೈರದ ಸಭೆಗೆ ಸಂದೇಶ

18 "ಥುವತೈರದಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ಪ್ರಜ್ವಲಿಸುವ ಬೆಂಕಿಯ
ಕೆಂಡದಂಥ ಕಣ್ಣುಗಳುಳ್ಳವನೂ ತಾಮ್ರದಂತಿರುವ ಪಾದಗಳುಳ್ಳವನೂ ಆದ ದೇವಪುತ್ರನ ಸಂದೇಶವಿದು:

[19]ನಿನ್ನ ಸುಕೃತ್ಯಗಳನ್ನು ನಾನು ಬಲ್ಲೆ. ನಿನ್ನ ಪ್ರೀತಿ ವಿಶ್ವಾಸಗಳೂ ನನಗೆ ತಿಳಿದಿವೆ, ನಿನ್ನ ಸೇವೆ
ಸಹಿಷ್ಣುತೆಗಳನ್ನು ಮನಗಂಡಿದ್ದೇನೆ. ನಿನ್ನ ಇತ್ತೀಚಿನ ಕಾರ್ಯಗಳು ನಿನ್ನ ಹಿಂದಿನ ಕಾರ್ಯಗಳಿಗಿಂತಲೂ
ಮೇಲಾದುವೆಂದು ನನಗೆ ಗೊತ್ತು. [20]ಆದರೂ ನಿನಗೆ ವಿರುದ್ಧವಾದ ಆಪಾದನೆ ಒಂದಿದೆ: ಈಜೆಬೆಲ್
ಎಂಬ ಸ್ತ್ರೀ ತಾನು ಪರವಾದಿನಿಯೆಂದು ಹೇಳಿಕೊಂಡು ಮೆರೆಯುತ್ತಿದ್ದಾಳೆ. ಲೈಂಗಿಕ ಅನೈತಿಕತೆಯಲ್ಲಿ
ತೊಡಗಬಹುದೆಂದೂ ವಿಗ್ರಹಗಳಿಗೆ ನೈವೇದ್ಯಮಾಡಿದ ಪದಾರ್ಥವನ್ನು ತಿನ್ನಬಹುದೆಂದೂ
ಬೋಧಿಸುತ್ತಾ ನನ್ನ ಸೇವಕರನ್ನು ಅಡ್ಡದಾರಿಗೆ ಎಳೆಯುತ್ತಿದ್ದಾಳೆ. ಆದರೂ ನೀನು ಅವಳನ್ನು ತಡೆಯದೆ
ಬಿಟ್ಟಿರುವೆ. [21]ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖಳಾಗುವಂತೆ ನಾನು ಅವಳಿಗೆ ಕಾಲಾವಕಾಶ ಕೊಟ್ಟೆ.
ಆದರೆ ಅವಳು ತನ್ನ ಜಾರತ್ವವನ್ನು ತ್ಯಜಿಸಿ ದೇವರಿಗೆ ಅಭಿಮುಖಳಾಗಲು ನಿರಾಕರಿಸುತ್ತಾಳೆ. [22]ಇಗೋ
ನೋಡು, ಅವಳು ರೋಗದಿಂದ ಹಾಸಿಗೆ ಹಿಡಿಯುವಂತೆ ಮಾಡುತ್ತೇನೆ. ಅವಳೊಡನೆ
ವ್ಯಭಿಚಾರಮಾಡುವವರು ಅವಳ ದುಷ್ಕೃತ್ಯಗಳನ್ನು ತ್ಯಜಿಸಿ ಪಶ್ಚಾತ್ತಾಪಪಟ್ಟು ದೇವರಿಗೆ ಅಭಿಮುಖರಾಗದೆ
ಹೋದರೆ, ಅವರು ಭೀಕರ ಕಷ್ಟನಷ್ಟಗಳಿಗೆ ಗುರಿಯಾಗುವಂತೆ ಮಾಡುತ್ತೇನೆ. [23]ಅವಳ ಮಕ್ಕಳನ್ನು
ಸಂಹರಿಸದೆ ಬಿಡೆನು. ಹೃನ್ಮನಗಳನ್ನು ಪರಿಶೋಧಿಸುವಾತನು ನಾನೇ ಎಂದು ಎಲ್ಲ ಸಭೆಗಳಿಗೂ ಆಗ
ಮನದಟ್ಟು ಆಗುವುದು; ನಿಮ್ಮಲ್ಲಿರುವ ಪ್ರತಿಯೊಬ್ಬನಿಗೂ ಅವನವನ ಕೃತ್ಯಗಳಿಗೆ ತಕ್ಕಂತೆ ಪ್ರತಿಫಲವನ್ನು
ನೀಡುತ್ತೇನೆ.

24 “ಆದರೆ ಥುವತ್ತೈರದಲ್ಲಿರುವ ಇನ್ನಿತರರಿಗೆ ನಾನು ಹೇಳುವುದೇನೆಂದರೆ: ಈ
ದುರ್ಬೋಧನೆಯನ್ನು ನೀವು ಅವಲಂಬಿಸಲಿಲ್ಲ. ‘ಸೈತಾನನ ಗೂಢ ರಹಸ್ಯಗಳು’ ಎನ್ನಲಾಗುವ ಈ
ವಿಷಯಗಳನ್ನು ನೀವು ಅರಿತುಕೊಳ್ಳಲಿಲ್ಲ. ನಿಮ್ಮ ಮೇಲೆ ಹೆಚ್ಚಿನ ಹೊರೆಯನ್ನು ಹೊರಿಸುವುದಿಲ್ಲ.
[25]ನಾನು ಬರುವವರೆಗೆ ನೀವು ಅವಲಂಬಿಸಿರುವುದನ್ನೇ ಆಶ್ರಯಿಸಿಕೊಂಡಿದ್ದರೆ ಅಷ್ಟೇ ಸಾಕು. [26–28]ನಾನು
ನನ್ನ ಪಿತನಿಂದ ಅಧಿಕಾರ ಪಡೆದಿರುವಂತೆಯೇ, ಜಯಹೊಂದುವವನಿಗೆ ಹಾಗೂ ನಾನು ಮೆಚ್ಚುವ
ಕಾರ್ಯಗಳನ್ನು ಕೊನೆಯವರೆಗೂ ಮುಂದುವರಿಸಿಕೊಂಡು ಹೋಗುವವನಿಗೆ,

‘ಜನಾಂಗಗಳ ಮೇಲೆ ಅಧಿಕಾರವನ್ನು
ಕೊಡುವೆನು,
ಅವನು ಅವುಗಳನ್ನು ಕಬ್ಬಿಣದ
ದಂಡದಿಂದ ಆಳುವನು,
ಮಣ್ಣಿನ ಮಡಕೆಯಂತೆ ಅವುಗಳನ್ನು
ನುಚ್ಚುನೂರು ಮಾಡುವನು.’
ಅಂಥವನಿಗೆ ಉದಯ ತಾರೆಯನ್ನು ನೀಡುವೆನು.

29 “ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು ಕೇಳಲಿ.”

## ಸಾರ್ದಿಸ್ ಸಭೆಗೆ ಸಂದೇಶ

**3** “ಸಾರ್ದಿಸ್‌ನಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ದೇವರ ಸಪ್ತ ಆತ್ಮಗಳನ್ನೂ ಸಪ್ತ
ನಕ್ಷತ್ರಗಳನ್ನೂ ಹೊಂದಿರುವಾತನು ನೀಡುವ ಸಂದೇಶವಿದು: ನಿನ್ನ ಕೃತ್ಯಗಳನ್ನು ನಾನು ಬಲ್ಲೆ. ಹೆಸರಿಗೆ
ಮಾತ್ರ ನೀನು ಜೀವಂತನಾಗಿರುವೆ. ಆದರೆ ವಾಸ್ತವವಾಗಿ ನೀನು ಸತ್ತಂತೆಯೇ ಸರಿ. [2]ಎಚ್ಚೆತ್ತು ನಿನ್ನಲ್ಲಿ
ಉಳಿದಿರುವುಗಳನ್ನು ಉತ್ತೇಜನಗೊಳಿಸು; ಅವು ಸಾವಿನ ದವಡೆಯಲ್ಲಿವೆ. ನನ್ನ ದೇವರ ದೃಷ್ಟಿಯಲ್ಲಿ
ನಿನ್ನ ಕೃತ್ಯಗಳು ಯಾವುವೂ ಸಮಗ್ರವಾಗಿರುವುದು ನನಗೆ ಕಂಡುಬಂದಿಲ್ಲ. [3]ನಿನಗೆ ಕೊಡಲಾದ
ಬೋಧನೆಯನ್ನೂ ಅದನ್ನು ನೀನು ಕೇಳಿದ ರೀತಿಯನ್ನೂ ನೆನಪಿಗೆ ತಂದುಕೋ. ಅದರಂತೆ ನಡೆದು
ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖನಾಗು. ನೀನು ಎಚ್ಚೆತ್ತುಕೊಳ್ಳದಿದ್ದರೆ ನಾನು ಕಳ್ಳನು ಬರುವಂತೆ

ಬರುತ್ತೇನೆ. ನಾನು ಯಾವ ಗಳಿಗೆಯಲ್ಲಿ ನಿನ್ನ ಮೇಲೆ ಧಾಳಿ ಮಾಡುತ್ತೇನೆಂದೇ ನಿನಗೆ ತಿಳಿಯದು.
4ಆದರೂ ತಮ್ಮ ಉಡುಪನ್ನು ಮಲಿನ ಮಾಡಿಕೊಳ್ಳದ ಕೆಲವರು ಸಾರ್ದಿಸಿನಲ್ಲಿ ಇದ್ದಾರೆ. ಅಂಥವರು
ಯೋಗ್ಯರಾಗಿರುವುದರಿಂದ ಶ್ವೇತಾಂಬರರಾಗಿ ನನ್ನೊಡನೆ ನಡೆದಾಡುವರು. 5ಜಯಹೊಂದುವವನು
ಹೀಗೆ ಶ್ವೇತಾಂಬರನಾಗುವನು. ಜೀವಬಾಧ್ಯರ ಪಟ್ಟಿಯಿಂದ ಅವನ ಹೆಸರನ್ನು ನಾನು
ಅಳಿಸಿಹಾಕುವುದಿಲ್ಲ. ನನ್ನ ಪಿತನ ಸಾನ್ನಿಧ್ಯದಲ್ಲಿಯೂ ಅವರ ದೂತರ ಮುಂದೆಯೂ ಅವನು
ನನ್ನವನೆಂದು ನಾನು ಒಪ್ಪಿಕೊಳ್ಳುತ್ತೇನೆ.
6 “ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು ಕೇಳಲಿ.”

## ಫಿಲದೆಲ್ಫಿಯ ಸಭೆಗೆ ಸಂದೇಶ

7 “ಫಿಲದೆಲ್ಫಿಯದಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ಸತ್ಯವಂತನೂ ಪರಿಶುದ್ಧನೂ
ಆಗಿರುವಾತನು ನೀಡುವ ಸಂದೇಶವಿದು: ದಾವೀದನ ಮನೆತನದ ಬೀಗದ ಕೈ ನನ್ನಲ್ಲಿ ಇದೆ. ನಾನು
ಬಾಗಿಲನ್ನು ತೆರೆದರೆ ಬೇರೆ ಯಾರೂ ಅದನ್ನು ಮುಚ್ಚಲಾಗದು. ನಾನು ಬಾಗಿಲನ್ನು ಮುಚ್ಚಿದರೆ ಬೇರೆ
ಯಾರೂ ಅದನ್ನು ತೆರೆಯಲಾಗದು. ಈಗ ನಾನು ನಿನಗೆ ಹೇಳುವುದೇನೆಂದರೆ: 8ನಾನು ನಿನ್ನ
ಕೃತ್ಯಗಳನ್ನು ಬಲ್ಲೆ. ನಿನ್ನ ಎದುರಿನಲ್ಲಿ ಬಾಗಿಲೊಂದನ್ನು ತೆರೆದಿಟ್ಟಿದ್ದೇನೆ. ಅದನ್ನು ಮುಚ್ಚಲು
ಯಾರಿಂದಲೂ ಸಾಧ್ಯವಾಗದು. ನಿನ್ನ ಶಕ್ತಿ ಅಲ್ಪವೆಂದು ನನಗೆ ಗೊತ್ತು. ಆದರೂ ನೀನು ನನ್ನನ್ನು
ನಿರಾಕರಿಸದೆ ನನ್ನ ಉಪದೇಶವನ್ನು ಅನುಸರಿಸಿ ನಡೆದಿರುವೆ. 9ತಾವು ಯೆಹೂದ್ಯರೆಂದು ಕೊಚ್ಚಿಕೊಳ್ಳುವ
‘ಸೈತಾನನ ಕೂಟಕ್ಕೆ’ ಸೇರಿದ ಕೆಲವರಿದ್ದಾರೆ. ಆದರೆ ಅವರು ವಾಸ್ತವವಾಗಿ ಯೆಹೂದ್ಯರಲ್ಲ;
ಸುಳ್ಳುಗಾರರು. ಇಗೋ ನೋಡು, ಅವರು ಬಂದು ನಿನ್ನ ಪಾದಗಳಿಗೆ ಅಡ್ಡಬಿದ್ದು ಶರಣಾಗುವಂತೆ
ಮಾಡುತ್ತೇನೆ. ನಿನ್ನ ಬಗ್ಗೆ ನನಗಿರುವ ಪ್ರೀತಿ ಅವರಿಗೆ ತಿಳಿಯುವಂತೆ ಮಾಡುತ್ತೇನೆ.
10ಸ್ಥೈರಣೆಯಿಂದಿರಬೇಕೆಂಬ ನನ್ನ ಉಪದೇಶವನ್ನು ನೀನು ಪಾಲಿಸಿದ್ದರಿಂದ ಭೂಲೋಕದ
ನಿವಾಸಿಗಳೆಲ್ಲರನ್ನು ಪರಿಶೋಧಿಸಲೆಂದು ಇಡೀ ಜಗತ್ತಿನ ಮೇಲೆ ಬರಲಿರುವ ಕಡುಶೋಧನೆಯ
ಕಾಲದಲ್ಲಿ ನಾನು ನಿನ್ನನ್ನು ಸುರಕ್ಷಿತವಾಗಿ ಕಾಪಾಡುತ್ತೇನೆ. 11ನಾನು ಬೇಗನೆ ಬರುತ್ತೇನೆ. ನಿನ್ನ
ಜಯಮಾಲೆಯನ್ನು ಯಾರೂ ಕಸಿದುಕೊಳ್ಳದಂತೆ ನೀನು ಅವಲಂಬಿಸಿರುವುದನ್ನೇ ಆಶ್ರಯಿಸಿಕೊಂಡಿರು.
12ಜಯ ಹೊಂದಿದವನನ್ನು ನನ್ನ ದೇವರ ಆಲಯದ ಸ್ತಂಭವಾಗಿ ನಿಲ್ಲಿಸುತ್ತೇನೆ. ಅವನು ಅಲ್ಲಿಯೇ
ನಿರಂತರವಾಗಿ ಇರುತ್ತಾನೆ. ಅವನ ಮೇಲೆ ನನ್ನ ದೇವರ ನಾಮವನ್ನೂ ನನ್ನ ದೇವರ ನಗರವಾದ
ನೂತನ ಜೆರುಸಲೇಮಿನ ನಾಮವನ್ನೂ ನನ್ನ ಹೊಸ ನಾಮವನ್ನೂ ಬರೆಯುತ್ತೇನೆ. ಈ ನೂತನ
ಜೆರುಸಲೇಮ್ ನನ್ನ ದೇವರ ಸಾನ್ನಿಧ್ಯದಿಂದಲೂ ಸ್ವರ್ಗದಿಂದಲೂ ಇಳಿದು ಬರುತ್ತದೆ.
13 “ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು ಕೇಳಲಿ.”

## ಲವೊದಿಕೀಯ ಸಭೆಗೆ ಸಂದೇಶ

14 “ಲವೊದೊಕೀಯದಲ್ಲಿರುವ ಶ್ರೀಸಭೆಯ ದೂತನಿಗೆ ಹೀಗೆ ಬರೆ: ವಿಶ್ವಾಸಪಾತ್ರನೂ
ಸತ್ಯಸಾಕ್ಷಿಯೂ ದೇವರ ಸೃಷ್ಟಿಗೆ ಮೂಲಾಧಾರನೂ ಆದ ‘ಆಮೆನ್’ ಎಂಬಾತನು ನೀಡುವ
ಸಂದೇಶವಿದು: 15ನಿನ್ನ ಕೃತ್ಯಗಳನ್ನು ನಾನು ಬಲ್ಲೆ. ನೀನು ತಣ್ಣಗೂ ಇಲ್ಲ, ಬಿಸಿಯಾಗೂ ಇಲ್ಲ. ನೀನು
ತಣ್ಣಗಾಗಲಿ, ಬಿಸಿಯಾಗಲಿ ಇದ್ದಿದ್ದರೆ ಚೆನ್ನಾಗಿತ್ತು. 16ನೀನು ತಣ್ಣಗೂ ಇಲ್ಲದೆ ಬಿಸಿಯಾಗೂ ಇಲ್ಲದೆ
ಉಗುರು ಬೆಚ್ಚಗೆ ಇರುವುದರಿಂದ ನಾನು ನಿನ್ನನ್ನು ನನ್ನ ಬಾಯೊಳಗಿಂದ ಕಕ್ಕುತ್ತೇನೆ. 17ನೀನು ನಿನ್ನ
ವಿಷಯವಾಗಿ, ‘ನಾನು ಐಶ್ವರ್ಯವಂತನು, ಸಿರಿಸಂಪತ್ತುಳ್ಳವನು, ಯಾವ ಕೊರತೆಯೂ ಇಲ್ಲದವನು’
ಎಂದು ಹೇಳಿಕೊಳ್ಳುತ್ತಿರುವೆ. ಆದರೆ ನೀನು ನಿರ್ಭಾಗ್ಯನು, ದುರವಸ್ಥೆಯಲ್ಲಿರುವವನು, ದರಿದ್ರನು,

ಕುರುಡನು ಮತ್ತು ಬಟ್ಟೆಬರೆಯಿಲ್ಲದೆ ಬೆತ್ತಲೆಯಾಗಿರುವವನು ಎಂಬುದು ನಿನಗೆ ತಿಳಿಯದು. [18]ಈಗ
ನನ್ನ ಬುದ್ಧಿ ಮಾತುಗಳನ್ನು ಕೇಳು. ನೀನು ಐಶ್ವರ್ಯವಂತನಾಗುವಂತೆ ಬೆಂಕಿಯಲ್ಲಿ ಪುಟವಿಟ್ಟ
ಚಿನ್ನವನ್ನು ನನ್ನಿಂದ ಕೊಂಡುಕೋ. ಲಜ್ಜಾಸ್ಪದವಾದ ನಿನ್ನ ಬೆತ್ತಲೆಯನ್ನು ಮುಚ್ಚಿಕೊಳ್ಳಲು
ಶ್ವೇತವಸ್ತ್ರಗಳನ್ನು ನನ್ನಿಂದ ಕ್ರಯಕ್ಕೆ ಕೊಂಡುಕೊಂಡು ಅವುಗಳನ್ನು ಧರಿಸಿಕೋ. ನಿನಗೆ ಕಣ್ಣು
ಕಾಣಿಸುವಂತೆ ಲೇಪನವನ್ನು ನನ್ನಿಂದ ಬೆಲೆಗೆ ತೆಗೆದುಕೊಂಡು ನಿನ್ನ ಕಣ್ಣುಗಳಿಗೆ ಹಚ್ಚಿಕೋ. [19]ನನ್ನ
ಪ್ರೀತಿಪಾತ್ರರನ್ನು ನಾನು ಖಂಡಿಸುತ್ತೇನೆ ಮತ್ತು ದಂಡಿಸುತ್ತೇನೆ. ಆದುದರಿಂದ ಉತ್ಸಾಹದಿಂದಿರು,
ದೇವರಿಗೆ ಅಭಿಮುಖನಾಗಿರು. [20]ಇಗೋ, ಬಾಗಿಲ ಬಳಿ ನಿಂತು ತಟ್ಟುತ್ತಾ ಇದ್ದೇನೆ. ಯಾವನಾದರೂ
ನನ್ನ ಸ್ವರವನ್ನು ಕೇಳಿಸಿಕೊಂಡು ಬಾಗಿಲನ್ನು ತೆರೆದರೆ ನಾನು ಮನೆಯೊಳಗೆ ಪ್ರವೇಶಿಸುತ್ತೇನೆ. ಅವನ
ಸಂಗಡ ಊಟ ಮಾಡುತ್ತೇನೆ ಮತ್ತು ಅವನೂ ನನ್ನ ಸಂಗಡ ಊಟ ಮಾಡುತ್ತಾನೆ. [21]ನಾನು
ಜಯಗಳಿಸಿ ನನ್ನ ತಂದೆಯೊಡನೆ ಅವರ ಸಿಂಹಾಸನದಲ್ಲಿ ಕುಳಿತುಕೊಂಡಿದ್ದೇನೆ. ಅದೇ ಪ್ರಕಾರ
ಜಯಹೊಂದಿದವನಿಗೆ ನನ್ನೊಡನೆ ನನ್ನ ಸಿಂಹಾಸನದಲ್ಲಿ ಕುಳಿತುಕೊಳ್ಳುವ ಹಕ್ಕನ್ನು ನಾನು ಕೊಡುತ್ತೇನೆ.
22 "ಸಭೆಗಳಿಗೆ ದೇವರಾತ್ಮ ಹೇಳುವುದನ್ನು ಕಿವಿಯುಳ್ಳವನು ಕೇಳಲಿ!"

## ಸ್ವರ್ಗೀಯ ಸಮಾರಾಧನೆ

**4** ಇದಾದ ಬಳಿಕ ಮತ್ತೊಂದು ದಿವ್ಯ ದರ್ಶನವನ್ನು ಕಂಡೆ. ಸ್ವರ್ಗದ ಬಾಗಿಲು ತೆರೆದಿತ್ತು. ಮೊದಲು
ನನ್ನೊಡನೆ ಮಾತನಾಡಿದ ತುತೂರಿಯಂಥ ನಾದವು ನನಗೆ ಕೇಳಿಸಿತು. ಅದು, "ಮೇಲೆ ಬಾ, ಮುಂದೆ
ಸಂಭವಿಸಲಿರುವ ಘಟನೆಗಳನ್ನು ನಿನಗೆ ತೋರಿಸುವೆನು," ಎಂದು ಹೇಳಿತು. [2]ಕೂಡಲೇ, ನಾನು
ದೇವರಾತ್ಮ ವಶನಾದೆ. ಆಗ ಸ್ವರ್ಗದಲ್ಲಿ ಒಂದು ಸಿಂಹಾಸನ ಇರುವುದನ್ನೂ ಅದರಲ್ಲಿ ಒಬ್ಬರು
ಆಸೀನರಾಗಿರುವುದನ್ನೂ ಕಂಡೆ. [3]ಅವರ ಮುಖ ಸೂರ್ಯಕಾಂತ ಮತ್ತು ಪದ್ಮರಾಗ ಹರಳುಗಳಂತೆ
ಹೊಳೆಯುತ್ತಿತ್ತು. ಸಿಂಹಾಸನದ ಸುತ್ತಲೂ ಮರಕತದಂತೆ ಹೊಳೆಯುವ ಮುಗಿಲುಬಿಲ್ಲೊಂದು
ಹೊಳೆಯುತ್ತಿತ್ತು. [4]ಈ ಸಿಂಹಾಸನದ ಸುತ್ತಲೂ ಇಪ್ಪತ್ನಾಲ್ಕು ಪೀಠಗಳು ಇದ್ದವು. ಶ್ವೇತವಸ್ತ್ರಧಾರಿಗಳಾದ
ಇಪ್ಪತ್ನಾಲ್ಕು ಮಂದಿ ಸಭಾಪ್ರಮುಖರು ಆ ಪೀಠಗಳಲ್ಲಿ ಕುಳಿತಿದ್ದರು. ಅವರು ತಮ್ಮ ತಲೆಗಳ ಮೇಲೆ
ಚಿನ್ನದ ಕಿರೀಟಗಳನ್ನು ಧರಿಸಿದ್ದರು. [5]ಸಿಂಹಾಸನದಿಂದ ಮಿಂಚು, ಗುಡುಗು, ಗರ್ಜನೆಗಳು ಹೊರ
ಹೊಮ್ಮುತ್ತಿದ್ದವು. ಆ ಸಿಂಹಾಸನದ ಮುಂದೆ ದೇವರ ಸಪ್ತ ಆತ್ಮಗಳನ್ನು ಸೂಚಿಸುವ ಸಪ್ತದೀಪಗಳು
ಬೆಳಗುತ್ತಿದ್ದವು. [6]ಇದಲ್ಲದೆ, ಸಿಂಹಾಸನದ ಮುಂದೆ ಸ್ಫಟಿಕದಂಥ ಗಾಜಿನ ಸಮುದ್ರವೊಂದು ಇದ್ದಂತೆ
ಕಂಡು ಬಂದಿತು.

ಸಿಂಹಾಸನದ ಸುತ್ತಲೂ ಅದರ ನಾಲ್ಕು ಪಾರ್ಶ್ವಗಳಲ್ಲಿ ನಾಲ್ಕು ಜೀವಿಗಳು ಇದ್ದವು. ಅವುಗಳಿಗೆ
ಮುಂದೆಯೂ ಹಿಂದೆಯೂ ಅನೇಕ ಕಣ್ಣುಗಳಿದ್ದವು. [7]ಮೊದಲನೆಯ ಜೀವಿ ಸಿಂಹದಂತೆ ಇತ್ತು.
ಎರಡನೆಯ ಜೀವಿ ಹೋರಿಯಂತಿತ್ತು. ಮೂರನೆಯ ಜೀವಿಯ ಮುಖವು ಮನುಷ್ಯನ ಮುಖದಂತಿತ್ತು
ಮತ್ತು ನಾಲ್ಕನೆಯ ಜೀವಿಯು ಹಾರುತ್ತಿರುವ ಗರುಡ ಪಕ್ಷಿಯಂತಿತ್ತು. [8]ಆ ನಾಲ್ಕು ಜೀವಿಗಳಲ್ಲಿ
ಪ್ರತಿಯೊಂದಕ್ಕೂ ಆರು ರೆಕ್ಕೆಗಳಿದ್ದವು. ಅವುಗಳ ಸುತ್ತಲು ಮತ್ತು ಒಳಗು ಅನೇಕ ಕಣ್ಣುಗಳಿದ್ದವು. ಆ
ಜೀವಿಗಳು ಹಗಲಿರುಳೂ:

"ಪರಿಶುದ್ಧರು, ಪರಿಶುದ್ಧರು, ಪರಿಶುದ್ಧರು!
ಸರ್ವಶಕ್ತರಾದ ಪ್ರಭು ದೇವರು
ವರ್ತಮಾನಕಾಲದಲ್ಲಿ ಇರುವವರೂ
ಭೂತಕಾಲದಲ್ಲಿ ಇದ್ದವರೂ
ಭವಿಷ್ಯತ್ ಕಾಲದಲ್ಲಿ ಬರುವವರೂ

ಆಗಿದ್ದಾರೆ,"
ಎಂದು ಹಾಡುತ್ತಿದ್ದವು.

9 ಯುಗಯುಗಾಂತರಕ್ಕೂ ಜೀವಿಸುವ ಹಾಗೂ ಸಿಂಹಾಸನರೂಢರಾಗಿರುವ ವ್ಯಕ್ತಿಗೆ ಆ ಜೀವಿಗಳು ಘನತೆ, ಗೌರವ ಮತ್ತು ಕೃತಜ್ಞತಾಸ್ತುತಿಗಳನ್ನು ಸಲ್ಲಿಸುತ್ತಿದ್ದವು. 10ಆ ಇಪ್ಪತ್ನಾಲ್ಕು ಸಭಾ ಪ್ರಮುಖರು ತಮ್ಮ ಕಿರೀಟಗಳನ್ನು ತೆಗೆದು ಬದಿಗಿಟ್ಟು, ಸರ್ವಕಾಲಕ್ಕೂ ಜೀವಿಸುವ ಹಾಗೂ ಸಿಂಹಾಸನದಲ್ಲಿ ಆಸೀನರಾಗಿದ್ದ ವ್ಯಕ್ತಿಯ ಪಾದಗಳಿಗೆ ಅಡ್ಡಬಿದ್ದು ಯುಗಯುಗಾಂತರಗಳಲ್ಲಿಯೂ ಜೀವಿಸುವವರನ್ನು ಆರಾಧಿಸುತ್ತಾ:

11 "ನೀನೆಮ್ಮ ಪ್ರಭು ಹೇ ದೇವಾ,
ಘನಮಾನ ಶಕ್ತಿಸನ್ಮಾನಗಳಿಗರ್ಹ,
ಸಮಸ್ತವನು ನೀ ಸೃಷ್ಟಿಸಿದಾತ
ಇರುವುದೆಲ್ಲವು ಜೀವಿಪುದೆಲ್ಲವು ನಿನ್ನ
ಚಿತ್ತದಿಂದ,"
ಎಂದು ಹಾಡುತ್ತಿದ್ದರು.

## ಸುರುಳಿಯೂ ಕುರಿಮರಿಯೂ

**5** ನಾನು ಈ ದೃಶ್ಯವನ್ನು ಸಹ ಕಂಡೆ: ಸಿಂಹಾಸನದಲ್ಲಿ ಆಸೀನರಾಗಿರುವವರ ಬಲಗೈಯಲ್ಲಿ ಒಂದು ಸುರುಳಿ ಇತ್ತು. ಅದರ ಒಳಭಾಗದಲ್ಲೂ ಹೊರಭಾಗದಲ್ಲೂ ಬರೆಯಲಾಗಿತ್ತು. ಅದನ್ನು ಏಳು ಮುದ್ರೆಗಳಿಂದ ಮುದ್ರಿಸಲಾಗಿತ್ತು. 2ಬಲಿಷ್ಠ ದೇವದೂತನೊಬ್ಬನು ಮಹಾಶಬ್ದದಿಂದ, "ಈ ಮುದ್ರೆಗಳನ್ನು ಒಡೆದು ಸುರುಳಿಯನ್ನು ಬಿಚ್ಚಲು ಯೋಗ್ಯನು ಯಾರು?" ಎಂದು ಪ್ರಕಟಿಸಿದನು. 3ಸ್ವರ್ಗದಲ್ಲಾಗಲಿ, ಭೂಮಿಯಲ್ಲಾಗಲಿ, ಪಾತಾಳದಲ್ಲಾಗಲಿ, ಆ ಸುರುಳಿಯನ್ನು ಬಿಚ್ಚುವುದಕ್ಕೂ ಇಲ್ಲವೆ ಅದನ್ನು ಬಿಚ್ಚಿನೋಡುವುದಕ್ಕೂ ಯಾರಿಂದಲೂ ಸಾಧ್ಯವಾಗಲಿಲ್ಲ. 4ಆ ಸುರುಳಿಯನ್ನು ಬಿಚ್ಚಲೂ ನೋಡಲೂ ಯೋಗ್ಯನು ಒಬ್ಬನೂ ಇಲ್ಲವಲ್ಲ ಎಂದು ನಾನು ಬಹುವಾಗಿ ದುಃಖಿಸಿದೆ. 5ಆಗ ಸಭಾ ಪ್ರಮುಖರಲ್ಲಿ ಒಬ್ಬರು ನನಗೆ, "ದುಃಖಿಸಬೇಡ, ಇಗೋ, ಯೂದಕುಲದ ಸಿಂಹವೂ ದಾವೀದನ ವಂಶಜರೂ ಆದ ಒಬ್ಬರು ಜಯಗಳಿಸಿದ್ದಾರೆ. ಅವರು ಆ ಏಳು ಮುದ್ರೆಗಳನ್ನು ಒಡೆದು ಈ ಸುರುಳಿಯನ್ನು ಬಿಚ್ಚಬಲ್ಲರು", ಎಂದು ಹೇಳಿದರು.

6 ಸಿಂಹಾಸನವೂ ನಾಲ್ಕು ಜೀವಿಗಳೂ ಇದ್ದ ಸ್ಥಳಕ್ಕೂ ಮತ್ತು ಸಭಾಪ್ರಮುಖರಿದ್ದ ಸ್ಥಳಕ್ಕೂ ನಡುವೆ ಒಂದು ಕುರಿಮರಿ ನಿಂತಿರುವುದನ್ನು ಕಂಡೆ. ಅದು ಈಗಾಗಲೇ ಬಲಿಗೋಸ್ಕರ ವಧೆಯಾಗಿದ್ದಂತೆ ಕಾಣುತ್ತಿತ್ತು. ಆ ಕುರಿಮರಿಗೆ ಏಳು ಕೊಂಬುಗಳೂ ಏಳು ಕಣ್ಣುಗಳೂ ಇದ್ದವು. ಇಡೀ ಜಗತ್ತಿಗೆ ಕಳುಹಿಸಲಾದ ದೇವರ ಸಪ್ತ ಆತ್ಮಗಳೇ ಅವು. 7ಆ ಯಜ್ಞದ ಕುರಿಮರಿಯಾದವರು ಮುಂದೆ ಬಂದು ಸಿಂಹಾಸನದಲ್ಲಿ ಆಸೀನರಾಗಿದ್ದವರ ಬಲಗೈಯಲ್ಲಿದ್ದ ಸುರುಳಿಯನ್ನು ತೆಗೆದುಕೊಂಡರು. 8ಸುರುಳಿಯನ್ನು ತೆಗೆದುಕೊಂಡಾಗ, ನಾಲ್ಕು ಜೀವಿಗಳೂ ಇಪ್ಪತ್ನಾಲ್ಕು ಮಂದಿ ಸಭಾಪ್ರಮುಖರೂ ಆ ಯಜ್ಞದ ಕುರಿಮರಿಯ ಪಾದಗಳಿಗೆ ಸಾಷ್ಟಾಂಗ ನಮಸ್ಕಾರ ಮಾಡಿದರು. ಸಭಾಪ್ರಮುಖರ ಕೈಗಳಲ್ಲಿ ಕಿನ್ನರಿಯೂ ಚಿನ್ನದ ಧೂಪಾರತಿಗಳೂ ಇದ್ದವು. ಆ ಧೂಪಾರತಿಗಳಲ್ಲಿ ದೇವಜನರ ಪ್ರಾರ್ಥನೆಯೆಂಬ ಧೂಪವು ತುಂಬಿತ್ತು. 9ಅವರು ಈ ಹೊಸ ಗೀತೆಯನ್ನು ಹಾಡುತ್ತಿದ್ದರು:

"ಸುರುಳಿಯನ್ನು ಸ್ವೀಕರಿಸಲು ನೀ ಯೋಗ್ಯನು
ಅದರ ಮುದ್ರೆಗಳನ್ನು ಮುರಿಯಲು
ನೀ ಶಕ್ತನು.

ಸಮರ್ಪಿಸಿಕೊಂಡಿರುವೆ ನಿನ್ನನ್ನೇ ನೀ
ಬಲಿಯರ್ಪಣೆಯಾಗಿ
ಸಕಲ ದೇಶ, ಭಾಷೆ, ಕುಲಗೋತ್ರಗಳಿಂದ
ಕೊಂಡುಕೊಂಡಿರುವೆ ಮಾನವರನು ನಿನ್ನ
ರಕ್ತದಿಂದ.
10 ಏರ್ಪಡಿಸಿದೆ ನೀ ಅವರನು ನಮ್ಮ
ದೇವರಿಗೋಸ್ಕರ
ರಾಜವಂಶವಾಗಿ, ಯಾಜಕವರ್ಗವಾಗಿ.
ಆಳುವರವರು ಸಮಸ್ತ ಭುವಿಯ ಮೇಲೆ."

11 ಅನಂತರ ಅವರ ಸಿಂಹಾಸನದ, ನಾಲ್ಕು ಜೀವಿಗಳ ಹಾಗೂ ಸಭಾಪ್ರಮುಖರ ಸುತ್ತಲೂ ನಿಂತಿದ್ದ ಬಹುಮಂದಿ ದೇವದೂತರ ಸ್ವರವನ್ನು ಕೇಳಿಸಿಕೊಂಡೆ. ಅವರ ಸಂಖ್ಯೆ ಲಕ್ಷೋಪಲಕ್ಷವಾಗಿಯೂ ಕೋಟ್ಯಾನುಕೋಟಿಯಾಗಿಯೂ ಇತ್ತು.
12 ಅವರೆಲ್ಲರೂ ಉಚ್ಛಕಂಠದಿಂದ:
"ವಧಿತ ಕುರಿಮರಿಯಾದಾತನು
ಶಕ್ತಿಯನು, ಸಿರಿತನವನು
ಗೌರವವನು, ಘನಮಾನವನು
ಸ್ತುತಿಯನು, ಸುಜ್ಞಾನವನು
ಹೊಂದಲು ಯೋಗ್ಯನು,"
ಎಂದು ಹಾಡಿದರು. 13ಇದಲ್ಲದೆ, ಸ್ವರ್ಗ, ಭೂಮಿ, ಪಾತಾಳಗಳಲ್ಲೂ ಸಮುದ್ರದಲ್ಲೂ ಇರುವ ಸಮಸ್ತ
ಸೃಷ್ಟಿಗಳು ಹೀಗೆ ಹಾಡುವುದನ್ನು ಕೇಳಿಸಿಕೊಂಡೆ:
"ಸಿಂಹಾಸನದಲ್ಲಿ ಕುಳಿತವನಿಗೆ,
ಯಜ್ಞಕುರಿಮರಿಯಾದಾತನಿಗೆ
ಸಲ್ಲಲಿ ಯುಗಯುಗಾಂತರಕ್ಕೆ
ಘನಮಾನ, ಗೌರವ, ಪರಾಕ್ರಮ,
ಮತ್ತು ಮಹಿಮೆ."
14ಇದಕ್ಕುತ್ತರವಾಗಿ ಆ ನಾಲ್ಕು ಜೀವಿಗಳು, 'ಆಮೆನ್' ಎಂದು ಹೇಳಿದವು. ಸಭಾಪ್ರಮುಖರು ಸಾಷ್ಟಾಂಗವೆರಗಿ ನಮಸ್ಕಾರಮಾಡಿ ಆರಾಧಿಸಿದರು.

## ಏಳು ಮುದ್ರೆಗಳ ಭಂಗ

**6** ಇದನ್ನೂ ನಾನು ಕಂಡೆ: ಯಜ್ಞದ ಕುರಿಮರಿಯಾದಾತನು ಏಳು ಮುದ್ರೆಗಳಲ್ಲಿ ಒಂದನ್ನು ಒಡೆದನು. ಆ ನಾಲ್ಕು ಜೀವಿಗಳಲ್ಲಿ ಒಂದು ಜೀವಿ ಗುಡುಗಿನಂತಿದ್ದ ಸ್ವರದಿಂದ, "ಇಲ್ಲಿ ಬಾ," ಎಂದು
ಕರೆಯುವುದನ್ನು ನಾನು ಕೇಳಿಸಿಕೊಂಡೆ. 2ಆಗ ಬಿಳಿಯ ಕುದುರೆಯೊಂದು ಕಾಣಿಸಿತು. ಅದರ ಮೇಲೆ
ಕುಳಿತಿದ್ದವನ ಕೈಯಲ್ಲಿ ಬಿಲ್ಲೊಂದು ಇತ್ತು. ಅವನಿಗೆ ಜಯಮಾಲೆಯನ್ನು ಹಾಕಲಾಗಿತ್ತು. ಅವನು ಜಯಪ್ರದನಾಗಿ, ಜಯದ ಮೇಲೆ ಜಯಗಳಿಸುವ ಸಲುವಾಗಿ ಹೊರಟು ಹೋದನು.

3 ಅನಂತರ ಯಜ್ಞದ ಕುರಿಮರಿಯು ಎರಡನೆಯ ಮುದ್ರೆಯನ್ನು ಒಡೆದಾಗ, ಎರಡನೆಯ ಜೀವಿಯು, "ಇಲ್ಲಿ ಬಾ," ಎಂದು ಕರೆಯುವುದನ್ನು ನಾನು ಕೇಳಿಸಿಕೊಂಡೆ. 4ಆಗ ಕೆಂಪು ಕುದುರೆ
ಒಂದು ಹೊರಟುಬಂದಿತು. ಅದರ ಮೇಲೆ ಒಬ್ಬನು ಕುಳಿತಿದ್ದನು. ವಿಶ್ವದಲ್ಲಿ ಶಾಂತಿಯನ್ನು ಅಳಿಸಿಹಾಕಿ

ಲೋಕದ ಜನರು ಒಬ್ಬರನ್ನೊಬ್ಬರು ಕೊಲ್ಲುವಂತೆ ಮಾಡುವ ಅಧಿಕಾರವನ್ನು ಅವನಿಗೆ ಕೊಡಲಾಗಿತ್ತು. ಇದಲ್ಲದೆ, ಅವನಿಗೆ ದೊಡ್ಡ ಖಡ್ಗವನ್ನೂ ಸಹ ಕೊಡಲಾಗಿತ್ತು.

5 ಆ ಯಜ್ಞದ ಕುರಿಮರಿ ಮೂರನೆಯ ಮುದ್ರೆಯನ್ನು ಒಡೆದಾಗ, ಮೂರನೆಯ ಜೀವಿಯು, "ಇಲ್ಲಿ ಬಾ," ಎಂದು ಕರೆಯುವುದನ್ನು ನಾನು ಕೇಳಿಸಿಕೊಂಡೆ. ಆಗ ಕಪ್ಪು ಕುದುರೆಯೊಂದು ಕಾಣಿಸಿತು. ಅದರ ಮೇಲೆ ಕುಳಿತಿದ್ದವನ ಕೈಯಲ್ಲಿ ತಕ್ಕಡಿ ಇತ್ತು. [6]ನಾಲ್ಕು ಜೀವಿಗಳ ಮಧ್ಯದಿಂದ ಹೊರಟಿತೋ ಎಂಬಂತೆ ಒಂದು ಧ್ವನಿ ನನಗೆ ಕೇಳಿಸಿತು. ಅದು "ದಿನದ ಕೂಲಿಗೆ ಒಂದು ಕಿಲೋ ಗ್ರಾಂ ಗೋದಿ; ದಿನದ ಕೂಲಿಗೆ ಮೂರು ಕಿಲೋಗ್ರಾಂ ಜವೆಗೋದಿ; ಆದರೆ ಎಣ್ಣೆಯನ್ನಾಗಲಿ, ದ್ರಾಕ್ಷಾರಸವನ್ನಾಗಲಿ ಕೆಡಿಸಬೇಡ," ಎಂದು ಹೇಳಿತು.

7 ಆ ಯಜ್ಞದ ಕುರಿಮರಿ ನಾಲ್ಕನೆಯ ಮುದ್ರೆಯನ್ನು ಒಡೆದಾಗ, ನಾಲ್ಕನೆಯ ಜೀವಿ "ಇಲ್ಲಿ ಬಾ", ಎಂದು ಕರೆಯುವುದನ್ನು ನಾನು ಕೇಳಿಸಿಕೊಂಡೆ. [8]ಆಗ ಬೂದು ಕುದುರೆಯೊಂದು ಕಾಣಿಸಿತು. ಅದರ ಮೇಲೆ ಕುಳಿತಿದ್ದವನ ಹೆಸರು, 'ಮೃತ್ಯು' ಎಂದು. ಅವನನ್ನು 'ಮೃತ್ಯುಲೋಕ' ಎಂಬಾತನು ಹಿಂಬಾಲಿಸಿದನು. ಇವರಿಗೆ ಖಡ್ಗ, ಕ್ಷಾಮ, ಅಂಟುಜಾಡ್ಯ, ಕಾಡುಮೃಗ ಇವುಗಳಿಂದ ಭೂಲೋಕದ ಕಾಲುಭಾಗದ ಜನತೆಯನ್ನು ಕೊಂದುಹಾಕುವುದಕ್ಕೆ ಅಧಿಕಾರವನ್ನು ಕೊಡಲಾಗಿತ್ತು.

9 ಯಜ್ಞದ ಕುರಿಮರಿಯಾದಾತ ಐದನೆಯ ಮುದ್ರೆಯನ್ನು ಒಡೆದನು. ದೇವರ ಸಂದೇಶವನ್ನು ಸಾರಿದ ಪ್ರಯುಕ್ತ ಮತ್ತು ಪ್ರಾಮಾಣಿಕ ಸಾಕ್ಷ್ಯದ ಪ್ರಯುಕ್ತ ಹತರಾದವರ ಆತ್ಮಗಳು ಬಲಿಪೀಠದ ಕೆಳಗೆ ಇರುವುದನ್ನು ನಾನು ಕಂಡೆ. [10]ಅವರು ಆರ್ತಧ್ವನಿಯಿಂದ, "ಸರ್ವಶಕ್ತ ಪ್ರಭುವೇ, ಸತ್ಯವಂತರೇ, ಪರಿಶುದ್ಧರೇ, ನಮ್ಮನ್ನು ಕೊಲೆಮಾಡಿದ ಭೂನಿವಾಸಿಗಳಿಗೆ ಇನ್ನೆಷ್ಟು ಕಾಲ ನ್ಯಾಯವಿಚಾರಣೆ ಮಾಡದೆ, ಸೇಡನ್ನು ತೀರಿಸಿಕೊಳ್ಳದೆ ಇರುತ್ತೀರಿ?" ಎಂದು ಕೇಳಿದರು. [11]ಅವರಲ್ಲಿ ಪ್ರತಿಯೊಬ್ಬನಿಗೂ ಬಿಳಿಯ ನಿಲುವಂಗಿಯನ್ನು ಕೊಡಲಾಗಿತ್ತು. ಅಲ್ಲದೆ ಅವರಿಗೆ, "ಇನ್ನು ತುಸು ಕಾಲ ಕಾದುಕೊಂಡಿರಿ, ನಿಮ್ಮ ಹಾಗೆಯೇ ಹತರಾಗಬೇಕಾಗಿರುವ ನಿಮ್ಮ ಸಹೋದರರ ಮತ್ತು ಜೊತೆ ಸೇವಕರ ಪಟ್ಟಿಯು ಭರ್ತಿಯಾಗುವ ತನಕ ವಿಶ್ರಮಿಸಿ," ಎಂದು ತಿಳಿಸಲಾಯಿತು.

12 ಆ ಯಜ್ಞದ ಕುರಿಮರಿ ಆರನೆಯ ಮುದ್ರೆಯನ್ನು ಒಡೆದಾಗ, ದೊಡ್ಡ ಭೂಕಂಪವಾಯಿತು. ಸೂರ್ಯನು ಕರಿಕಂಬಳಿಯಂತೆ ಕಪ್ಪಾದನು. ಪೂರ್ಣಚಂದ್ರನು ರಕ್ತದಂತೆ ಕೆಂಪಾದನು. [13]ಬಿರುಗಾಳಿಯಿಂದ ಅಂಜೂರ ಮರದ ಕಾಯಿಗಳು ಉದುರಿಬೀಳುವಂತೆ ನಕ್ಷತ್ರಗಳು ಆಕಾಶದಿಂದ ಭೂಮಿಗೆ ಬಿದ್ದವು. [14]ಆಕಾಶವು ಸುರುಳಿಯಂತೆ ಸುತ್ತಿಕೊಂಡು ಕಣ್ಮರೆಯಾಯಿತು. ಎಲ್ಲಾ ಪರ್ವತಗಳೂ ದ್ವೀಪಗಳೂ ತಮ್ಮ ತಮ್ಮ ಸ್ಥಳಗಳಿಂದ ಚಲಿಸಿದವು. [15]ಭೂರಾಜರು, ಅಧಿಪತಿಗಳು, ಸೇನಾನಾಯಕರು, ಸಿರಿವಂತರು, ಪರಾಕ್ರಮಿಗಳು, ದಾಸರು, ಸ್ವತಂತ್ರರು ಎಲ್ಲರೂ ಓಡಿಹೋಗಿ ಬೆಟ್ಟಗಳ ಗವಿಗಳಲ್ಲೂ ಮತ್ತು ಬಂಡೆಗಳ ಸಂದುಗಳಲ್ಲೂ ಅವಿತುಕೊಂಡರು. [16]ಅವರು ಆ ಬೆಟ್ಟಗಳನ್ನೂ ಬಂಡೆಗಳನ್ನೂ ಉದ್ದೇಶಿಸಿ, "ನಮ್ಮ ಮೇಲೆ ಬೀಳಿ; ಸಿಂಹಾಸನದಲ್ಲಿ ಆಸೀನರಾಗಿರುವವರ ಸಮ್ಮುಖದಿಂದಲೂ ಯಜ್ಞದ ಕುರಿಮರಿಯಾದಾತನ ಕೋಪಾಗ್ನಿಯಿಂದಲೂ ನಮ್ಮನ್ನು ಮರೆಮಾಡಿ; [17]ಏಕೆಂದರೆ, ಅವರ ಕೋಪಾಗ್ನಿಯ ಘೋರ ದಿನವು ಬಂದಿದೆ. ಅದರ ಮುಂದೆ ನಿಲ್ಲುವುದಕ್ಕೆ ಯಾರು ತಾನೇ ಶಕ್ತರು?" ಎಂದು ಹಲುಬಿದರು.

### ಮುದ್ರೆಯೊತ್ತಿಸಿಕೊಂಡ ಮಹಾನುಭಾವರು

**7** ಇದಾದ ಬಳಿಕ ನಾನು ಮತ್ತೊಂದು ದಿವ್ಯದರ್ಶನವನ್ನು ಕಂಡೆ; ನಾಲ್ಕು ಮಂದಿ ದೇವದೂತರು ಭೂಮಿಯ ನಾಲ್ಕು ದಿಕ್ಕುಗಳಲ್ಲಿ ನಿಂತಿದ್ದರು. ಭೂಮಿಯ ಮೇಲಾಗಲಿ, ಸಮುದ್ರದ ಮೇಲಾಗಲಿ, ಮರಗಳ ಮೇಲಾಗಲಿ, ಗಾಳಿಬೀಸದಂತೆ ಭೂಮಿಯ ನಾಲ್ಕು ದಿಕ್ಕಿನ ಗಾಳಿಯನ್ನು ಅವರು

ತಡೆಹಿಡಿದಿದ್ದರು. [2]ಆಗ ಪೂರ್ವದಿಕ್ಕಿನಿಂದ ಮತ್ತೊಬ್ಬ ದೇವದೂತನು ಏರಿಬಂದನು. ಅವನು
ಜೀವಸ್ವರೂಪಿಯಾದ ದೇವರ ಮುದ್ರೆಯನ್ನು ಕೈಯಲ್ಲಿ ಹಿಡಿದಿದ್ದನು. ಅವನು ಭೂಮಿಗೂ ಸಮುದ್ರಕ್ಕೂ
ಕೇಡನ್ನು ಮಾಡುವ ಅಧಿಕಾರವನ್ನು ಪಡೆದಿದ್ದ ನಾಲ್ಕು ಮಂದಿ ದೇವದೂತರಿಗೆ: [3]"ನಮ್ಮ ದೇವರ
ದಾಸರಿಗೆ ಹಣೆಯ ಮೇಲೆ ನಾವು ಮುದ್ರೆಯೊತ್ತುವ ತನಕ ಭೂಮಿಗಾಗಲಿ, ಸಮುದ್ರಕ್ಕಾಗಲಿ, ಇಲ್ಲವೇ
ಮರಗಳಿಗಾಗಲಿ ಕೇಡನ್ನು ಮಾಡಬೇಡಿ," ಎಂದು ಗಟ್ಟಿಯಾಗಿ ಕೂಗಿ ಹೇಳಿದನು.
[4]ಮುದ್ರೆಯೊತ್ತಿಸಿಕೊಂಡವರ ಸಂಖ್ಯೆ ನನಗೆ ಕೇಳಿಬಂತು. ಇಸ್ರಯೇಲರು ಪ್ರತಿಯೊಂದು ಕುಲದಲ್ಲಿ
ಮುದ್ರೆಯೊತ್ತಿಸಿಕೊಂಡವರು ಒಂದು ಲಕ್ಷದ ನಲವತ್ತ ನಾಲ್ಕು ಸಾವಿರ ಮಂದಿ. ಅವರ ಬಿಡಿ ಸಂಖ್ಯೆ
ಹೀಗಿತ್ತು:

[5] ಯೂದನ ಕುಲದಿಂದ ಹನ್ನೆರಡು ಸಾವಿರ
ರೂಬೇನನ ಕುಲದಿಂದ ಹನ್ನೆರಡು ಸಾವಿರ
ಗಾದನ ಕುಲದಿಂದ ಹನ್ನೆರಡು ಸಾವಿರ
[6] ಅಷೇರನ ಕುಲದಿಂದ ಹನ್ನೆರಡು ಸಾವಿರ
ನೆಫ್ತಲೀಮನ ಕುಲದಿಂದ ಹನ್ನೆರಡು ಸಾವಿರ
ಮನಸ್ಸೆಯ ಕುಲದಿಂದ ಹನ್ನೆರಡು ಸಾವಿರ
[7] ಸಿಮೆಯೋನನ ಕುಲದಿಂದ ಹನ್ನೆರಡು ಸಾವಿರ
ಲೇವಿಯ ಕುಲದಿಂದ ಹನ್ನೆರಡು ಸಾವಿರ
ಇಸ್ಸಾಕರನ ಕುಲದಿಂದ ಹನ್ನೆರಡು ಸಾವಿರ
[8] ಜೆಬುಲೋನನ ಕುಲದಿಂದ ಹನ್ನೆರಡು ಸಾವಿರ
ಜೋಸೆಫನ ಕುಲದಿಂದ ಹನ್ನೆರಡು ಸಾವಿರ
ಬೆನ್ಯಮೀನನ ಕುಲದಿಂದ ಹನ್ನೆರಡು ಸಾವಿರ

## ಸ್ವರ್ಗೀಯ ಸೌಭಾಗ್ಯ

9 ಇದಾದ ಬಳಿಕ ನಾನು ಇನ್ನೊಂದು ದಿವ್ಯದರ್ಶನವನ್ನು ಕಂಡೆ: ಯಾರಿಂದಲೂ
ಎಣಿಸಲಾಗದಷ್ಟು ಒಂದು ದೊಡ್ಡ ಜನಸಮೂಹವು ನೆರೆದಿತ್ತು. ಅವರು ಎಲ್ಲಾ ದೇಶ, ಭಾಷೆ, ಕುಲ,
ಗೋತ್ರಗಳಿಂದ ಬಂದವರಾಗಿದ್ದರು. ಶ್ವೇತಾಂಬರರಾಗಿ ಸಿಂಹಾಸನದ ಮತ್ತು ಯಜ್ಞದ
ಕುರಿಮರಿಯಾದಾತನ ಸಾನ್ನಿಧ್ಯದಲ್ಲಿ ನಿಂತಿದ್ದರು. ಕೈಗಳಲ್ಲಿ ಖರ್ಜೂರದ ಗರಿಗಳನ್ನು ಹಿಡಿದಿದ್ದರು.
[10] ಅವರು ಗಟ್ಟಿಯಾದ ಧ್ವನಿಯಿಂದ:

"ಸಿಂಹಾಸನಾರೂಢರಾದ ದೇವರಿಂದ,
ಬಲಿಯರ್ಪಿತರಾದ ಯಜ್ಞದ ಕುರಿಮರಿಯಿಂದ
ಲಭಿಸುತ್ತದೆಮಗೆ ಜೀವೋದ್ಧಾರ,"
ಎಂದು ಹಾಡಿದರು.

[11]ಆಗ ಸಭಾಪ್ರಮುಖರ ಮತ್ತು ನಾಲ್ಕು ಜೀವಿಗಳ ಸಮೇತ ದೇವದೂತರೆಲ್ಲರೂ ಸಿಂಹಾಸನದ ಸುತ್ತಲೂ
ನಿಂತಿದ್ದರು. ಅವರೆಲ್ಲರೂ ಸಿಂಹಾಸನದ ಮುಂದೆ ಸಾಷ್ಟಾಂಗ ನಮಸ್ಕಾರ ಮಾಡಿ,

[12] "ಆಮೆನ್, ಸ್ತುತಿಸ್ತೋತ್ರವೂ ಘನಮಾನವೂ
ಜ್ಞಾನವೂ ಧನ್ಯವಾದವೂ
ಶಕ್ತಿಯೂ ಪರಾಕ್ರಮವೂ
ಸಲ್ಲಲಿ ಯುಗಯುಗಾಂತರಕ್ಕೂ ಆಮೆನ್,"

ಎಂದು ಹಾಡುತ್ತಾ ದೇವರನ್ನು ಆರಾಧಿಸಿದರು.

13 ಸಭಾಪ್ರಮುಖರಲ್ಲಿ ಒಬ್ಬನು, "ಶ್ವೇತಾಂಬರರಾದ ಇವರೆಲ್ಲರೂ ಯಾರು? ಎಲ್ಲಿಂದ ಬಂದರು?" ಎಂದು ನನ್ನನ್ನು ಪ್ರಶ್ನಿಸಿದನು. 14ಅದಕ್ಕೆ ನಾನು, "ಸ್ವಾಮಿ ನೀವೇ ಬಲ್ಲಿರಿ", ಎಂದು ಉತ್ತರಕೊಟ್ಟೆ. ಆಗ ಆತನು ನನಗೆ ಹೀಗೆಂದನು: "ಇವರು ಆ ಭೀಕರ ಹಿಂಸೆ ಬಾಧೆಯನ್ನು ಅನುಭವಿಸಿ ಬಂದವರು. ತಮ್ಮ ನಿಲುವಂಗಿಗಳನ್ನು ಯಜ್ಞದ ಕುರಿಮರಿಯ ರಕ್ತದಿಂದ ತೊಳೆದು ಬಿಳುಪಾಗಿಸಿಕೊಂಡಿದ್ದಾರೆ.

15 'ಇರುವರು ದೇವರ ಸಿಂಹಾಸನದ
ಸಮ್ಮುಖದಲ್ಲೇ
ಆರಾಧಿಪರಾತನನು ಹಗಲಿರುಳು
ದೇವಾಲಯದಲ್ಲೇ
ಸಂರಕ್ಷಿಪನಾತನು ಅವರನ್ನು ಗುಡಾರದಂತೆ.
16 ಇನ್ನಿರದು ಅವರಿಗೆ ಹಸಿವು ಬಾಯಾರಿಕೆ
ತಟ್ಟದವರನು ಬಿಸಿಲಿನ ತಾಪ,
ಸೂರ್ಯನ ಕೋಪ.
17 ನಿಂತಿಹನು ಕುರಿಮರಿಯಾದಾತನು
ಸಿಂಹಾಸನದ ನಡುವೆ
ಕಾಯುವನು ಅವರುಗಳನು ಕುರುಬನಂತೆ
ನಡೆಸುವನು ಅವರನು ಜೀವಜಲದ
ಒರತೆಗಳ ಬಳಿಗೆ
ದೇವನೊರಸುವನು ಅವರ
ಕಂಬನಿಗಳನು ಬಿಡದೆ'."

ಎಂದು ನನಗೆ ತಿಳಿಸಿದನು.

### ದೇವಸನ್ನಿಧಿಯಲ್ಲಿ ದೇವಜನರ ಪ್ರಾರ್ಥನೆ

**8** ಆ ಯಜ್ಞದ ಕುರಿಮರಿ ಏಳನೆಯ ಮುದ್ರೆಯನ್ನು ಒಡೆದಾಗ ಸ್ವರ್ಗದಲ್ಲಿ ಅರ್ಧ ಗಂಟೆಯವರೆಗೆ
ಮೌನವುಂಟಾಯಿತು. 2ಬಳಿಕ ನಾನು, ದೇವರ ಸಾನ್ನಿಧ್ಯದಲ್ಲಿ ನಿಂತಿದ್ದ ಏಳು ದೇವದೂತರನ್ನು ಕಂಡೆ.
ಅವರಿಗೆ ಏಳು ತುತೂರಿಗಳನ್ನು ಕೊಡಲಾಗಿತ್ತು.

3 ಅನಂತರ ಮತ್ತೊಬ್ಬ ದೇವದೂತನು ಬಂದು ಬಲಿಪೀಠದ ಬಳಿ ನಿಂತನು. ಅವನ ಕೈಯಲ್ಲಿ
ಚಿನ್ನದ ಧೂಪಾರತಿ ಇತ್ತು. ಸಿಂಹಾಸನದ ಸಮ್ಮುಖದಲ್ಲಿರುವ ಚಿನ್ನದ ಬಲಿಪೀಠದ ಮೇಲೆ
ದೇವಜನರೆಲ್ಲರ ಪ್ರಾರ್ಥನೆಯೊಡನೆ ಸಮರ್ಪಿಸಲು ಅವನಿಗೆ ಬಹಳಷ್ಟು ಧೂಪವನ್ನು ಕೊಡಲಾಗಿತ್ತು.
4ದೂಪದ ಸುವಾಸನೆ ದೇವಜನರ ಪ್ರಾರ್ಥನೆಯೊಂದಿಗೆ ಆ ದೂತನ ಕೈಯಿಂದ ದೇವರ ಸನ್ನಿಧಿಗೆ
ಏರಿಹೋಯಿತು. 5ಅನಂತರ ಆ ದೇವದೂತನು ಧೂಪಾರತಿಯನ್ನು ಎತ್ತಿಕೊಂಡು, ಅದನ್ನು
ಬಲಿಪೀಠದ ಮೇಲಿದ್ದ ಕೆಂಡಗಳಿಂದ ತುಂಬಿಸಿ, ಭೂಮಿಗೆ ಎಸೆದನು. ಆಗ ಮಿಂಚು, ಗುಡುಗು,
ಗರ್ಜನೆಗಳು ಮತ್ತು ಭೂಕಂಪವು ಉಂಟಾದವು.

## ತುತೂರಿಗಳ ನಾದ

6 ಏಳು ತುತೂರಿಗಳನ್ನು ಹಿಡಿದಿದ್ದ ಏಳು ಮಂದಿ ದೇವದೂತರು ತಮ್ಮ ತಮ್ಮ ತುತೂರಿಗಳನ್ನು ಊದಲು ಸಿದ್ಧರಾದರು. [7]ಮೊದಲನೆಯ ದೇವದೂತನು ತುತೂರಿಯನ್ನು ಊದಿದನು. ಭೂಮಿಯ ಮೇಲೆ ರಕ್ತಮಿಶ್ರಿತವಾದ ಆಲಿಕಲ್ಲಿನ ಮತ್ತು ಬೆಂಕಿಯ ಸುರಿಮಳೆಯಾಯಿತು. ಪರಿಣಾಮವಾಗಿ, ಭೂಮಿಯ ಮೂರನೆಯ ಒಂದು ಭಾಗ ಸುಟ್ಟುಹೋಯಿತು. ಮರಗಳಲ್ಲಿ ಮೂರನೆಯ ಒಂದು ಭಾಗ ಭಸ್ಮವಾಯಿತು. ಹಸಿರು ಹುಲ್ಲೆಲ್ಲಾ ಉರಿದುಹೋಯಿತು.

8 ಎರಡನೆಯ ದೇವದೂತನು ತುತೂರಿಯನ್ನು ಊದಿದನು. ಬೆಂಕಿ ಹತ್ತಿ ಉರಿಯುತ್ತಿರುವ ಪರ್ವತವೋ ಎಂಬಂತಿದ್ದ ವಸ್ತುವೊಂದನ್ನು ಸಮುದ್ರಕ್ಕೆ ಎಸೆಯಲಾಯಿತು. ಸಮುದ್ರದಲ್ಲಿ ಮೂರನೆಯ ಒಂದು ಭಾಗ ರಕ್ತವಾಗಿ ಮಾರ್ಪಟ್ಟಿತು. [9]ಸಮುದ್ರದಲ್ಲಿದ್ದ ಜಲಜಂತುಗಳಲ್ಲಿ ಮೂರನೆಯ ಒಂದು ಭಾಗ ಸತ್ತುಹೋಯಿತು. ಹಡಗುಗಳಲ್ಲಿ ಮೂರನೆಯ ಒಂದು ಭಾಗ ನಾಶವಾಯಿತು.

10 ಮೂರನೆಯ ದೇವದೂತನು ತುತೂರಿಯನ್ನು ಊದಿದನು. ಪಂಜಿನಂತೆ ಉರಿಯುತ್ತಿದ್ದ ದೊಡ್ಡ ನಕ್ಷತ್ರವೊಂದು ಆಕಾಶದಿಂದ ಕೆಳಕ್ಕೆ ಬಿತ್ತು. ಅದು ನದಿಗಳಲ್ಲಿ ಮೂರನೆಯ ಒಂದು ಭಾಗದ ಮೇಲೂ ನೀರಿನ ಒರತೆಗಳ ಮೇಲೂ ಬಿತ್ತು. [11]ಆ ನಕ್ಷತ್ರದ ಹೆಸರು 'ವಿಷಕನ್ಯೆ'. ನೀರಿನಲ್ಲಿ ಮೂರನೆಯ ಒಂದು ಭಾಗ ವಿಷವಾಯಿತು; ಇದರಿಂದಾಗಿ ಅನೇಕರು ನೀರನ್ನು ಕುಡಿದು ಸತ್ತರು.

12 ನಾಲ್ಕನೆಯ ದೇವದೂತನು ತುತೂರಿಯನ್ನು ಊದಿದನು. ಸೂರ್ಯಚಂದ್ರ ನಕ್ಷತ್ರಗಳಲ್ಲಿ ಮೂರನೆಯ ಒಂದು ಭಾಗಕ್ಕೆ ಧಕ್ಕೆ ಉಂಟಾಯಿತು. ಅವುಗಳ ಮೂರನೆಯ ಒಂದು ಭಾಗ ಕಾಂತಿಹೀನವಾಯಿತು. ಇದರಿಂದಾಗಿ ಹಗಲಿನಲ್ಲೂ ರಾತ್ರಿಯಲ್ಲೂ ಮೂರನೆಯ ಒಂದು ಭಾಗದಷ್ಟು ಬೆಳಕು ಕಡಿಮೆಯಾಯಿತು. [13]ಅನಂತರ ಆಕಾಶ ಮಧ್ಯದಲ್ಲಿ ಒಂದು ಗರುಡ ಪಕ್ಷಿ ಹಾರಾಡುತ್ತಿರುವುದುನ್ನು ನಾನು ಕಂಡೆ. ಅದರ ಕೂಗು ನನಗೆ ಕೇಳಿಸಿತು. ಅದು, "ಇನ್ನು ಉಳಿದ ಮೂವರು ದೇವದೂತರು ತುತೂರಿಯನ್ನು ಊದುವಾಗ ಭೂನಿವಾಸಿಗಳಿಗೆ ಕೇಡು, ಕೇಡು, ಕೇಡು," ಎಂದು ಗಟ್ಟಿಯಾಗಿ ಕೂಗುತ್ತಿತ್ತು.

## ದೈವಮುದ್ರೆಯಿಲ್ಲದವರಿಗೆ ಚಿತ್ರಹಿಂಸೆ

**9** ಐದನೆಯ ದೇವದೂತನು ತುತೂರಿಯನ್ನು ಊದಿದನು. ಆಗ ಆಕಾಶದಿಂದ ಭೂಮಿಗೆ ಬಿದ್ದಿದ್ದ ಒಂದು ನಕ್ಷತ್ರವನ್ನು ಕಂಡೆ. ಪಾತಾಳಕೂಪದ ಬೀಗದ ಕೈಯನ್ನು ಅವನಿಗೆ ಕೊಡಲಾಗಿತ್ತು. [2]ಅವನು ಆ ಕೂಪದ ಮುಚ್ಚಳವನ್ನು ತೆರೆದನು. ಅದರೊಳಗಿಂದ ದಟ್ಟಹೊಗೆ ದೊಡ್ಡ ಕುಲುಮೆ ಒಂದರಿಂದ ಬರುತ್ತಿರುವಂತೆ ಮೇಲೇರಿತು. ಇದರಿಂದಾಗಿ ಸೂರ್ಯನೂ ವಾಯುಮಂಡಲವೂ ಕಪ್ಪಾದವು. [3]ಆ ಹೊಗೆಯೊಳಗಿಂದ ಮಿಡತೆಗಳು ಹೊರಟು ಭೂಮಿಗೆ ಬಂದವು. ಭೂಮಿಯಲ್ಲಿ ಇರುವ ಚೇಳುಗಳಿಗಿರುವಂಥ ಶಕ್ತಿಯನ್ನು ಅವುಗಳಿಗೆ ಕೊಡಲಾಗಿತ್ತು. [4]ಭೂಮಿಯ ಮೇಲಣ ಹುಲ್ಲಿಗಾಗಲಿ, ಯಾವುದೇ ಹಸಿರು ಇಲ್ಲವೇ ಮರಗಳಿಗಾಗಲಿ ಕೇಡನ್ನುಂಟು ಮಾಡಬಾರದು ಎಂದೂ ಮಾನವರಲ್ಲಿ ಯಾರ ಹಣೆಯ ಮೇಲೆ ದೇವರ ಮುದ್ರೆಯಿಲ್ಲವೋ ಅಂಥವರಿಗೆ ಮಾತ್ರ ಕೇಡು ಮಾಡಬಹುದೆಂದೂ ಅಪ್ಪಣೆಯಾಗಿತ್ತು. [5]ಅಲ್ಲದೆ, ಅವರನ್ನು ಕೊಲ್ಲದೆಯೇ ಐದು ತಿಂಗಳಕಾಲ ಬಾಧಿಸಬೇಕೆಂದು ಆಜ್ಞಾಪಿಸಲಾಗಿತ್ತು. ಆ ಬಾಧೆ, ಚೇಳು ಕುಟುಕಿದರೆ ಉಂಟಾಗುವ ಬಾಧೆಯಂಥದ್ದು. [6]ಅಂಥ ದಿನಗಳಲ್ಲಿ ಮನುಷ್ಯರು ಮರಣವನ್ನು ಅಪೇಕ್ಷಿಸುವರು. ಆದರೆ ಅದು ಅವರಿಗೆ ಪ್ರಾಪ್ತವಾಗುವುದಿಲ್ಲ. ಸತ್ತರೆ ಸಾಕೆಂದು ಬಯಸುವರು; ಪ್ರಯತ್ನಿಸುವರು. ಆದರೆ ಮೃತ್ಯು ಅವರಿಂದ ದೂರ ಸರಿಯುವುದು.

7 ಆ ಮಿಡತೆಗಳು ನೋಡುವುದಕ್ಕೆ ಸಮರಕ್ಕೆ ಸನ್ನದ್ಧರಾಗಿರುವ ಕುದುರೆಗಳಂತಿದ್ದವು. ಅವುಗಳ ತಲೆಯ ಮೇಲೆ ಚಿನ್ನದ ಕಿರೀಟವಿದ್ದಂತೆ ಕಾಣಿಸುತ್ತಿತ್ತು. ಮುಖಗಳು ಮನುಷ್ಯರ ಮುಖಗಳಂತೆ ಇದ್ದವು.

8ಅವುಗಳ ಕೂದಲು ಸ್ತ್ರೀಯರ ಕೂದಲಿನಂತೆಯೂ ಹಲ್ಲುಗಳು ಸಿಂಹದ ಹಲ್ಲುಗಳಂತೆಯೂ ಇದ್ದವು.
9ಅವುಗಳ ಮೈಚಿಪ್ಪು ಕವಚದಂತಿತ್ತು. ರೆಕ್ಕೆ ಬಡಿಯುವ ಶಬ್ದವು ಸಮರಕ್ಕೆ ಧಾವಿಸುವ ಹಲವಾರು
ರಥಾಶ್ವಗಳ ಶಬ್ದವನ್ನು ಹೋಲುತ್ತಿತ್ತು. 10ಚೇಳುಗಳಿಗಿರುವಂತೆ ಬಾಲಗಳೂ ಕೊಂಡಿಗಳೂ
ಅವುಗಳಿಗಿದ್ದವು. ಐದು ತಿಂಗಳವರೆಗೆ ಮಾನವರನ್ನು ಬಾಧಿಸುವ ಶಕ್ತಿ ಆ ಬಾಲಗಳಿಗಿತ್ತು.
11ಪಾತಾಳಕೂಪದ ದೂತನೇ ಅವುಗಳನ್ನು ಆಳುವ ಅರಸು. ಅವನಿಗೆ ಹಿಬ್ರಿಯ ಭಾಷೆಯಲ್ಲಿ
'ಅಬದ್ದೋನ್' ಎಂದೂ ಗ್ರೀಕ್ ಭಾಷೆಯಲ್ಲಿ 'ಅಪೊಲ್ಲುವೋನ್' ಎಂದೂ ಹೆಸರು.

12 ಹೀಗೆ ಮೊದಲನೆಯ ವಿಪತ್ತು ಮುಗಿಯಿತು. ಇಗೋ, ಇನ್ನೆರಡು ವಿಪತ್ತುಗಳು
ಬಂದೆರಗಲಿವೆ:

13 ಆರನೆಯ ದೇವದೂತನು ತುತೂರಿಯನ್ನು ಊದಿದನು. ದೇವರ ಸಾನ್ನಿಧ್ಯದಲ್ಲಿ ಇರುವ
ಚಿನ್ನದ ಬಲಿಪೀಠದ ನಾಲ್ಕು ಮೂಲೆಗಳಿಂದ ಹೊರಟ ಒಂದು ಶಬ್ದ ನನಗೆ ಕೇಳಿಸಿತು.
14ತುತೂರಿಯನ್ನು ಹಿಡಿದಿದ್ದ ಆರನೆಯ ದೇವದೂತನಿಗೆ ಅದು, "ಯೂಫ್ರೆಟಿಸ್ ಮಹಾನದಿಯ ಬಳಿ
ಕಟ್ಟಲಾಗಿರುವ ನಾಲ್ಕು ದೇವದೂತರನ್ನು ಬಿಚ್ಚಿಬಿಡು," ಎಂದು ಆಜ್ಞಾಪಿಸಿತು. 15ಮಾನವ ಜನಾಂಗದ
ಮೂರನೆಯ ಒಂದು ಭಾಗವನ್ನು ಸಂಹರಿಸುವುದಕ್ಕಾಗಿ ಗಂಟೆ, ದಿನ, ತಿಂಗಳು, ವರ್ಷ ಎಲ್ಲವನ್ನೂ
ನಿಗದಿಮಾಡಲಾಗಿತ್ತು. ಅದಕ್ಕೆ ಸಿದ್ಧರಾಗಿ ನಿಂತಿದ್ದ ಆ ನಾಲ್ಕು ದೇವದೂತರನ್ನು ಬಂಧಮುಕ್ತರನ್ನಾಗಿ
ಮಾಡಲಾಯಿತು. 16ಕುದುರೆ ಸೈನ್ಯದ ಸಂಖ್ಯೆ ಇಪ್ಪತ್ತು ಕೋಟಿ ಎಂದು ಹೇಳಿದುದು ನನಗೆ ಕೇಳಿಸಿತು.
17ಹೀಗೆ ಕುದುರೆಗಳನ್ನೂ ಅವುಗಳ ಮೇಲೆ ಕುಳಿತ ಸವಾರರನ್ನೂ ನಾನು ದರ್ಶನದಲ್ಲಿ ಕಂಡೆ. ಆ
ಸವಾರರು ಬೆಂಕಿಯ, ನೀಲಮಣಿಯ ಹಾಗೂ ಗಂಧಕ ವರ್ಣಗಳ ಕವಚಗಳನ್ನು ಧರಿಸಿದ್ದರು.
ಕುದುರೆಗಳ ತಲೆಗಳು ಸಿಂಹಗಳ ತಲೆಗಳಂತೆ ಇದ್ದವು. ಅವುಗಳ ಬಾಯಿಂದ ಬೆಂಕಿ, ಹೊಗೆ ಮತ್ತು
ಗಂಧಕ ಹೊರಬರುತ್ತಿದ್ದವು. 18ಅವುಗಳ ಬಾಯಿಂದ ಬರುತ್ತಿದ್ದ ಇವುಗಳು ಮೂರು ವಿಪತ್ತುಗಳಾಗಿದ್ದವು.
ಇವುಗಳಿಂದ ಮಾನವ ಜನಾಂಗದ ಮೂರನೆಯ ಒಂದು ಭಾಗ ಹತವಾಯಿತು. 19ಕುದುರೆಗಳ ಶಕ್ತಿಯು
ಅವುಗಳ ಬಾಯಲ್ಲೂ ಬಾಲಗಳಲ್ಲೂ ಅಡಗಿತ್ತು. ಆ ಬಾಲಗಳು ಸರ್ಪಗಳ ತಲೆಯಂತೆ ಇದ್ದವು ಮತ್ತು
ಗಾಯಗೊಳಿಸುವ ಶಕ್ತಿ ಅವಕ್ಕಿತ್ತು.

20 ಆ ವಿಪತ್ತುಗಳಿಂದ ಸಾಯದೆ ಬದುಕಿದ್ದ ಜನರು ತಮ್ಮ ದುಷ್ಕೃತ್ಯಗಳನ್ನು ಬಿಟ್ಟು ದೇವರಿಗೆ
ಅಭಿಮುಖರಾಗಲೇ ಇಲ್ಲ; ದೆವ್ವಾರಾಧನೆಯನ್ನು ತ್ಯಜಿಸಲಿಲ್ಲ; ನೋಡಲಾರದ, ಕೇಳಿಸಿಕೊಳ್ಳಲಾರದ
ಮತ್ತು ನಡೆಯಲಾರದ ವಿಗ್ರಹಗಳನ್ನು ಚಿನ್ನ, ಬೆಳ್ಳಿ, ತಾಮ್ರ, ಕಲ್ಲು ಮತ್ತು ಮರಗಳಲ್ಲಿ ಮಾಡಿ
ಪೂಜಿಸುವುದನ್ನು ಕೈಬಿಡಲಿಲ್ಲ. 21ಇಷ್ಟೇ ಅಲ್ಲದೆ ತಮ್ಮ ಕೊಲೆಗಡುಕತನ, ಮಾಟಮಂತ್ರ, ಹಾದರ ಮತ್ತು
ಕಳ್ಳತನಗಳನ್ನು ತೊರೆದು ಮನಸ್ಸಾಂತರಗೊಳ್ಳಲಿಲ್ಲ.

**ಸುರುಳಿಯ ಸಿಹಿಕಹಿ**

**10** ನಾನು ಮತ್ತೊಂದು ದೃಶ್ಯವನ್ನು ಕಂಡೆ. ಒಬ್ಬ ಬಲಿಷ್ಠ ದೇವದೂತನು ಸ್ವರ್ಗದಿಂದ ಇಳಿದು
ಬಂದನು. ಅವನು ಮೇಘಾಂಬರನಾಗಿದ್ದನು. ಅವನ ತಲೆಯ ಮೇಲೆ ಮುಗಿಲುಬಿಲ್ಲೊಂದು ಇತ್ತು.
ಮುಖವು ಸೂರ್ಯನಂತೆ ಇತ್ತು. ಕಾಲುಗಳು ಅಗ್ನಿಸ್ತಂಭಗಳಂತಿದ್ದವು. 2ಅವನ ಕೈಯಲ್ಲಿ ತೆರೆದಿದ್ದ ಚಿಕ್ಕ
ಸುರುಳಿ ಒಂದಿತ್ತು. ಅವನು ತನ್ನ ಬಲಗಾಲನ್ನು ಸಮುದ್ರದ ಮೇಲೆಯೂ ಎಡಗಾಲನ್ನು ಭೂಮಿಯ
ಮೇಲೆಯೂ ಇಟ್ಟು ನಿಂತಿದ್ದನು. 3ಅವನು ಗಟ್ಟಿಯಾದ ಸ್ವರದಿಂದ ಕೂಗಿದನು. ಅದು ಸಿಂಹದ
ಗರ್ಜನೆಯಂತಿತ್ತು. ಅವನು ಕೂಗಿದಾಗ ಏಳು ಗುಡುಗುಗಳು ಒಂದೊಂದಾಗಿ ಮಾರ್ದನಿಸಿದವು. 4ಏಳು
ಗುಡುಗುಗಳು ನುಡಿದುದನ್ನು ಕೂಡಲೇ ನಾನು ಬರೆಯಬೇಕೆಂದಿದ್ದೆ. ಆಗ ಸ್ವರ್ಗದಿಂದ ಬಂದ ಒಂದು

ಧ್ವನಿ, “ಆ ಏಳು ಗುಡುಗುಗಳು ನುಡಿದುದನ್ನು ರಹಸ್ಯವಾಗಿ ಇಡು. ಅವುಗಳನ್ನು ಬರೆಯಬೇಡ,”
ಎಂದು ನನಗೆ ಆಜ್ಞಾಪಿಸಿತು.

5 ಸಮುದ್ರದ ಮೇಲೆಯೂ ಭೂಮಿಯ ಮೇಲೆಯೂ ಕಾಲುಗಳನ್ನಿಟ್ಟು ನಿಂತಿದ್ದ ದೇವದೂತನು
ತನ್ನ ಬಲಗೈಯನ್ನು ಸ್ವರ್ಗದ ಕಡೆಗೆ ಎತ್ತಿದನು. 6ಅನಂತರ ಸ್ವರ್ಗ, ಭೂಮಿ, ಸಮುದ್ರ ಇವುಗಳನ್ನೂ
ಇವುಗಳಲ್ಲಿರುವ ಸಮಸ್ತವನ್ನೂ ಸೃಷ್ಟಿಸಿದ ಹಾಗೂ ಯುಗಯುಗಾಂತರಕ್ಕೂ ಜೀವಿಸುವ ದೇವರ
ಹೆಸರಿನಲ್ಲಿ ಶಪಥಮಾಡಿ ಹೀಗೆ ಹೇಳಿದನು: “ಇನ್ನು ನಿಧಾನಿಸುವಂತಿಲ್ಲ; 7ಏಳನೆಯ ದೇವದೂತನು
ತುತೂರಿಯನ್ನು ಊದುವನು. ಆಗ ದೇವರು ಇದುವರೆಗೆ ನಿಗೂಢವಾಗಿಟ್ಟಿದ್ದ ತಮ್ಮ ಯೋಜನೆಯನ್ನು
ತಮ್ಮ ದಾಸರಾದ ಪ್ರವಾದಿಗಳಿಗೆ ಮುಂತಿಳಿಸಿದ್ದ ಪ್ರಕಾರ ಈಡೇರಿಸುವರು.”

8 ಸ್ವರ್ಗದಿಂದ ನನಗೆ ಕೇಳಿಸಿದ್ದ ಧ್ವನಿ ಮತ್ತೊಮ್ಮೆ ನನ್ನೊಡನೆ ಮಾತನಾಡಿ, “ಸಮುದ್ರದ
ಮೇಲೆಯೂ ಭೂಮಿಯ ಮೇಲೆಯೂ ಕಾಲಿಟ್ಟು ನಿಂತಿರುವ ದೇವದೂತನ ಬಳಿಗೆ ಹೋಗು. ಆತನ
ಕೈಯಲ್ಲಿರುವ ತೆರೆದ ಸುರುಳಿಯನ್ನು ತೆಗೆದುಕೋ,” ಎಂದು ತಿಳಿಸಿತು. 9ನಾನು ಆ ದೇವದೂತನ ಬಳಿಗೆ
ಹೋಗಿ, “ಆ ಚಿಕ್ಕ ಸುರುಳಿಯನ್ನು ನನಗೆ ಕೊಡು,” ಎಂದು ಕೇಳಿದೆ. ಅವನು, “ತೆಗೆದುಕೋ, ಇದನ್ನು
ತಿನ್ನು. ಇದು ನಿನ್ನ ಹೊಟ್ಟೆಯಲ್ಲಿ ಕಹಿಯಾಗಿಯೂ ನಿನ್ನ ಬಾಯಲ್ಲಿ ಜೇನುತುಪ್ಪದಂತೆ ಸಿಹಿಯಾಗಿಯೂ
ಇರುತ್ತದೆ,” ಎಂದನು.

10 ಅಂತೆಯೇ, ನಾನು ಆ ಚಿಕ್ಕ ಸುರುಳಿಯನ್ನು ದೇವದೂತನ ಕೈಯಿಂದ ತೆಗೆದುಕೊಂಡು
ತಿಂದೆ. ಅದು ನನ್ನ ಬಾಯಲ್ಲಿ ಜೇನುತುಪ್ಪದಂತೆ ಸಿಹಿಯಾಗಿತ್ತು. ಆದರೆ ಅದನ್ನು ತಿಂದಮೇಲೆ ನನ್ನ
ಹೊಟ್ಟೆಯೆಲ್ಲಾ ಕಹಿಯಾಯಿತು. 11ಅನಂತರ, ದೇವದೂತನು ನನಗೆ, “ನೀನು ಇನ್ನೂ ಅನೇಕ ಜನರ,
ಜನಾಂಗಗಳ, ಭಾಷೆಗಳನ್ನಾಡುವವರ ಹಾಗು ಅರಸರಾದವರ ವಿರುದ್ಧ ಪ್ರವಾದನೆಯನ್ನು ಸಾರಬೇಕು,”
ಎಂದು ಆಜ್ಞಾಪಿಸಿದನು.

### ಸಾಕ್ಷಿಗಳ ಸಾವು – ಭೂನಿವಾಸಿಗಳ ನೋವು

**11** ಇದಾದ ನಂತರ ಅಳತೆಗೋಲಿನಂಥ ಒಂದು ಕೋಲನ್ನು ನನಗೆ ಕೊಟ್ಟು ಹೀಗೆ ತಿಳಿಸಲಾಯಿತು:
“ನೀನೆದ್ದು ದೇವರ ಆಲಯವನ್ನೂ ಬಲಿಪೀಠವನ್ನೂ ಅಳತೆ ಮಾಡು. ಆಲಯದಲ್ಲಿ
ಆರಾಧಿಸುತ್ತಿರುವವರನ್ನು ಲೆಕ್ಕ ಮಾಡು. 2ಆಲಯದ ಹೊರ ಅಂಗಳವನ್ನು ಅಳತೆಮಾಡಬೇಡ; ಅದನ್ನು
ಬಿಟ್ಟುಬಿಡು. ಅದನ್ನು ಜನರಿಗೆ ಬಿಟ್ಟುಕೊಡಲಾಗಿದೆ. ಅವರು ಪವಿತ್ರ ನಗರವನ್ನು ನಲವತ್ತೆರಡು
ತಿಂಗಳವರೆಗೆ ತುಳಿದಾಡುವರು. 3ನಾನು ನನ್ನ ಇಬ್ಬರು ಸಾಕ್ಷಿಗಳನ್ನು ಕಳುಹಿಸುವೆನು. ಅವರು
ಗೋಣಿತಟ್ಟನ್ನು ಉಟ್ಟುಕೊಂಡು ಒಂದು ಸಾವಿರದ ಇನ್ನೂರ ಅರವತ್ತು ದಿನಗಳ ಕಾಲ
ಪ್ರವಾದಿಸುವರು.”

4 ಲೋಕಾಧಿಪತಿಯಾದ ದೇವರ ಸಾನ್ನಿಧ್ಯದಲ್ಲಿರುವ ಎರಡು ಓಲಿವ್ ಮರಗಳು ಮತ್ತು ಎರಡು
ದೀಪಸ್ತಂಭಗಳು ಇವರೇ. 5ಯಾವನಾದರು ಇವರಿಗೆ ಕೇಡು ಬಗೆದರೆ ಇವರ ಬಾಯಿಯಿಂದ ಬೆಂಕಿ
ಹೊರಟು ಇವರ ಶತ್ರುಗಳನ್ನು ದಹಿಸಿಬಿಡುತ್ತದೆ. ಇವರಿಗೆ ಕೇಡು ಬಗೆಯಬೇಕೆಂದಿರುವವನು ಹೀಗೆಯೇ
ಹತನಾಗುತ್ತಾನೆ. 6ತಾವು ಪ್ರವಾದನೆ ಮಾಡುವ ದಿನಗಳಲ್ಲಿ ಮಳೆಬಾರದಂತೆ ಆಕಾಶವನ್ನು ಮುಚ್ಚಿಬಿಡುವ
ಸಾಮರ್ಥ್ಯ ಇವರಿಗಿದೆ. ಇದಲ್ಲದೆ, ಇವರಿಗೆ ಇಷ್ಟ ಬಂದಾಗಲೆಲ್ಲಾ ನೀರನ್ನು ರಕ್ತವನ್ನಾಗಿ ಪರಿವರ್ತಿಸುವ
ಹಾಗು ಸಕಲ ವಿಧವಾದ ಉಪದ್ರವಗಳಿಂದ ಜಗತ್ತನ್ನು ಪೀಡಿಸುವ ಅಧಿಕಾರ ಇವರಿಗೆ ಇರುತ್ತದೆ.

7 ಇವರ ಸಾಕ್ಷ್ಯ ನೀಡಿಕೆ ಮುಗಿದನಂತರ ಪಾತಾಳಕೂಪದಿಂದ ಮೃಗವೊಂದು ಮೇಲೇರಿ
ಬರುತ್ತದೆ; ಅದು ಇವರೊಡನೆ ಯುದ್ಧಮಾಡಿ, ಜಯಗಳಿಸಿ, ಇವರನ್ನು ಕೊಂದುಹಾಕುತ್ತದೆ. 8ಈ
ಸಾಕ್ಷಿಗಳ ಶವಗಳು ಆ ಮಹಾನಗರದ ಬೀದಿ ಪಾಲಾಗುವುವು. ಆ ನಗರವನ್ನು ಸೊದೋಮ್ ಇಲ್ಲವೆ

ಈಜಿಪ್ಟ್ ಎಂದು ಸೂಚ್ಯವಾಗಿ ಕರೆಯಲಾಗಿದೆ. ಈ ಸಾಕ್ಷಿಗಳ ಪ್ರಭುವನ್ನು ಸಹ ಇಲ್ಲಿಯೇ
ಶಿಲುಬೆಗೇರಿಸಲಾಯಿತು. [9]ಸಕಲ ದೇಶ, ಭಾಷೆ, ಕುಲ, ಗೋತ್ರಗಳ ಜನರು ಈ ಸಾಕ್ಷಿಗಳ ಶವಗಳನ್ನು
ಮೂರುವರೆ ದಿನಗಳ ತನಕ ದಿಟ್ಟಿಸಿ ನೋಡುವರು; ಅವುಗಳನ್ನು ಸಮಾಧಿ ಮಾಡಲು ಬಿಡಲೊಲ್ಲರು.
[10]ಭೂನಿವಾಸಿಗಳನ್ನು ಪೀಡಿಸಿದ್ದ ಆ ಇಬ್ಬರು ಪ್ರವಾದಿಗಳು ಸತ್ತದ್ದಕ್ಕಾಗಿ ಲೋಕದ ಜನರು
ಸಂತೋಷದಿಂದ ಸಂಭ್ರಮಿಸುವರು. ಒಬ್ಬರಿಗೊಬ್ಬರು ಬಹುಮಾನಗಳನ್ನು ಹಂಚಿಕೊಳ್ಳುವರು.
[11]ಮೂರುವರೆ ದಿನಗಳಾದ ಮೇಲೆ ದೇವರಿಂದ ಜೀವದಾಯಕ ಉಸಿರು ಬಂದು ಆ ಶವಗಳನ್ನು
ಹೊಕ್ಕಾಗ ಅವರು ಎದ್ದು ನಿಂತರು. ಇದನ್ನು ಕಂಡವರೆಲ್ಲರೂ ಭಯದಿಂದ ನಡುಗಿದರು. [12]ಅನಂತರ
ಆ ಪ್ರವಾದಿಗಳಿಗೆ, "ಮೇಲೇರಿ ಬನ್ನಿ," ಎಂದು ಸ್ವರ್ಗದಿಂದ ಒಂದು ಮಹಾವಾಣಿ ತಿಳಿಸಿತು. ಶತ್ರುಗಳು
ಅವರನ್ನು ನೋಡುತ್ತಿದ್ದಂತೆಯೇ ಅವರು ಮೇಘಾರೂಢರಾಗಿ ಸ್ವರ್ಗಕ್ಕೇರಿದರು. [13]ಅದೇ ಗಳಿಗೆಯಲ್ಲಿ
ಒಂದು ಭೀಕರ ಭೂಕಂಪವಾಯಿತು. ನಗರದ ಹತ್ತನೆಯ ಒಂದು ಭಾಗ ನಾಶವಾಯಿತು. ಏಳು ಸಾವಿರ
ಜನರು ಆ ಭೂಕಂಪದಲ್ಲಿ ಹತರಾದರು. ಉಳಿದವರು ಭಯಭೀತರಾಗಿ ಸ್ವರ್ಗದಲ್ಲಿರುವ ದೇವರ
ಮಹಿಮೆಯನ್ನು ಸ್ತುತಿಸಿದರು.

14 ಹೀಗೆ ಎರಡನೆಯ ವಿಪತ್ತು ಮುಗಿಯಿತು. ಇಗೋ ಮೂರನೆಯ ವಿಪತ್ತು ಕೂಡಲೇ
ಬಂದೆರಗುವುದು.

**ವಿಶ್ವದ ಆಡಳಿತ ಸರ್ವೇಶನದು**

15 ಏಳನೆಯ ದೇವದೂತನು ತನ್ನ ತುತೂರಿಯನ್ನು ಊದಿದನು. ಆಗ ಸ್ವರ್ಗದಲ್ಲಿ
ಮಹಾಶಬ್ದಗಳು ಉಂಟಾಗಿ ಹೀಗೆ ಮೊಳಗಿದವು:

"ವಿಶ್ವವನ್ನಾಳುವ ಅಧಿಕಾರವು
ನಮ್ಮ ಸರ್ವೇಶನದು ಹಾಗು
ಅವರಿಂದ ಅಭಿಷಿಕ್ತನಾದ
ಲೋಕೋದ್ಧಾರಕನದು.
ಇನ್ನಾತನು ಆಳುವನು ಎಂದೆಂದಿಗೂ".

[16]ತರುವಾಯ ದೇವರ ಸಾನ್ನಿಧ್ಯದಲ್ಲಿ ತಮ್ಮ ತಮ್ಮ ಪೀಠಗಳಲ್ಲಿ ಕುಳಿತಿದ್ದ ಇಪ್ಪತ್ನಾಲ್ಕು ಸಭಾಪ್ರಮುಖರು
ದೇವರಿಗೆ ಸಾಷ್ಟಾಂಗವೆರಗಿ ಆರಾಧಿಸಿದರು. ಅಲ್ಲದೆ,

[17] "ಪ್ರಭುವೇ, ದೇವನೇ, ಸರ್ವಶಕ್ತನೇ,
ಇರುವಾತನೂ ಇದ್ದಾತನೂ ನೀನೇ
ಘನಾಧಿಕಾರವನ್ನು ತೋರಿ ನೀ ಆಳುತ್ತಿರುವೆ
ಧನ್ಯವಾದಗಳನ್ನು ನಿನಗೆ ಸಲ್ಲಿಸುವೆ.

[18] ಕೆರಳಿದವು ವಿಶ್ವ ರಾಷ್ಟ್ರಗಳು
ಎರಗಿತು ನಿನ್ನ ಪ್ರಕೋಪವು
ಸಮೀಪಿಸಿತು ಮೃತರ ನ್ಯಾಯತೀರ್ಪಿನ ದಿನವು
ಬಂದಿದೆ ಸಮಯ ಸನ್ಮಾನಿಸಲು
ನಿನ್ನ ದಾಸರನು, ಪ್ರವಾದಿಗಳನು, ದೇವ
ಪ್ರಜೆಗಳನು
ನಿನ್ನಲ್ಲಿ ಭಯಭಕುತಿಯುಳ್ಳ ಹಿರಿಯ
ಕಿರಿಯರನು.

ಇದಿಗೋ ಬಂದಿದೆ ಗಳಿಗೆಯು
ಲೋಕನಾಶಕರನ್ನು ವಿನಾಶಗೊಳಿಸಲು",
ಎಂದು ಹಾಡಿದರು.

19 ಆಗ ಸ್ವರ್ಗದಲ್ಲಿನ ದೇವಾಲಯವು ತೆರೆಯಿತು. ದೇವರ ಒಡಂಬಡಿಕೆಯ ಮಂಜೂಷವು
ಅಲ್ಲಿರುವುದು ಕಾಣಿಸಿತು; ಇದಲ್ಲದೆ ಮಿಂಚುಗಳು, ಗುಡುಗು, ಗರ್ಜನೆಗಳು ಉಂಟಾದವು. ಭೂಕಂಪವೂ
ಆಯಿತು. ಜೋರಾದ ಆಲಿಕಲ್ಲಿನ ಮಳೆ ಸುರಿಯಿತು.

### ಸರ್ಪಕ್ಕೆ ಸೋಲು

**12** ಆಕಾಶದಲ್ಲಿ ಚಿಹ್ನೆಯೊಂದು ಕಾಣಿಸಿಕೊಂಡಿತು. ಮಹಿಳೆಯೊಬ್ಬಳು ಸೂರ್ಯಭೂಷಿತಳಾಗಿದ್ದಳು.
ಆಕೆಯ ಪಾದದಡಿ ಚಂದ್ರನಿದ್ದನು. ತಲೆಯ ಮೇಲೆ ಹನ್ನೆರಡು ನಕ್ಷತ್ರ ಖಚಿತವಾದ ಕಿರೀಟವಿತ್ತು. 2ಆಕೆ
ತುಂಬು ಗರ್ಭಿಣಿ, ಪ್ರಸವವೇದನೆಯಿಂದ ನರಳುತ್ತಿದ್ದಳು.

3 ಆಕಾಶದಲ್ಲಿ ಮತ್ತೊಂದು ಚಿಹ್ನೆ ಕಾಣಿಸಿಕೊಂಡಿತು. ಅಲ್ಲಿ ಕೆಂಪು ಘಟಸರ್ಪವೊಂದು ಇತ್ತು.
ಅದಕ್ಕೆ ಏಳು ತಲೆಗಳಿದ್ದವು, ಹತ್ತು ಕೊಂಬುಗಳಿದ್ದವು; ಅದರ ಏಳು ತಲೆಗಳ ಮೇಲೆ ಏಳು
ಮುಕುಟಗಳಿದ್ದವು. 4ಅದು ತನ್ನ ಬಾಲದಿಂದ ಮೂರನೆಯ ಒಂದು ಭಾಗದಷ್ಟು ನಕ್ಷತ್ರಗಳನ್ನು
ಆಕಾಶದಿಂದ ಸೆಳೆದೆಳೆದು ಅವುಗಳನ್ನು ಭೂಮಿಗೆ ಎಸೆಯಿತು. ಮಗು ಹುಟ್ಟಿದ ಕೂಡಲೇ ಅದನ್ನು
ನುಂಗಿ ಬಿಡಬೇಕೆಂದು ಘಟಸರ್ಪವು ಆ ತುಂಬು ಗರ್ಭಿಣಿಯ ಬಳಿಯಲ್ಲಿಯೇ ಕಾಯ್ದುಕೊಂಡಿತು.
5ಸರ್ವಜನಾಂಗಗಳನ್ನು ಕಬ್ಬಿಣದ ದಂಡದಿಂದ ಆಳಬಲ್ಲಂಥ ಒಂದು ಗಂಡುಮಗುವಿಗೆ ಆಕೆ ಜನ್ಮವಿತ್ತಳು.
ಆದರೆ, ಆ ಮಗುವನ್ನು ಸಿಂಹಾಸನದಲ್ಲಿದ್ದ ದೇವರ ಬಳಿಗೆ ಕೊಂಡೊಯ್ಯಲಾಯಿತು. 6ಆ ಮಹಿಳೆ
ಅರಣ್ಯಕ್ಕೆ ಓಡಿಹೋದಳು. ಅಲ್ಲಿ ಸಾವಿರದ ಇನ್ನೂರ ಅರವತ್ತು ದಿನಗಳ ಕಾಲ ಆಕೆಗೆ
ಶುಶ್ರೂಷೆಯಾಗಬೇಕೆಂದು ದೇವರೇ ಆ ಸ್ಥಳವನ್ನು ಸಜ್ಜುಗೊಳಿಸಿದ್ದರು.

7 ಸ್ವರ್ಗದಲ್ಲಿ ಒಂದು ಯುದ್ಧ ಪ್ರಾರಂಭವಾಯಿತು. ಮಿಕಾಯೇಲನು ತನ್ನ ಸಹದೂತರ ಸಹಿತ
ಘಟಸರ್ಪದ ವಿರುದ್ಧ ಯುದ್ಧಮಾಡಿದನು. ಘಟಸರ್ಪವೂ ತನ್ನ ದೂತರ ಸಮೇತ ಯುದ್ಧದಲ್ಲಿ
ಕಾದಾಡಿತು. 8ಆದರೆ ಜಯಗಳಿಸುವಷ್ಟು ಸಾಮರ್ಥ್ಯ ಘಟಸರ್ಪಕ್ಕಿರದೆ ಅದು ಸೋಲನ್ನಪ್ಪಿತು. ಹೀಗೆ
ಸ್ವರ್ಗದಲ್ಲಿ ಅದಕ್ಕೂ ಅದರ ದೂತರಿಗೂ ಸ್ಥಳವಿಲ್ಲದಂತಾಯಿತು. 9ಸಮಸ್ತ ಜಗತ್ತನ್ನೂ ವಂಚಿಸುತ್ತಿದ್ದ ಆ
ಮಹಾ ಘಟಸರ್ಪವನ್ನು ಭೂಮಿಗೆ ತಳ್ಳಲಾಯಿತು. ಈ ಪುರಾತನ ಸರ್ಪಕ್ಕೆ 'ಪಿಶಾಚಿ' ಎಂತಲೂ
'ಸೈತಾನ' ಎಂತಲೂ ಹೆಸರು. ಅದರ ದೂತರನ್ನು ಅದರೊಡನೆ ತಳ್ಳಲಾಯಿತು.

10 ಸ್ವರ್ಗದಿಂದ ಬಂದ ಮಹಾಶಬ್ದವನ್ನು ನಾನು ಕೇಳಿಸಿಕೊಂಡೆ. ಅದು ಇಂತೆಂದಿತು:
"ಇಗೋ, ನಮ್ಮ ದೇವನಿತ್ತ ಜೀವೋದ್ಧಾರ
ಸಿದ್ಧಿಸಿದೆ.
ಆತನ ಶಕ್ತಿ, ಸಾಮ್ರಾಜ್ಯಗಳು ಕಂಗೊಳಿಸುತ್ತಿವೆ.
ಆತನ ಕ್ರಿಸ್ತಾಧಿಪತ್ಯ ಸ್ಥಾಪಿತವಾಗಿದೆ.
ನಮ್ಮ ಸೋದರರನು ದೂರಿದವನನ್ನು
ದಬ್ಬಲಾಗಿದೆ.
ಹಗಲಿರುಳು ನಮ್ಮ ದೇವರೆದುರು
ದೂರಿತ್ತಿದ್ದವನನ್ನು ತಳ್ಳಲಾಗಿದೆ.
11 ಜಯಿಸಿದರು ಸೋದರರು ಆ ನಿಂದಕನನ್ನು
ಯಜ್ಞದ ಕುರಿಮರಿಯ ರಕ್ತದಿಂದ

ಸತ್ಯಕ್ಕೆ ಸಾಕ್ಷಿಯನ್ನಿತ್ತುದರಿಂದ
ಜೀವದಾಶೆಯನು ತೊರೆದುದರಿಂದ
ಮರಣದ ಭಯವನು ಬಿಸುಟುದರಿಂದ.
12 ಎಂದೇ ಸ್ವರ್ಗಲೋಕ, ಸ್ವರ್ಗನಿವಾಸಿಗಳೆಲ್ಲ
ನಲಿಯಲಿ!
ಕ್ಷಿತಿಸಾಗರಗಳಿಗೆ ಒದಗಿದೆ ದುರ್ಗತಿ.
ಬಂದಿಹನು ಪಿಶಾಚಿ ಕಡುರೋಷದಿಂದ
ತನಗಿರುವ ಕಾಲ ತುಸುವೆಂಬ ತವಕದಿಂದ."

13 ಘಟಸರ್ಪವು ತನ್ನನ್ನು ಭೂಮಿಗೆ ತಳ್ಳಲಾಗಿರುವುದನ್ನು ಅರಿತು, ಗಂಡು ಮಗುವಿಗೆ ಜನ್ಮವಿತ್ತ ಆ ಮಹಿಳೆಯನ್ನು ಅಟ್ಟಿಸಿಕೊಂಡು ಓಡಿತು. 14ಆಗ ಆ ಮಹಿಳೆ ಅರಣ್ಯದಲ್ಲಿರುವ ತನ್ನ ಸ್ಥಳಕ್ಕೆ ಹಾರಿ ಹೋಗುವಂತೆ ದೊಡ್ಡ ಗರುಡಪಕ್ಷಿಗಿರುವಂಥ ಎರಡು ರೆಕ್ಕೆಗಳನ್ನು ಆಕೆಗೆ ಕೊಡಲಾಯಿತು; ಅಲ್ಲಿ ಘಟಸರ್ಪದ ಕಣ್ಣಿಗೆ ಬೀಳದೆ ಮೂರುವರೆ ವರ್ಷಗಳ ಕಾಲ ಪೋಷಣೆ ಹೊಂದುವಂತಾಯಿತು. 15ಆ ಘಟಸರ್ಪ ತನ್ನ ಬಾಯಿಂದ ನೀರನ್ನು ನದಿಯಂತೆ ಸುರಿಸುತ್ತಾ ಅದರಲ್ಲಿ ಆ ಮಹಿಳೆಯನ್ನು ಕೊಚ್ಚಿಕೊಂಡು ಹೋಗುವಂತೆ ಮಾಡಲು ಯತ್ನಿಸಿತು. 16ಆದರೆ ಭೂಮಿ ಆಕೆಯ ನೆರವಿಗೆ ಬಂದಿತು. ಅದು ತನ್ನ ಬಾಯನ್ನು ತೆರೆದು ಘಟಸರ್ಪದ ಬಾಯಿಂದ ಹೊರಬಂದ ನದಿಯನ್ನು ಕುಡಿದು ಬಿಟ್ಟಿತು. 17ಇದರಿಂದಾಗಿ ಘಟಸರ್ಪಕ್ಕೆ ಆ ಮಹಿಳೆಯ ಮೇಲೆ ತೀವ್ರತರ ರೋಷವುಂಟಾಯಿತು. ಆಕೆಯ ಇನ್ನುಳಿದ ಸಂತತಿಯವರ ಮೇಲೆ, ಅಂದರೆ ದೇವರ ಆಜ್ಞೆಗಳನ್ನು ಅನುಸರಿಸಿ ನಡೆಯುವವರ ಮೇಲೆ ಹಾಗೂ ಯೇಸುಸ್ವಾಮಿಯ ಪರವಾಗಿ ಸಾಕ್ಷಿ ನೀಡುವವರ ಮೇಲೆ ಯುದ್ಧಮಾಡಲು ಹೊರಟುಹೋಯಿತು.

### ಆರುನೂರ ಅರವತ್ತಾರು

**13** ನಾನು ಸಮುದ್ರದ ತೀರದಲ್ಲಿ ನಿಂತಿದ್ದೆ. ಆಗ ನನಗೆ ಈ ದೃಶ್ಯ ಕಾಣಿಸಿತು: ಒಂದು ಮೃಗ ಸಮುದ್ರದಿಂದ ಮೇಲೆ ಏರಿ ಬಂದಿತು. ಅದಕ್ಕೆ ಏಳು ತಲೆಗಳೂ ಹತ್ತು ಕೊಂಬುಗಳೂ ಇದ್ದವು. ಪ್ರತಿಯೊಂದು ಕೊಂಬಿನ ಮೇಲೂ ಒಂದೊಂದು ಮುಕುಟವಿತ್ತು. ತಲೆಗಳ ಮೇಲೆ ದೇವದೂಷಣೆ ಮಾಡುವ ಹೆಸರುಗಳು ಇದ್ದವು. 2ನಾನು ಕಂಡ ಆ ಮೃಗವು ಚಿರತೆಯಂತಿತ್ತು. ಅದರ ಕಾಲುಗಳು ಕರಡಿಯ ಕಾಲುಗಳಂತಿದ್ದವು. ಬಾಯಿಯು, ಸಿಂಹದ ಬಾಯಂತೆ ಇತ್ತು. ಘಟಸರ್ಪವು ಆ ಮೃಗಕ್ಕೆ ತನ್ನ ಶಕ್ತಿಯನ್ನೂ ಸಿಂಹಾಸನವನ್ನೂ ಅಪಾರ ಅಧಿಕಾರವನ್ನೂ ಕೊಟ್ಟಿತು. 3ಅದರ ತಲೆಗಳಲ್ಲಿ ಒಂದು ತಲೆ ಗಾಯಗೊಂಡು ಅದು ಸಾಯುವ ಸ್ಥಿತಿಯಲ್ಲಿತ್ತು. ಆದರೆ ಮಾರಕವಾದ ಆ ಗಾಯವು ಗುಣವಾಯಿತು. ಇದನ್ನು ಕಂಡ ಭೂಲೋಕದವರೆಲ್ಲರೂ ವಿಸ್ಮಯಗೊಂಡು ಆ ಮೃಗವನ್ನು ಹಿಂಬಾಲಿಸಿದರು. 4ಜನರು ಆ ಮೃಗವನ್ನು ಮಾತ್ರವಲ್ಲ, ಅದಕ್ಕೆ ಅಧಿಕಾರವನ್ನು ಕೊಟ್ಟ ಘಟಸರ್ಪವನ್ನೂ ಆರಾಧಿಸಿದರು. ಮೃಗವನ್ನು ಕುರಿತು "ಈ ಮೃಗಕ್ಕೆ ಸಮಾನರು ಯಾರು? ಇದರೊಡನೆ ಯುದ್ಧಮಾಡಬಲ್ಲವರು ಯಾರು?" ಎಂದು ಹೇಳುತ್ತಿದ್ದರು.

5 ಜಂಬದ ಹೇಳಿಕೆಗಳನ್ನೂ ದೇವದೂಷಣೆಯ ಮಾತುಗಳನ್ನೂ ಆಡುವುದಕ್ಕೆ ಆ ಮೃಗಕ್ಕೆ ಒಂದು ಬಾಯನ್ನು ಕೊಡಲಾಗಿತ್ತು. ನಲವತ್ತ ಎರಡು ತಿಂಗಳುಗಳವರೆಗೆ ತನ್ನ ಕಾರ್ಯ ಸಾಧಿಸಿಕೊಳ್ಳುವ ಅಧಿಕಾರವನ್ನೂ ಅದಕ್ಕೆ ನೀಡಲಾಗಿತ್ತು. 6ಅದು ಬಾಯಿ ತೆರೆದು ದೇವರನ್ನು ದೂಷಿಸಿತು; ಅವರ ನಾಮವನ್ನು ಶಪಿಸಿತು. ಅವರ ಆಲಯವನ್ನು, ಅಂದರೆ ಸ್ವರ್ಗನಿವಾಸಿಗಳೆಲ್ಲರನ್ನೂ ತೆಗಳಿತು. 7ಇದಲ್ಲದೆ, ದೇವಜನರ ವಿರುದ್ಧ ಯುದ್ಧಮಾಡಿ, ಜಯಗಳಿಸುವಂತೆ ಅದಕ್ಕೆ ಅವಕಾಶವನ್ನು ಕೊಡಲಾಯಿತು. ಸಕಲ

ದೇಶ, ಭಾಷೆ, ಕುಲ, ಗೋತ್ರಗಳ ಮೇಲೆ ಅದಕ್ಕೆ ಅಧಿಕಾರವನ್ನು ನೀಡಲಾಯಿತು. [8]ಭೂನಿವಾಸಿಗಳೆಲ್ಲರೂ
ಅಂದರೆ, ಜಗತ್ತು ಸೃಷ್ಟಿ ಆಗುವ ಮೊದಲೇ ಯಾರಯಾರ ಹೆಸರುಗಳು ವಧೆಯಾದ ಯಜ್ಞದ
ಕುರಿಮರಿಯಾದಾತನ ಬಳಿಯಲ್ಲಿರುವ ಜೀವಬಾಧ್ಯರ ಪಟ್ಟಿಯಲ್ಲಿ ಲಿಖಿತವಾಗಿಲ್ಲವೋ, ಅಂಥವರೆಲ್ಲರೂ
ಆ ಮೃಗವನ್ನು ಆರಾಧಿಸುವರು. [9]ಕಿವಿಯುಳ್ಳವನು ಕೇಳಲಿ.
[10] ಸೆರೆಹಿಡಿಯುವವನು
ತಾನೇ ಸೆರೆಗೆ ಹೋಗುವನು;
ಖಡ್ಗದಿಂದ ಹತಿಸುವವನು
ಖಡ್ಗದಿಂದಲೇ ಹತನಾಗಬೇಕು.
ಆದ್ದರಿಂದ ದೇವಜನರು ಸಹನೆಯಿಂದಲೂ ವಿಶ್ವಾಸದಿಂದಲೂ ನಡೆದುಕೊಳ್ಳಬೇಕು.
11 ಬಳಿಕ ನಾನು ಮತ್ತೊಂದು ಮೃಗವನ್ನು ಕಂಡೆ. ಅದು ಭೂಮಿಯಿಂದ ಮೇಲೇರಿ ಬಂದಿತು.
ಅದಕ್ಕೆ ಟಗರಿಗಿರುವಂಥ ಎರಡು ಕೊಂಬುಗಳು ಇದ್ದವು. ಆದರೆ ಅದು ಘಟಸರ್ಪದಂತೆಯೇ
ಮಾತನಾಡುತ್ತಿತ್ತು. [12]ಈ ಮೃಗವು, ಮೊದಲನೆಯ ಮೃಗಕ್ಕಿದ್ದ ಅಧಿಕಾರವನ್ನೆಲ್ಲಾ ಅದರ ಎದುರಿನಲ್ಲೇ
ಚಲಾಯಿಸಿತು. ಮಾರಕವಾದ ಗಾಯದಿಂದ ಗುಣಹೊಂದಿದ ಆ ಮೊದಲನೆಯ ಮೃಗವನ್ನು
ಭೂಲೋಕವು ಮತ್ತು ಅದರ ನಿವಾಸಿಗಳು ಆರಾಧಿಸುವಂತೆ ಮಾಡಿತು. [13]ಎರಡನೆಯ ಮೃಗವು ದೊಡ್ಡ
ದೊಡ್ಡ ಪವಾಡಗಳನ್ನೆಸಗಿತು. ಜನರ ಮುಂದೆಯೇ ಬೆಂಕಿ ಆಕಾಶದಿಂದ ಹೊರಟು ಭೂಮಿಗೆ
ಬೀಳುವಂತೆ ಮಾಡಿತು. [14]ಮೊದಲನೆಯ ಮೃಗದ ಎದುರಿನಲ್ಲಿ ಪವಾಡಗಳನ್ನೆಸಗುವ ಅನುಮತಿ
ಇದ್ದುದರಿಂದ ಅದು ಭೂನಿವಾಸಿಗಳನ್ನು ಮರುಳುಗೊಳಿಸಿತು. ಖಡ್ಗದಿಂದ ಗಾಯಗೊಂಡಿದ್ದರೂ
ಸಾಯದೆ ಬದುಕಿದ್ದ ಮೃಗದ ಗೌರವಾರ್ಥ ಒಂದು ವಿಗ್ರಹವನ್ನು ನಿರ್ಮಿಸಬೇಕೆಂದು ಭೂನಿವಾಸಿಗಳಿಗೆ
ಅದು ವಿಧಿಸಿತು. [15]ಆ ಮೃಗದ ವಿಗ್ರಹಕ್ಕೆ ಜೀವಶ್ವಾಸವನ್ನೂದಿ ಮಾತಾಡುವಂತೆಯೂ ಆ ವಿಗ್ರಹವನ್ನು
ಆರಾಧಿಸದವರನ್ನು ಕೊಲ್ಲುವಂತೆಯೂ ಎರಡನೆಯ ಮೃಗಕ್ಕೆ ಅನುಮತಿಯನ್ನು ಕೊಡಲಾಯಿತು.
[16]ಹಿರಿಯ ಕಿರಿಯ, ಬಡವ ಬಲ್ಲಿದ, ದಾಸ ದಣಿಗಳು ಎಲ್ಲರೂ ತಮ್ಮ ತಮ್ಮ ಬಲಗೈಯ ಮೇಲಾಗಲಿ,
ಹಣೆಯ ಮೇಲಾಗಲಿ ಗುರುತಿನ ಹಚ್ಚೆ ಚುಚ್ಚಿಸಿಕೊಳ್ಳಬೇಕೆಂದು ಆ ಎರಡನೆಯ ಮೃಗ ಆಜ್ಞಾಪಿಸಿತು.
[17]ಆ ಗುರುತಿನ ಹಚ್ಚೆಯನ್ನು ಯಾರು ಚುಚ್ಚಿಸಿಕೊಳ್ಳಲಿಲ್ಲವೋ ಅವರು ಕೊಳ್ಳುವುದಕ್ಕಾಗಲಿ,
ಮಾರುವುದಕ್ಕಾಗಲಿ ಸಾಧ್ಯ ಇರಲಿಲ್ಲ. ಆ ಗುರುತಿನ ಮುದ್ರೆ ಏನೆಂದರೆ ಮೃಗದ ಹೆಸರು ಇಲ್ಲವೆ, ಆ
ಹೆಸರನ್ನು ಸೂಚಿಸುವ ಸಂಖ್ಯೆ.
18 ಇದನ್ನು ಅರ್ಥಮಾಡಿಕೊಳ್ಳಲು ಜ್ಞಾನ ಬೇಕು. ಬುದ್ಧಿವಂತನು ಮೃಗದ ಸಂಖ್ಯೆಯನ್ನು
ಎಣಿಸಲಿ. ಅದು ಒಬ್ಬ ಮನುಷ್ಯನನ್ನು ಸೂಚಿಸುವ ಸಂಖ್ಯೆ. ಆ ಸಂಖ್ಯೆಯು 666.

## ವಿಮೋಚನೆ ಹೊಂದಿದ ಪುನೀತರು

**14** ಅನಂತರ ಸಿಯೋನ್ ಬೆಟ್ಟದ ಮೇಲೆ ಯಜ್ಞದ ಕುರಿಮರಿಯಾದಾತನು, ನಿಂತಿರುವುದನ್ನು ಕಂಡೆ.
ಆತನ ಸಂಗಡ ಒಂದು ಲಕ್ಷದ ನಲವತ್ತನಾಲ್ಕು ಸಾವಿರ ಮಂದಿ ಇದ್ದರು. ಇವರು ತಮ್ಮ ಹಣೆಯ
ಮೇಲೆ ಯಜ್ಞದ ಕುರಿಮರಿಯ ಮತ್ತು ಆತನ ಪಿತನ ನಾಮಾಂಕಿತವನ್ನು ಬರೆಸಿಕೊಂಡಿದ್ದರು. [2]ಇದಲ್ಲದೆ,
ಸ್ವರ್ಗದಿಂದ ಮಹಾಧ್ವನಿಯೊಂದು ಕೇಳಿಸಿತು. ಅದು ಭೋರ್ಗರೆಯುವ ಜಲ ಪ್ರವಾಹದಂತೆಯೂ
ದೊಡ್ಡ ಗುಡುಗಿನ ಗರ್ಜನೆಯಂತೆಯೂ ಇತ್ತು. ನಾವು ಕೇಳಿದಂಥ ಧ್ವನಿ ಕಿನ್ನರಿಯನ್ನು ನುಡಿಸುತ್ತಿರುವ
ವಾದ್ಯಗಾರರ ಸ್ವರದಂತಿತ್ತು. [3]ಒಂದು ಲಕ್ಷದ ನಲವತ್ತ ನಾಲ್ಕು ಸಾವಿರ ಜನರು ಸಿಂಹಾಸನದ
ಸಾನ್ನಿಧ್ಯದಲ್ಲಿಯೂ ನಾಲ್ಕು ಜೀವಿಗಳ ಮುಂದೆಯೂ ಸಭಾಪ್ರಮುಖರ ಎದುರಿನಲ್ಲಿಯೂ ನಿಂತು ಒಂದು
ಹೊಸಗೀತೆಯನ್ನು ಹಾಡುತ್ತಿದ್ದರು. ಇಡೀ ಮಾನವಕುಲದವರಲ್ಲಿ ವಿಮೋಚನೆಯನ್ನು ಹೊಂದಿದವರು

ಇವರೇ. ಇವರನ್ನುಳಿದು ಬೇರೆ ಯಾರಿಂದಲೂ ಆ ಹಾಡನ್ನು ಕಲಿಯಲಾಗಲಿಲ್ಲ. [4]ಇವರು ಸ್ತ್ರೀಸಂಸರ್ಗದಿಂದ ಮಲಿನರಾಗದವರು; ಕನ್ನೆಯರಂತೆ ಕಳಂಕರಹಿತರು; ಇವರು ಯಜ್ಞದ ಕುರಿಮರಿ ಹೋದೆಡೆಯಲ್ಲೆಲ್ಲಾ ಹಿಂಬಾಲಿಸುವವರು; ದೇವರಿಗೂ ಯಜ್ಞದ ಕುರಿಮರಿಗೂ ಅರ್ಪಿತವಾದ ಪ್ರಥಮ ಫಲದಂತೆ ಮಾನವಕುಲದವರಲ್ಲಿ ವಿಮೋಚನೆಯನ್ನು ಹೊಂದಿದವರು ಇವರು. [5]ಸುಳ್ಳು ಮಾತು ಅವರ ಬಾಯಿಂದ ಬರುವುದಿಲ್ಲ; ಅವರು ನಿರ್ದೋಷಿಗಳು.

## ಭಕ್ತರಾಗಿ ಸಾಯುವವರು ಭಾಗ್ಯವಂತರು

6 ಮತ್ತೊಬ್ಬ ದೇವದೂತನು ಆಕಾಶ ಮಧ್ಯದಲ್ಲಿ ಹಾರುತ್ತಿರುವುದನ್ನು ಕಂಡೆ. ಸಕಲ ದೇಶ, ಭಾಷೆ, ಕುಲ ಗೋತ್ರದ ಜನರಿಗೂ ಸಾರಬೇಕಾದ ಅಮರ ಸಂದೇಶ ಆತನಲ್ಲಿತ್ತು. [7]ಆತನು ಮಹಾಶಬ್ದದಿಂದ, "ದೇವರಲ್ಲಿ ಭಯಭಕ್ತಿಯುಳ್ಳವರಾಗಿರಿ; ಅವರಿಗೆ ಸ್ತುತಿಸ್ತೋತ್ರ ಸಲ್ಲಿಸಿರಿ. ಏಕೆಂದರೆ, ಅವರು ತೀರ್ಪುಕೊಡುವ ಗಳಿಗೆಯು ಬಂದಿದೆ. ಆದ್ದರಿಂದ ಭೂಸ್ವರ್ಗಗಳನ್ನೂ ಕಡಲು ಕಾರಂಜಿಗಳನ್ನೂ ಸೃಷ್ಟಿಸಿದ ದೇವರಿಗೆ ಆರಾಧನೆ ಸಲ್ಲಿಸಿರಿ", ಎಂದು ಹೇಳಿದನು.

8 ಅನಂತರ ಎರಡನೆಯ ದೇವದೂತನು ಬಂದನು. ಆತನು,

"ಪತನ ಹೊಂದಿದಳು, ಪತನ ಹೊಂದಿದಳು,<br>
ಬಾಬಿಲೋನ್ ಮಹಾನಗರಿ;<br>
ಹಾದರವೆಂಬ ಕಾಮೋದ್ರೇಕದ ಮದ್ಯವನು<br>
ಸಕಲರಿಗೂ ಕುಡಿಸಿದ ನಗರಿ ಪತನವಾದಳು",

ಎಂದು ಹೇಳಿದನು.

9 ಇದಾದ ಮೇಲೆ ಮೂರನೆಯ ದೇವದೂತನು ಬಂದನು. ಈತನು ಗಟ್ಟಿಯಾದ ಧ್ವನಿಯಿಂದ ಹೀಗೆಂದನು: "ಯಾರಾದರೂ ಮೊದಲನೆಯ ಮೃಗವನ್ನೂ ಅದರ ವಿಗ್ರಹವನ್ನೂ ಪೂಜಿಸಿದರೆ ಅಥವಾ ತನ್ನ ಹಣೆಯ ಮೇಲಾಗಲೀ ಕೈಯ ಮೇಲಾಗಲೀ ಗುರುತಿನ ಹಚ್ಚೆಯನ್ನು ಚುಚ್ಚಿಸಿಕೊಂಡರೆ, [10]ಅಂಥವನು ದೇವರ ಕೋಪಾಗ್ನಿಯೆಂಬ ಪಾತ್ರೆಯಲ್ಲಿ ದೇವರ ಅಪ್ಪಟ ರೋಷವೆಂಬ ಮದ್ಯವನ್ನು ಕುಡಿಯಬೇಕಾಗುತ್ತದೆ. ಪರಿಶುದ್ಧ ದೇವದೂತರ ಮುಂದೆಯೂ ಯಜ್ಞದ ಕುರಿಮರಿಯ ಮುಂದೆಯೂ ಅಂಥವನು ಬೆಂಕಿಯಲ್ಲೂ ಗಂಧಕದಲ್ಲೂ ಬೆಂದು ನರಳುವನು. [11]ಅಂಥವರ ನರಳಾಟದ ಹೊಗೆ ಸತತ ಮೇಲೇರುತ್ತಿರುತ್ತದೆ. ಮೃಗಕ್ಕೂ ಅದರ ವಿಗ್ರಹಕ್ಕೂ ಪೂಜೆ ಸಲ್ಲಿಸುವವರು ಮತ್ತು ಅದರ ಹೆಸರನ್ನು ಸೂಚಿಸುವ ಹಚ್ಚೆಯನ್ನು ಚುಚ್ಚಿಸಿಕೊಂಡವರು ಹಗಲಿರುಳೂ ಬಿಡುವಿಲ್ಲದೆ ಸಂಕಟಪಡುವರು," ಎಂದು ಹೇಳಿದನು.

12 ಆದ್ದರಿಂದ ದೇವರ ಆಜ್ಞೆಗಳನ್ನು ಕೈಗೊಂಡು ಯೇಸುಸ್ವಾಮಿಯಲ್ಲಿ ವಿಶ್ವಾಸವಿಟ್ಟು ನಡೆಯುವ ದೇವಜನರಲ್ಲಿ ಸಹನೆ, ಸಹಿಷ್ಣುತೆ ಇರಬೇಕು.

13 ಇದಾದಮೇಲೆ ಸ್ವರ್ಗದಿಂದ ಬಂದ ಧ್ವನಿಯೊಂದು ಕೇಳಿಸಿತು. ಅದು ನನಗೆ, "ನೀನಿದನ್ನು ಬರೆ: ಇಂದಿನಿಂದ ಪ್ರಭುವಿನ ಭಕ್ತರಾಗಿ ಸಾಯುವವರು ಭಾಗ್ಯವಂತರು," ಎಂದು ತಿಳಿಸಿತು. ಆಗ ದೇವರ ಆತ್ಮ, "ಹೌದು, ಅವರೇ ಭಾಗ್ಯವಂತರು. ಇನ್ನು ಅವರ ಸಂಕಷ್ಟಗಳು ಮುಗಿದು ಅವರಿಗೆ ವಿಶ್ರಾಂತಿ ದೊರಕುವುದು; ಅವರ ಸುಕೃತ್ಯಗಳಿಗೆ ತಕ್ಕ ಪ್ರತಿಫಲ ದೊರಕುವುದು," ಎಂದು ಹೇಳಿತು.

## ಕೊಯ್ಲಿನ ಕಾಲ

14 ಅನಂತರ ನನ್ನ ಕಣ್ಣಿಗೆ ಒಂದು ಬಿಳಿಯ ಮೋಡ ಕಾಣಿಸಿತು. ಆ ಮೋಡದ ಮೇಲೆ ನರಪುತ್ರನಂಥ ವ್ಯಕ್ತಿಯೊಬ್ಬನು ಕುಳಿತಿದ್ದನು. ಆತನ ತಲೆಯ ಮೇಲೆ ಚಿನ್ನದ ಕಿರೀಟವಿತ್ತು; ಕೈಯಲ್ಲಿ

ಹರಿತವಾದ ಕುಡುಗೋಲಿತ್ತು. [15]ಇನ್ನೊಬ್ಬ ದೇವದೂತನು ದೇವಮಂದಿರದಿಂದ ಹೊರಗೆ ಬಂದನು.
ಈತನು ಮೋಡದ ಮೇಲೆ ಕುಳಿತಿದ್ದ ಅವನನ್ನು ಉದ್ದೇಶಿಸಿ, "ಭೂಮಿಯ ಫಸಲು ಮಾಗಿದೆ, ಕೊಯ್ಲಿನ
ಕಾಲ ಬಂದಿದೆ. ನಿನ್ನ ಕುಡುಗೋಲನ್ನು ತೆಗೆದು ಕೊಯಿಲು ಮಾಡಲು ಆರಂಭಿಸು", ಎಂದು ಗಟ್ಟಿಯಾಗಿ
ಕೂಗಿ ಹೇಳಿದನು. [16]ಆಗ ಮೋಡದ ಮೇಲೆ ಕುಳಿತಿದ್ದವನು ತನ್ನ ಕುಡುಗೋಲನ್ನು ಭೂಮಿಯ ಮೇಲೆ
ಬೀಸಿದನು. ಭೂಮಿಯ ಕೊಯಿಲು ಮುಗಿಯಿತು. [17]ಮಗದೊಬ್ಬ ದೇವದೂತನು ಸ್ವರ್ಗದ
ದೇವಮಂದಿರದಿಂದ ಹೊರಗೆ ಬಂದನು. ಆತನ ಕೈಯಲ್ಲೂ ಹರಿತವಾದ ಕುಡುಗೋಲು ಇತ್ತು.

18 ಬೆಂಕಿಯ ಮೇಲೆ ಅಧಿಕಾರ ಪಡೆದಿದ್ದ ಒಬ್ಬ ದೇವದೂತನು, ಆಗ ಬಲಿಪೀಠದ ಬಳಿಯಿಂದ
ಬಂದನು. ಈತ ಕೈಯಲ್ಲಿ ಹರಿತವಾದ ಕುಡುಗೋಲನ್ನು ಹಿಡಿದಿದ್ದ ದೇವದೂತನನ್ನು ಉದ್ದೇಶಿಸಿ, "ನಿನ್ನ
ಹರಿತವಾದ ಕುಡುಗೋಲನ್ನು ಕಳುಹಿಸು, ಭೂಮಿಯ ದ್ರಾಕ್ಷಾಫಲಗಳು ಪೂರ್ಣವಾಗಿ ಮಾಗಿವೆ; ಆ
ಗೊಂಚಲುಗಳನ್ನು ಕೊಯ್ಯಬೇಕಾಗಿದೆ", ಎಂದು ಕೂಗಿ ಹೇಳಿದನು. [19]ಆ ದೇವದೂತನು ತನ್ನ
ಕುಡುಗೋಲನ್ನು ಭೂಮಿಯ ಮೇಲೆ ಬೀಸಿ ದ್ರಾಕ್ಷಿಯ ಗೊಂಚಲುಗಳನ್ನು ಕೊಯ್ದನು; ಅವುಗಳನ್ನು
ದೇವರ ರೋಷವೆಂಬ ದ್ರಾಕ್ಷಿಯ ದೊಡ್ಡ ಆಲೆಗೆ ಎಸೆದನು. [20]ಪಟ್ಟಣದ ಹೊರಗಿನ ಆಲೆಯಲ್ಲಿ ದ್ರಾಕ್ಷಿಯ
ಹಣ್ಣನ್ನು ಹಿಂಡಲಾಯಿತು. ಆ ಆಲೆಯಿಂದ ರಕ್ತವು ಹರಿಯಿತು. ಅದು ಮುನ್ನೂರು ಕಿಲೊಮಿಟರಿನಷ್ಟು
ದೂರವಾಗಿಯೂ ಎರಡು ಮಿಟರಿನಷ್ಟು ಆಳವಾಗಿಯೂ ಹರಿಯಿತು.

## ಅಂತಿಮ ವ್ಯಾಧಿಗಳು

**15** ಸ್ವರ್ಗದಲ್ಲಿ ಮತ್ತೊಂದು ಚಿಹ್ನೆಯನ್ನು ಕಂಡೆ. ಅದು ಅತ್ಯಾಶ್ಚರ್ಯಕರವಾಗಿ ಇತ್ತು. ಏಳು
ದೇವದೂತರ ಕೈಯಲ್ಲಿ ಏಳು ವಿಪತ್ತುಗಳು ಇದ್ದವು. ಇವು ಅಂತಿಮವಾಗಿ ಬಂದೆರಗುವ ವಿಪತ್ತುಗಳು.
ಏಕೆಂದರೆ, ಅವುಗಳೊಡನೆ ದೇವರ ಕೋಪಾಗ್ನಿ ಪೂರ್ತಿಯಾಗಿ ಬಂದೆರಗುವುದು.

2 ಇದಲ್ಲದೆ, ಗಾಜಿನ ಸಮುದ್ರದಂತಿದ್ದ ಒಂದು ವಸ್ತು ಕಾಣಿಸಿತು; ಅದು ಬೆಂಕಿಯಿಂದ
ಕೂಡಿತ್ತು. ಮೃಗದ ವಿರುದ್ಧ, ಅದರ ವಿಗ್ರಹದ ವಿರುದ್ಧ ಹಾಗೂ ಅದರ ಹೆಸರನ್ನು ಸೂಚಿಸುವ
ಸಂಖ್ಯೆಯ ವಿರುದ್ಧ ಜಯಗಳಿಸಿದವರನ್ನು ಸಹ ಕಂಡೆ. ಅವರು ಗಾಜಿನ ಸಮುದ್ರದ ಬಳಿ ನಿಂತಿದ್ದರು;
ಕೈಗಳಲ್ಲಿ ದೇವರಿತ್ತ ಕಿನ್ನರಿಗಳಿದ್ದವು. [3]ಅವರು ದೇವರ ದಾಸನಾದ ಮೋಶೆಯ ಗೀತೆಯನ್ನೂ ಯಜ್ಞದ
ಕುರಿಮರಿಯ ಗೀತೆಯನ್ನೂ ಹಾಡುತ್ತಿದ್ದರು. ಅದು ಯಾವುದೆಂದರೆ:

"ಹೇ ದೇವಾ, ಹೇ ಪ್ರಭೂ, ನೀ ಸರ್ವಶಕ್ತ !
ಏನು ಘನ, ಏನು ಅದ್ಭುತ, ನಿನ್ನ ಸತ್ಕಾರ್ಯ!
ರಾಷ್ಟ್ರಗಳಿಗೆಲ್ಲಾ ನೀ ರಾಜಾಧಿರಾಜ
ನಿಜವಾದುದು, ಋಜುವಾದುದು ನಿನ್ನ
ಸನ್ಮಾರ್ಗ
[4] ಹೇ ಪ್ರಭೂ, ನಿನಗಂಜದವರಾರು?
ನಿನ್ನ ನಾಮಸ್ತುತಿ ಮಾಡದವರಾರು?
ಪರಮಪವಿತ್ರ ನೀನಲ್ಲದಿನ್ನಾರು
ಪ್ರಕಟವಾಗಿವೆ ನಿನ್ನ ನೀತಿಯುತ ಕಾರ್ಯಗಳು
ಬಂದೆರಗಲಿವೆ ನಿನಗೆ ಸಕಲ ಜನಾಂಗಗಳು."

5 ಇವುಗಳಾದ ಮೇಲೆ ನಾನು ಮತ್ತೊಂದು ದಿವ್ಯದರ್ಶನವನ್ನು ಕಂಡೆ. ಸ್ವರ್ಗದ
ದೇವಾಲಯವು ತೆರೆದಿತ್ತು. ದೈವಪ್ರಸನ್ನತೆಯ ಗುಡಾರವು ಅದರೊಳಗಿತ್ತು. [6]ಏಳು ವಿಪತ್ತುಗಳನ್ನು
ಹಿಡಿದಿದ್ದ ಏಳು ದೇವದೂತರು ಈ ದೇವಾಲಯದಿಂದ ಹೊರಗೆ ಬಂದರು. ಅವರು ಶುಭ್ರವಾದ ಮತ್ತು

ಹೊಳೆಯುವ ಉಡುಪುಗಳನ್ನು ತೊಟ್ಟಿದ್ದರು; ಎದೆಗಳಿಗೆ ಚಿನ್ನದ ಪಟ್ಟಿಗಳನ್ನು ಕಟ್ಟಿಕೊಂಡು ಇದ್ದರು.
7ನಾಲ್ಕು ಜೀವಿಗಳಲ್ಲಿ ಒಂದು ಜೀವಿ ಈ ಏಳು ಮಂದಿ ದೇವದೂತರಿಗೆ ಏಳು ಚಿನ್ನದ ಪಾತ್ರೆಗಳನ್ನು
ಕೊಟ್ಟಿತು. ಆ ಪಾತ್ರೆಗಳಲ್ಲಿ ಯುಗಯುಗಾಂತರಕ್ಕೂ ಜೀವಿಸುವ ದೇವರ ರೋಷವು ತುಂಬಿತುಳುಕುತ್ತಿತ್ತು.
8ದೇವರ ಸಾನ್ನಿಧ್ಯದ ತೇಜಸ್ಸು ಮತ್ತು ಪ್ರಭಾವಗಳು ದೇವಾಲಯವನ್ನು ಧೂಮದಿಂದ ತುಂಬಿದವು.
ಇದರಿಂದಾಗಿ, ಆ ಏಳು ದೇವದೂತರು ತಂದ ಏಳು ವಿಪತ್ತುಗಳು ಮುಗಿಯುವ ತನಕ ಆ
ದೇವಾಲಯವನ್ನು ಪ್ರವೇಶಿಸಲು ಯಾರಿಂದಲೂ ಸಾಧ್ಯವಾಗಲಿಲ್ಲ.

### ದೈವಕೋಪಾಗ್ನಿಯ ಸುರಿಮಳೆ

**16** ಅನಂತರ ದೇವಾಲಯದೊಳಗಿಂದ ಬಂದ ಮಹಾಶಬ್ದವನ್ನು ಕೇಳಿದೆ. ಅದು ಆ ಏಳು ದೇವದೂತರಿಗೆ, "ನೀವು ಹೋಗಿ ಏಳು ಪಾತ್ರೆಗಳಲ್ಲಿ ತುಂಬಿರುವ ದೇವರ ರೋಷವನ್ನು ಭೂಮಿಯ ಮೇಲೆ ಸುರಿಯಿರಿ," ಎಂದು ಆಜ್ಞಾಪಿಸಿತು.

2 ಅದರಂತೆಯೇ ಮೊದಲನೆಯ ದೇವದೂತನು ಹೋಗಿ ತನ್ನ ಪಾತ್ರೆಯಲ್ಲಿ ಇದ್ದುದನ್ನು ಭೂಮಿಯ ಮೇಲೆ ಸುರಿದನು. ಪರಿಣಾಮವಾಗಿ, ಮೊದಲನೆಯ ಮೃಗದ ಹಚ್ಚೆ ಚುಚ್ಚಿಸಿಕೊಂಡವರ ಮತ್ತು ಅದರ ವಿಗ್ರಹವನ್ನು ಪೂಜಿಸಿದವರ ಮೈಮೇಲೆಲ್ಲಾ ಭಯಂಕರವಾದ ಉರಿ ಹುಣ್ಣುಗಳು ಎದ್ದವು.

3 ಎರಡನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ಸಮುದ್ರದ ಮೇಲೆ ಸುರಿದನು. ಆಗ ಸಮುದ್ರದ ನೀರು ಸತ್ತವನ ರಕ್ತದಂತೆ ಆಯಿತು. ಸಮುದ್ರದಲ್ಲಿದ್ದ ಜಲಜಂತುಗಳೆಲ್ಲಾ ಸತ್ತು ಹೋದವು.

4 ಮೂರನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ನದಿಗಳ ಮೇಲೆಯೂ ನೀರಿನ ಒರತೆಗಳ ಮೇಲೆಯೂ ಸುರಿದನು. ನೀರೆಲ್ಲಾ ರಕ್ತಮಯವಾಯಿತು.

5ಆಗ ಜಲಾಧಿಕಾರಿಯಾದ ದೂತನು:
"ತ್ರಿಕಾಲಸ್ಥನು, ಪರಿಶುದ್ಧನು ನೀನೇ,
ನೀನಿತ್ತ ತೀರ್ಪು ನ್ಯಾಯಬದ್ಧವಾದುದೇ.
6 ದೇವಜನರ, ಪೂಜ್ಯ ಪ್ರವಾದಿಗಳ
ರಕ್ತಪಾತಕರಿಗೆ
ಕುಡಿಯಲು ನೀನಿತ್ತೆ ಆ ರಕ್ತವನೇ
ಅವರ ಕೃತ್ಯಕ್ಕದುವೇ ತಕ್ಕ ಸಂಭಾವನೆ,"
ಎಂದು ಹಾಡುವುದನ್ನು ನಾನು ಕೇಳಿಸಿಕೊಂಡೆ.
7ಅನಂತರ ಬಲಿಪೀಠದಿಂದ ಹೀಗೆ ಕೇಳಿ ಬಂತು:
"ಹೌದು ಪ್ರಭುವೇ, ಸರ್ವಶಕ್ತನೇ,
ನೀನಿತ್ತ ತೀರ್ಪು ಸತ್ಯ ಹಾಗೂ ನ್ಯಾಯ
ಬದ್ಧವಾದುದೇ."

8 ನಾಲ್ಕನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ಸೂರ್ಯನ ಮೇಲೆ ಸುರಿದನು. ಆಗ
ಸೂರ್ಯನಿಗೆ, ಕಡುಬಿಸಿಲಿನಿಂದ ಮನುಷ್ಯರನ್ನು ಸುಡುವ ಶಕ್ತಿಯನ್ನು ಕೊಡಲಾಯಿತು. 9ಮನುಷ್ಯರು
ಆ ಕಡು ಕಾವಿನಲ್ಲಿ ಬೆಂದು ನರಳಿದರು. ಈ ಮಾರಕ ವ್ಯಾಧಿಗಳ ಮೇಲೆ ಅಧಿಕಾರ ಇದ್ದ ದೇವರನ್ನೂ ದೂಷಿಸಿದರು. ತಮ್ಮ ಪಾಪಗಳಿಗಾಗಿ ಪಶ್ಚಾತ್ತಾಪಪಟ್ಟು ಅವರು ದೇವರಿಗೆ ಅಭಿಮುಖರಾಗಲಿಲ್ಲ; ಅವರ ಮಹಿಮೆಯನ್ನು ಸ್ತುತಿಸಲಿಲ್ಲ.

10 ಐದನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ಮೊದಲನೆಯ ಮೃಗದ
ಸಿಂಹಾಸನದ ಮೇಲೆ ಸುರಿದನು. ಕೂಡಲೇ ಆ ಮೃಗ ರಾಜ್ಯದ ಮೇಲೆ ಅಂಧಕಾರ ಕವಿಯಿತು. ಜನರು
ತಮಗೆ ಬಂದೆರಗಿದ ಬಾಧೆಯನ್ನು ತಾಳಲಾರದೆ ತಮ್ಮ ನಾಲಿಗೆಗಳನ್ನು ಕಚ್ಚಿಕೊಂಡರು. [11]ತಮ್ಮ ನೋವು
ಬಾಧೆಗಳ ನಿಮಿತ್ತವೂ ತಮ್ಮ ಉರಿ ಹುಣ್ಣುಗಳ ನಿಮಿತ್ತವೂ ಸ್ವರ್ಗದ ದೇವರನ್ನು ದೂಷಿಸಿದರು. ತಮ್ಮ
ದುಷ್ಕೃತ್ಯಗಳಿಗಾಗಿ ಪಶ್ಚಾತ್ತಾಪಪಟ್ಟು ದೇವರಿಗೆ ಅಭಿಮುಖರಾಗಲೇ ಇಲ್ಲ.

12 ಆರನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ಯೂಫ್ರೆಟಿಸ್ ಎಂಬ ಮಹಾನದಿಯ
ಮೇಲೆ ಸುರಿದನು. ಕೂಡಲೇ ಅದರ ನೀರು ಬತ್ತಿಹೋಯಿತು. ಇದರ ಪರಿಣಾಮವಾಗಿ ಪೂರ್ವ
ದೇಶದ ರಾಜರು ಬರುವುದಕ್ಕೆ ಮಾರ್ಗವಾಯಿತು. [13]ಇವುಗಳಾದ ಮೇಲೆ ಕಪ್ಪೆಗಳಂತಿದ್ದ ಮೂರು
ದುಷ್ಟಾತ್ಮಗಳನ್ನು ನಾನು ಕಂಡೆ. ಅವು ಘಟಸರ್ಪದ ಬಾಯೊಳಗಿಂದಲೂ ಮೃಗದ ಬಾಯೊಳಗಿಂದಲೂ
ಕಪಟ ಪ್ರವಾದಿಯ ಬಾಯೊಳಗಿಂದಲೂ ಹೊರಟು ಬಂದವು. [14]ಇವು ಪವಾಡ ಕಾರ್ಯಗಳನ್ನು
ಎಸಗುವ ದೆವ್ವಾತ್ಮಗಳು. ಸರ್ವಶಕ್ತ ದೇವರ ಮಹಾದಿನದಲ್ಲಿ ನಡೆಯುವ ಯುದ್ಧಕ್ಕಾಗಿ ಭೂಲೋಕದ
ರಾಜರುಗಳನ್ನೆಲ್ಲಾ ಒಟ್ಟುಗೂಡಿಸಲು ಅವು ಹೊರಟವು. [15]"ಇಗೋ, ಕಳ್ಳನು ಬರುವಂತೆ ನಾನು
ಬರುತ್ತೇನೆ. ಬೆತ್ತಲೆಯಾಗಿ ಎಲ್ಲರ ಮುಂದೆ ಕಾಣಿಸಿಕೊಂಡು ನಾಚಿಕೆಗೀಡಾಗದಂತೆ ಎಚ್ಚರವಾಗಿದ್ದು ತನ್ನ
ವಸ್ತ್ರಗಳನ್ನು ಧರಿಸಿಕೊಂಡಿರುವವನು ಭಾಗ್ಯವಂತನು!"

16 ಆ ದೆವ್ವಗಳು ಭೂರಾಜರೆಲ್ಲರನ್ನೂ ಒಂದು ಸ್ಥಳದಲ್ಲಿ ಸೇರಿಸಿದವು. ಆ ಸ್ಥಳಕ್ಕೆ ಹಿಬ್ರಿಯ
ಭಾಷೆಯಲ್ಲಿ, 'ಹರ್ಮಗೆದೋನ್' ಎಂದು ಹೆಸರು.

17 ಏಳನೆಯ ದೇವದೂತನು ತನ್ನ ಪಾತ್ರೆಯಲ್ಲಿದ್ದುದನ್ನು ವಾಯುಮಂಡಲದ ಮೇಲೆ
ಸುರಿದನು. ಆಗ ದೇವಾಲಯದ ಸಿಂಹಾಸನದ ಕಡೆಯಿಂದ ಒಂದು ದೊಡ್ಡ ಧ್ವನಿ ಉಂಟಾಗಿ,
"ಮುಗಿಸಿದ್ದಾಯಿತು," ಎಂದು ಹೇಳಿತು. [18]ಆಗ ಮಿಂಚು, ಗುಡುಗು, ಗರ್ಜನೆಗಳುಂಟಾದವು. ಇದಲ್ಲದೆ
ಭಯಂಕರವಾದ ಭೂಕಂಪ ಉಂಟಾಯಿತು. ಮಾನವ ಇತಿಹಾಸದಲ್ಲೇ ಅಂಥ ದೊಡ್ಡ
ಭೂಕಂಪವಾಗಿರಲಿಲ್ಲ. [19]ಮಹಾನಗರವು ಮೂರು ಭಾಗವಾಗಿ ಸೀಳಿಹೋಯಿತು. ಎಲ್ಲಾ ದೇಶಗಳ
ನಗರಗಳು ನಾಶವಾದವು. ಬಾಬಿಲೋನ್ ಎಂಬ ಮಹಾನಗರವನ್ನು ದೇವರು ಮರೆಯಲಿಲ್ಲ; ತಮ್ಮ
ರೋಷವೆಂಬ ಮದ್ಯಪಾತ್ರೆಯಿಂದ ಅದಕ್ಕೆ ಕುಡಿಯಲು ಕೊಟ್ಟರು. [20]ದ್ವೀಪಗಳು ಕಣ್ಮರೆ ಆದವು;
ಬೆಟ್ಟಗಳು ನೆಲಸಮವಾದವು. [21]ಆಕಾಶದಿಂದ ಮನುಷ್ಯರ ಮೇಲೆ ಆಲಿಕಲ್ಲಿನ ಮಳೆ ಸುರಿಯಿತು.
ಒಂದೊಂದು ಆಲಿಕಲ್ಲಿನ ತೂಕ ಸುಮಾರು ಐವತ್ತು ಕಿಲೊಗ್ರಾಮಿನಷ್ಟು ಇತ್ತು. ಆ ಆಲಿಕಲ್ಲಿನ ವಿಪತ್ತು
ಅಧಿಕವಾದುದರಿಂದಲೂ ಭಯಂಕರವಾದುದರಿಂದಲೂ ಜನರು ದೇವರನ್ನು ದೂಷಿಸಿದರು.

## ಕುರಿಮರಿಯ ಕೀರ್ತಿ

**17** ಏಳು ಪಾತ್ರೆಗಳನ್ನು ಹಿಡಿದಿದ್ದ ಏಳು ಮಂದಿ ದೇವದೂತರುಗಳಲ್ಲಿ ಒಬ್ಬನು ಬಂದನು. ಆತ
ನನಗೆ, "ಇಲ್ಲಿಗೆ ಬಾ, ಜಲರಾಶಿಗಳ ಮೇಲೆ ನಿಂತಿರುವ ಕುಖ್ಯಾತ ವೇಶ್ಯೆಗೆ ಬರುವ ದಂಡನೆಯನ್ನು
ನಿನಗೆ ತೋರಿಸುತ್ತೇನೆ; [2]ಭೂರಾಜರು ಅವಳೊಂದಿಗೆ ಹಾದರ ಮಾಡಿದರು. ಭೂನಿವಾಸಿಗಳು ಅವಳ
ಹಾದರವೆಂಬ ಮದ್ಯ ಸೇವಿಸಿ ಮತ್ತರಾದರು," ಎಂದು ಹೇಳಿದನು.

3 ನಾನು ದೇವರಾತ್ಮ ವಶನಾದೆ. ಆಗ ದೇವದೂತನು ನನ್ನನ್ನು ಅಡವಿಗೆ ಕೊಂಡೊಯ್ದನು.
ಅಲ್ಲಿ, ಒಂದು ಕಡುಗೆಂಪಾದ ಮೃಗದ ಮೇಲೆ ಕುಳಿತಿದ್ದ ಸ್ತ್ರೀಯೊಬ್ಬಳನ್ನು ಕಂಡೆ. ಆ ಮೃಗದ
ಮೈಮೇಲೆಲ್ಲಾ ದೇವದೂಷಣೆಯ ಮಾತುಗಳೇ ತುಂಬಿದ್ದವು. ಅದಕ್ಕೆ ಏಳು ತಲೆಗಳೂ ಹತ್ತು
ಕೊಂಬುಗಳೂ ಇದ್ದವು. [4]ಆ ಸ್ತ್ರೀ ಕೆನ್ನೀಲಿಯ ಹಾಗೂ ಕಡುಗೆಂಪಾದ ಬಟ್ಟೆಯನ್ನು ಧರಿಸಿದ್ದಳು; ಚಿನ್ನ,
ಮುತ್ತು, ರತ್ನಾಭರಣಗಳಿಂದ ಅಲಂಕೃತಳಾಗಿದ್ದಳು. ಕೈಯಲ್ಲಿ ಚಿನ್ನದ ಪಾತ್ರೆಯನ್ನೂ ಹಿಡಿದಿದ್ದಳು.

ಅವಳ ಹಾದರದ ಅಸಹ್ಯಗಳಿಂದಲೂ ಕಳಂಕಗಳಿಂದಲೂ ಅದು ತುಂಬಿತ್ತು. [5]ಅವಳ ಹಣೆಯ ಮೇಲೆ :

"ಬಾಬಿಲೋನ್ ಮಹಾನಗರಿ
ವೇಶ್ಯೆಯರ ಮಹಾತಾಯಿ
ಜಗತ್ತಿನ ದುರ್ನಡತೆಗಳ ಜನನಿ,"

ಎಂಬ ನಿಗೂಢವಾದ ಹೆಸರಿತ್ತು. [6]ದೇವಜನರ ರಕ್ತವನ್ನು ಮತ್ತು ಕ್ರಿಸ್ತೇಸುವಿಗೋಸ್ಕರ ಹುತಾತ್ಮರಾದವರ ರಕ್ತವನ್ನು ಹೀರಿ ಮತ್ತಳಾಗಿದ್ದಳು ಅವಳು.

ಇದನ್ನು ಕಂಡು ನನಗೆ ದಿಗ್ಭ್ರಮೆಯಾಯಿತು. [7]ಆ ದೇವದೂತನು ನನಗೆ ಹೀಗೆ ಹೇಳಿದನು: "ನೀನು ದಿಗ್ಭ್ರಮೆಗೊಂಡಿರುವುದೇಕೆ? ಆ ಸ್ತ್ರೀಯ ಹಾಗೂ ಅವಳ ವಾಹನವಾಗಿರುವ ಏಳು ತಲೆ, ಹತ್ತು ಕೊಂಬುಗಳುಳ್ಳ ಮೃಗದ ನಿಗೂಢತೆಯನ್ನು ನಾನು ನಿನಗೆ ವಿವರಿಸುತ್ತೇನೆ. [8]ನೀನು ಕಂಡ ಈ ಮೃಗ ಒಮ್ಮೆ ಇತ್ತು, ಆದರೆ ಈಗ ಇಲ್ಲ. ಅದು ಪಾತಾಳಕೂಪದಿಂದ ಬಂದು ವಿನಾಶದತ್ತ ತೆರಳುತ್ತದೆ. ಭೂನಿವಾಸಿಗಳಲ್ಲಿ ಲೋಕಾದಿಯಿಂದ ಜೀವಬಾಧ್ಯರ ಪಟ್ಟಿಯಲ್ಲಿ ಯಾರ ಯಾರ ಹೆಸರುಗಳನ್ನು ಬರೆದಿಲ್ಲವೋ ಅಂಥವರು ಅದನ್ನು ಕಂಡು ದಿಗ್ಭ್ರಮೆಗೊಳ್ಳುವರು. ಏಕೆಂದರೆ, ಈ ಮೃಗ ಒಮ್ಮೆ ಇತ್ತು. ಆದರೆ ಈಗ ಇಲ್ಲ. ಆದರೆ ಅದು ಮತ್ತೊಮ್ಮೆ ಬರಲಿದೆ.

9 "ಇದನ್ನು ಗ್ರಹಿಸಿಕೊಳ್ಳಲು ಬುದ್ಧಿ ಸಾಮರ್ಥ್ಯವಿರಬೇಕು. ಏಳು ತಲೆಗಳು ಆ ಸ್ತ್ರೀ ಕುಳಿತಿರುವ ಏಳು ಬೆಟ್ಟಗಳನ್ನೂ ಏಳು ರಾಜರನ್ನೂ ಸೂಚಿಸುತ್ತವೆ. [10]ಈ ಏಳು ರಾಜರಲ್ಲಿ ಈಗಾಗಲೇ ಐದು ಮಂದಿ ಪತನಹೊಂದಿದ್ದಾರೆ. ಒಬ್ಬ ರಾಜನು ಈಗ ಆಳುತ್ತಿದ್ದಾನೆ. ಮತ್ತೊಬ್ಬನು ಇನ್ನೂ ತಲೆದೋರಿಲ್ಲ. ಅವನು ಬಂದಾಗ ಕೊಂಚಕಾಲ ಮಾತ್ರ ರಾಜ್ಯವಾಳುತ್ತಾನೆ. [11]ಹಿಂದೊಮ್ಮೆ ಇದ್ದು ಈಗ ಇಲ್ಲದಿರುವ ಮೃಗವು ಎಂಟನೆಯ ರಾಜನನ್ನು ಸೂಚಿಸುತ್ತದೆ. ಅದು ಆ ಏಳು ಮಂದಿಗೆ ಸೇರಿದುದು ಮತ್ತು ವಿನಾಶದತ್ತ ತೆರಳುವಂಥಾದ್ದು.

12 "ನೀನು ಕಂಡ ಹತ್ತು ಕೊಂಬುಗಳು ಹತ್ತು ರಾಜರುಗಳನ್ನು ಸೂಚಿಸುತ್ತವೆ. ಅವರು ಇನ್ನೂ ರಾಜ್ಯಭಾರವನ್ನು ವಹಿಸಿಕೊಂಡಿಲ್ಲ. ಆ ಮೃಗದ ಜೊತೆಯಲ್ಲಿ ರಾಜ್ಯವಾಳಲು ಒಂದು ಗಂಟೆಯವರೆಗೆ ಅವರಿಗೆ ಅಧಿಕಾರವನ್ನು ಕೊಡಲಾಗುವುದು. [13]ಅವರು ಒಮ್ಮನಸ್ಸಿನವರಾಗಿ ತಮ್ಮ ಶಕ್ತಿಸಾಮರ್ಥ್ಯವನ್ನೂ ಅಧಿಕಾರವನ್ನೂ ಆ ಮೃಗಕ್ಕೆ ಒಪ್ಪಿಸಿಬಿಡುತ್ತಾರೆ. [14]ಅವರು ಯಜ್ಞದ ಕುರಿಮರಿಯ ಮೇಲೆ ಯುದ್ಧಮಾಡುವರು. ಆದರೆ ಯಜ್ಞದ ಕುರಿಮರಿಗೆ ಜಯವಾಗುವುದು. ಆ ಕುರಿಮರಿಯು ಒಡೆಯರಿಗೆಲ್ಲಾ ಒಡೆಯನೂ ರಾಜಾಧಿರಾಜನೂ ಆಗಿರುವುದೇ ಇದಕ್ಕೆ ಕಾರಣ. ದೇವರ ಕರೆ ಹೊಂದಿದವರೂ ದೇವರು ಆಯ್ದುಕೊಂಡವರೂ ಆದ ಪ್ರಾಮಾಣಿಕ ಅನುಯಾಯಿಗಳು ಆ ಜಯದಲ್ಲಿ ಪಾಲುಗಾರರಾಗುವರು," ಎಂದನು.

15 ಆ ದೇವದೂತನು ಮುಂದುವರಿದು ಹೀಗೆ ನುಡಿದನು: "ಜಲರಾಶಿಗಳ ಮೇಲೆ ನಿಂತಿದ್ದ ಆ ವೇಶ್ಯೆಯನ್ನು ನೋಡಿದೆಯಲ್ಲಾ! ಆ ಜಲರಾಶಿಯು ಜನಾಂಗಗಳನ್ನೂ ಜನಸಮೂಹವನ್ನೂ ರಾಷ್ಟ್ರಗಳನ್ನೂ ಭಾಷೆಗಳನ್ನೂ ಸೂಚಿಸುತ್ತದೆ. [16]ನೀನು ಕಂಡ ಮೃಗವೂ ಅದರ ಹತ್ತು ಕೊಂಬುಗಳೂ ಆ ವೇಶ್ಯೆಯನ್ನು ದ್ವೇಷಿಸುವವರನ್ನು ಸೂಚಿಸುತ್ತದೆ. ಅವರು ಅವಳನ್ನು ನಿರ್ಗತಿಕಳನ್ನಾಗಿ ಮಾಡುವರು, ಬೆತ್ತಲೆಯಾಗಿಸುವರು; ಅವಳ ಮಾಂಸವನ್ನು ಕಿತ್ತು ತಿನ್ನುವರು; ಅವಳನ್ನೇ ಬೆಂಕಿಯಲ್ಲಿ ಸುಟ್ಟುಬಿಡುವರು. [17]ಹೀಗೆ ದೈವ ಸಂಕಲ್ಪವು ನೆರವೇರಬೇಕೆಂದು ದೇವರೇ ಆ ಜನರನ್ನು ಪ್ರೇರೇಪಿಸುವರು. ಇದೇ ಪ್ರೇರಣೆಯಿಂದಾಗಿ ದೇವರ ವಾಕ್ಯ ನೆರವೇರುವವರೆಗೆ ಅವರು ಒಮ್ಮನಸ್ಸಿನಿಂದ ರಾಜ್ಯಾಧಿಕಾರವನ್ನು ಆ ಮೃಗಕ್ಕೆ ಒಪ್ಪಿಸಿಬಿಡುವರು.

18 ನೀನು ಕಂಡ ಆ ಸ್ತ್ರೀಯು ಭೂರಾಜರ ಮೇಲೆ ಅಧಿಕಾರವುಳ್ಳ ಮಹಾನಗರದ ಸೂಚನೆಯಾಗಿದ್ದಾಳೆ.”

## ಬಾಬಿಲೋನ್ ಪಟ್ಟಣದ ಪತನ

**18** ಇವುಗಳಾದ ಬಳಿಕ ನಾನು ಮತ್ತೂ ಒಂದು ದಿವ್ಯದರ್ಶನವನ್ನು ಕಂಡೆ. ಸ್ವರ್ಗದಿಂದ ಮತ್ತೊಬ್ಬ
ದೇವದೂತನು ಇಳಿದು ಬಂದನು. ಅವನು ವಿಶೇಷ ಅಧಿಕಾರ ಪಡೆದಿದ್ದನು. ಅವನ ತೇಜಸ್ಸು
ಭೂಮಿಯನ್ನು ಬೆಳಗಿತು. 2ಅವನು ಗಟ್ಟಿಯಾದ ಧ್ವನಿಯಿಂದ ಇಂತೆಂದನು:

“ಪತನ ಹೊಂದಿದಳು ಪತನ ಹೊಂದಿದಳು
ಬಾಬಿಲೋನ್ ಮಹಾನಗರಿ ಪತನ ಹೊಂದಿದಳು
ದೆವ್ವದುರಾತ್ಮಗಳಿಗೆ ಬೀಡಾದಳು
ಅಶುದ್ಧ ಪ್ರಾಣಿಪಕ್ಷಿಗಳಿಗೆ ಗೂಡಾದಳು.
3 ಕುಡಿಸಿದಳು ನಾಡುನಾಡುಗಳಿಗೆ
ತನ್ನ ಹಾದರವೆಂಬ ಮದ್ಯವನು.
ವ್ಯಭಿಚಾರಗೈದರು ಅವಳೊಡನೆ ಭೂರಾಜರು
ಅವಳ ಭೋಗವಿಲಾಸದಿಂದ ಧನಿಕರಾದರು
ಇಳೆಯ ವರ್ತಕರು.”
4 ಸ್ವರ್ಗದಿಂದ ಬಂದ ಮತ್ತೊಂದು ವಾಣಿಯನು
ಕೇಳಿದೆ. ಅದು:
“ನನ್ನ ಜನರೇ, ಅವಳನ್ನು ತೊರೆದು ಹೊರಬನ್ನಿ,
ಪಾಲುಗಾರರಾಗದಿರಿ ಅವಳ ಪಾಪಗಳಲಿ
ತುತ್ತಾಗದಿರಿ ಅವಳಿಗೆ ಬಂದೆರಗುವ
ವಿಪತ್ತುಗಳಲಿ!
5 ಅವಳ ಪಾಪಗಳು ಬೆಳೆಬೆಳೆದು ಆಗಸಕ್ಕೇರುತಿವೆ
ಅವಳ ಅಕ್ರಮ ಅನ್ಯಾಯಗಳು ದೇವರ
ನೆನಪಿನಲ್ಲಿವೆ
6 ಅವಳು ಅಳೆದ ಅಳತೆಯಲ್ಲೇ ನೀವು ಅವಳಿಗೆ
ಅಳೆಯಿರಿ:
ಅವಳ ಕೃತ್ಯಗಳಿಗೆ ಇಮ್ಮಡಿಯಾಗಿ
ಹಿಂದಿರುಗಿಸಿರಿ
ಬೆರೆಸಿಕೊಡಿ ದ್ವಿಗುಣದಿ ಅವಳೇ ಬೆರೆಸಿದ
ಮದ್ಯದ ಬಟ್ಟಲಲಿ.
7 ಅಹಂಭಾವದಿಂದಾಕೆ ಮೆರೆದುದಕೆ
ಪೀಡಿಸಿ ಕಾಡಿಸಿರಿ ಸರಿಯಾದ ಅಳತೆಯಲ್ಲೇ.
ಹೃದಯದಲಿ ಹೇಳುತಿಹಳು ಅವಳಿಂತು:
ರಾಣಿಯಂತೆ ನಾ ಕುಳಿತಿಹೆನು
ವಿಧವೆಯಲ್ಲ ನಾನೇನು
ಕಾಣೆನೆಂದಿಗೂ ದುಃಖವನು.

[8] ಈ ಕಾರಣ, ಒಂದೇ ದಿನದಲಿ ಬಂದೆರಗುವುವು
ಸಾವು ನೋವು ಕ್ಷಾಮಡಾಮರಗಳು
ಬೆಂಕಿಯಲ್ಲವಳು ಭಸ್ಮವಾಗುವಳು
ಅವಳ ದಂಡಿಪ ಪ್ರಭುವು ಬಲಾಢ್ಯ ದೇವನು."

9 ಅವಳೊಡನೆ ವ್ಯಭಿಚಾರಮಾಡಿದ ಹಾಗೂ ಭೋಗವಿಲಾಸದಿಂದ ಬಾಳಿದ ಭೂರಾಜರು ಅವಳನ್ನು ದಹಿಸುವ ಚಿತೆಯಿಂದ ಮೇಲೇರುವ ದಟ್ಟ ಹೊಗೆಯನ್ನು ದಿಟ್ಟಿಸಿ ನೋಡಿ ಶೋಕಿಸುವರು. [10]ಅವಳಿಗಾದ ಚಿತ್ರಹಿಂಸೆಯ ನಿಮಿತ್ತ ಭಯಪಟ್ಟು ದೂರದಲ್ಲೇ ನಿಂತು ಗೋಳಾಡುತ್ತಾ:

"ಅಯ್ಯೋ! ಅಯ್ಯೋ!
ಬಲಿಷ್ಠ ಬಾಬಿಲೋನ್ ಮಹಾನಗರಿಯೇ
ಒಂದೇ ತಾಸಿನಲ್ಲಿ ಬಂದೊದಗಿತಲ್ಲಾ ನಿನಗಿಂಥ
ದುರ್ಗತಿ,"

ಎಂದು ಪ್ರಲಾಪಿಸುವರು.

11 ಈ ಲೋಕದ ವರ್ತಕರೂ ಅವಳ ನಿಮಿತ್ತ ಗೋಳಾಡುತ್ತಾ ತಮ್ಮ ಸರಕು ಸಾಮಗ್ರಿಗಳನ್ನು ಕೊಂಡುಕೊಳ್ಳುವವರು ಯಾರೂ ಇಲ್ಲವಲ್ಲಾ ಎಂದು ದುಃಖಿಸುವರು. [12]ಇವರು ಚಿನ್ನ, ಬೆಳ್ಳಿ, ಮುತ್ತು, ರತ್ನಾಭರಣಗಳನ್ನೂ ನಯವಾದ ನಾರುಮಡಿ, ಕೆನ್ನೀಲಿಯ ವಸ್ತ್ರ, ರೇಷ್ಮೆ ಬಟ್ಟೆ ಮತ್ತು ಕಡುಗೆಂಪು ಉಡುಪುಗಳನ್ನೂ ಎಲ್ಲಾ ಬಗೆಯ ಗಂಧಕ ಚಕ್ಕೆಗಳನ್ನೂ ಎಲ್ಲಾ ವಿಧದ ದಂತದ ಸಾಮಾನುಗಳನ್ನೂ ಬಹು ಬೆಲೆಬಾಳುವ ಮರದ, ಕಂಚಿನ, ಕಬ್ಬಿಣದ, ಚಂದ್ರಕಾಂತ ಶಿಲೆಯ ಸಾಮಾನುಗಳನ್ನೂ ಅವಳಿಗೆ ಮಾರುತ್ತಿದ್ದರು. [13]ಇದಲ್ಲದೆ ಚಕ್ಕೆ, ಲವಂಗ, ರಕ್ತಬೋಳ, ಧೂಪ, ಸುಗಂಧತೈಲ ಮತ್ತು ಸಾಂಬ್ರಾಣಿಗಳನ್ನೂ ಮದ್ಯ, ಎಣ್ಣೆ, ಹದವಾದ ಹಿಟ್ಟು, ಗೋದಿ ಇವುಗಳನ್ನೂ ದನ, ಕುರಿ, ಕುದುರೆ, ರಥ, ಗುಲಾಮ ಮತ್ತು ಜೀತದಾಳು ಇವೆಲ್ಲವನ್ನೂ ಆ ವರ್ತಕರು ಅವಳಿಗೆ ಮಾರುತ್ತಿದ್ದರು.

[14] "ಬಾಬಿಲೋನೇ,
ನೀ ಹಂಬಲಿಸಿದ ಫಲ ನಿನ್ನಿಂದ ದೂರ
ಸರಿಯಿತು
ನಿನ್ನೆಲ್ಲ ವಿಲಾಸ ವೈಭವಗಳು ನಂದಿಹೋದವು
ಮರಳಿ ಕಾಣವವು ಇನ್ನೆಂದಿಗೂ."

[15]ವ್ಯಾಪಾರ ಮಾಡಿ ಅವಳಿಂದ ಧನಿಕರಾದ ವರ್ತಕರು ಅವಳಿಗುಂಟಾದ ಚಿತ್ರಹಿಂಸೆಯನ್ನು ದೂರದಲ್ಲಿ ನಿಂತು ನೋಡಿ, ಭಯಭ್ರಾಂತರಾಗಿ ಅವಳನ್ನುದ್ದೇಶಿಸಿ:

[16] "ಅಯ್ಯೋ! ಅಯ್ಯೋ!
ಮಹಾನಗರಿ ನಿನಗೆಂಥಾ ದುರ್ಗತಿ!
ಕೆನ್ನೀಲಿಯ ಕಡುಗೆಂಪಿನ ನಯವಸ್ತ್ರ
ಗಳನುಟ್ಟವಳೇ,
ಹೊನ್ನ ತೊಟ್ಟವಳೇ, ಮುತ್ತು
ರತ್ನಾಭರಣಗಳನು ಧರಿಸಿದವಳೇ,
ತಾಸೊಂದರಲೇ ನಿನ್ನ ಐಸಿರಿಯೆಲ್ಲಾ
ವ್ಯರ್ಥವಾಯಿತೇ!"

ಎಂದು ದುಃಖಿಸಿ ಅತ್ತು ಗೋಳಾಡುವರು.

17 ಆಗ ಹಡಗುಗಳ ಮಾಲೀಕರೆಲ್ಲರೂ ಸಮುದ್ರದ ಪ್ರಯಾಣಿಕರೂ ನಾವಿಕರೂ ಸಮುದ್ರದ
ದುಡಿಮೆಗಾರರೂ ದೂರದಲ್ಲಿ ನಿಂತಿದ್ದರು. [18]ಅವರು ಅವಳನ್ನು ದಹಿಸಿದ ಬೆಂಕಿಯ ದಟ್ಟ ಹೊಗೆಯನ್ನು
ಕಂಡು, "ಈ ಮಹಾನಗರಿಗೆ ಸರಿಸಮನಾದ ನಗರವೊಂದುಂಟೇ?" ಎಂದು ಉದ್ಗರಿಸಿದರು. [19]ಅವರು
ತಮ್ಮ ತಲೆಗಳ ಮೇಲೆ ಮಣ್ಣನ್ನು ಸುರಿದುಕೊಂಡು ಆರ್ತಧ್ವನಿಯಿಂದ:

"ನಿನಗೆಂಥಾ ದುರ್ಗತಿ, ಓ ಮಹಾನಗರಿ!
ಕಡಲಲಿ ಸಾಗುವ ಹಡಗಿನವರನ್ನೆಲ್ಲಾ
ಧನಿಕರನ್ನಾಗಿಸಿದ ನಿನ್ನ ಐಸಿರಿಯಿಂದ
ತಾಸೊಂದರಲೇ, ಅಯ್ಯೋ ನೀ ನಾಶ
ಆದೆಯಲ್ಲಾ !"

ಎಂದು ಪರಿತಪಿಸಿದರು.

20 "ಸ್ವರ್ಗನಿವಾಸಿಗಳೇ, ಸಂಭ್ರಮಿಸಿ;
ದೇವಜನರೇ, ಪ್ರೇಷಿತರೇ
ಪ್ರವಾದಿಗಳೇ, ಹರ್ಷಿಸಿ!
ದಂಡಿಸಿರುವರು ಅವಳನು ದೇವರೇ ಸರಿಯಾಗಿ
ನಿಮಗಾಕೆ ಎಸಗಿದಕ್ಕೆ ಪ್ರತಿಯಾಗಿ."

21 ಆಗ ಒಬ್ಬ ಬಲಿಷ್ಠ ದೇವದೂತನು ಬೀಸುವ ಕಲ್ಲಿನಂತಿದ್ದ ಒಂದು ದೊಡ್ಡ ಕಲ್ಲನ್ನು ಎತ್ತಿ
ಸಮುದ್ರಕ್ಕೆ ಎಸೆದು ಹೀಗೆಂದನು:

"ಬಾಬಿಲೋನ್ ಮಹಾನಗರವನು
ಈ ಪರಿಯಾಗಿ ಎತ್ತೆಸೆಯಲಾಗುವುದು
ಅವಳಿದ್ದ ಎಡೆಯು ಯಾರಿಗೂ
ಕಾಣಸಿಗದಂತಾಗುವುದು.

22 "ಎಲೈ ಬಾಬಿಲೋನೇ,
ಕಿನ್ನರಿಗಾರರ, ಸಂಗೀತಗಾರರ,
ಕೊಳಲ ನುಡಿಸುವವರ,
ತುತೂರಿಯನೂದುವವರ
ಮಧುರ ಗಾನವು ಕೇಳಿಬರದು ನಿನ್ನಲಿ
ಮತ್ತೆಂದೂ,
ಕುಶಲಕರ್ಮಿಗಳಾರೂ ಕಾಣಸಿಗರು ಇನ್ನೆಂದೂ,
ಬೀಸುವ ಕಲ್ಲಿನ ಶಬ್ದವೇ ಇರದು
ನಿನ್ನಲ್ಲಿ ಎಂದೆಂದೂ !

23 "ಉರಿಯುವ ದೀಪದ ಬೆಳಕು ಹೊಳೆಯದು
ನಿನ್ನಲ್ಲಿ,
ವಧುವರರ ಇನಿದನಿ ಕೇಳದು ನಿನ್ನಲ್ಲಿ.
ಇದ್ದರು ನಿನ್ನ ವರ್ತಕರು ಇಳೆಗೆ ಧನವಂತರಾಗಿ,
ಬಿದ್ದವು ರಾಷ್ಟ್ರಗಳು ನಿನ್ನ ಜಾಲಕೆ ವಂಚಿತರಾಗಿ.

24 ಹರಿಯಿತಾ ನಗರದಲಿ ಪ್ರವಾದಿಗಳ ರಕ್ತ
ದೇವಜನರ, ಭೂಮಿಯಲ್ಲಿ ಬಲಿಯಾದೆಲ್ಲರ ರಕ್ತ."

## ಸ್ವರ್ಗದಲ್ಲಿ ಸಂಭ್ರಮ

**19** ಇದಾದ ಬಳಿಕ ನಾನು ಮತ್ತೊಂದು ದಿವ್ಯದರ್ಶನವನ್ನು ಕಂಡೆ. ಸ್ವರ್ಗದಿಂದ ಬಂದ ಒಂದು ಮಹಾಶಬ್ದವನ್ನು ಆಲಿಸಿದೆ. ಅದು ದೊಡ್ಡ ಜನಸಮೂಹದ ಆರ್ಭಟದಂತಿತ್ತು.

"ಅಲ್ಲೆಲೂಯ !
ಜೀವೋದ್ಧಾರವೂ ಪ್ರಭಾವವೂ
ಶಕ್ತಿಯೂ ನಮ್ಮ ದೇವರಲ್ಲುಂಟು.
2 ಆತನ ನ್ಯಾಯತೀರ್ಪು ಸತ್ಯವಾದುದು
ನೀತಿಬದ್ಧವಾದುದು.
ಇತ್ತಿರುವನಾತ ತೀರ್ಪನು ಮಹಾ ವೇಶ್ಯೆಯ
ವಿರುದ್ಧ
ಪೃಥ್ವಿಯನೇ ಹೊಲಸೆಬ್ಬಿಸಿದ ವ್ಯಭಿಚಾರಿಣಿಯ
ವಿರುದ್ಧ
ತನ್ನ ದಾಸರ ರಕ್ತಪಾತದ ಸೇಡನು
ತೀರಿಸಿಹನಾತ,"

ಎಂದು ಜನಸಮೂಹವು ಘೋಷಿಸಿತು.
3ಅವರು ಮತ್ತೊಮ್ಮೆ,

"ಅಲ್ಲೆಲೂಯ !
ಅವಳ ದಹನದಿಂದ ಹೊಗೆ
ಸತತ ಮೇಲೇರುತಿಹುದು ಒಂದೇಸಮನೆ"

ಎಂದು ಕೂಗಿದರು.
4ಆಗ ಇಪ್ಪತ್ನಾಲ್ಕು ಮಂದಿ ಸಭಾಪ್ರಮುಖರೂ ನಾಲ್ಕು ಜೀವಿಗಳೂ ಸಿಂಹಾಸನಾರೂಢರಾದ ದೇವರಿಗೆ ಸಾಷ್ಟಾಂಗ ನಮಸ್ಕಾರ ಮಾಡಿದರು.

"ಆಮೆನ್, ಅಲ್ಲೆಲೂಯ," ಎಂದರು.

## ಸ್ವರ್ಗೀಯ ಸಂಭ್ರಮಕ್ಕೆ ಆಮಂತ್ರಣ

5 ಬಳಿಕ ಸಿಂಹಾಸನದ ಕಡೆಯಿಂದ ಬಂದ ಒಂದು ಧ್ವನಿ:

"ದೇವರ ಎಲ್ಲಾ ದಾಸರೇ,
ಅವರಲ್ಲಿ ಭಯಭಕ್ತಿಯುಳ್ಳ ಹಿರಿಯಕಿರಿಯರೇ,
ನಮ್ಮ ದೇವರನ್ನು ಕೊಂಡಾಡಿ,"

ಎಂದು ಹೇಳಿತು.
6ತರುವಾಯ ನನಗೆ ಮತ್ತೊಂದು ಧ್ವನಿ ಕೇಳಿಸಿತು. ಅದು ದೊಡ್ಡ, ಜನಸಮೂಹದ ಆರ್ಭಟದಂತೆಯೂ ಭೋರ್ಗರೆಯುವ ಜಲಪ್ರವಾಹದ ಮೊರೆತದಂತೆಯೂ ಭಾರಿ ಗುಡುಗಿನ ಗರ್ಜನೆಯಂತೆಯೂ ಇತ್ತು. ಅದು ಇಂತೆಂದಿತು:

"ಅಲ್ಲೆಲೂಯ!
ಸರ್ವಶಕ್ತ ನಮ್ಮ ಪ್ರಭು ದೇವ
ರಾಜ್ಯವಾಳುತಿಹನಾತ.
7 ಬಂದಿದೆ ಯಜ್ಞದ ಕುರಿಮರಿಯ ಶುಭವಿವಾಹ
ಸಿದ್ಧಳಿಹಳು ಮದುಮಗಳು ಶೃಂಗಾರ ಸಹಿತ
ಸಂತೋಷಿಸೋಣ, ಸಂಭ್ರಮಿಸೋಣ!
ಆತನ ಮಹಿಮೆಯನು ಕೀರ್ತಿಸೋಣ;

[8] ದಿವ್ಯವಾದುವು, ಭವ್ಯವಾದುವು,
ಮೌಲ್ಯವಾದುವು,
ಆಕೆಗಿತ್ತ ಉಡುಗೆತೊಡುಗೆಗಳು."
ಸತ್ಕಾರ್ಯಗಳೇ ದೇವಜನರು ಧರಿಸುವ
ಅಮೂಲ್ಯ ಉಡುಗೆತೊಡುಗೆಗಳು."

9 ಅನಂತರ ದೇವದೂತನು " 'ಯಜ್ಞದ ಕುರಿಮರಿಯ ವಿವಾಹದ ಔತಣಕ್ಕೆ ಆಹ್ವಾನಿತರು ಭಾಗ್ಯವಂತರು' ಎಂದು ಬರೆ," ಎಂದು ನನಗೆ ಆಜ್ಞಾಪಿಸಿದನು. "ಇವು ದೇವರ ಸತ್ಯವಾದ ವಾಕ್ಯಗಳು," ಎಂದು ಸಹ ತಿಳಿಸಿದನು.

10 ಕೂಡಲೇ ಆರಾಧಿಸಲೆಂದು ಆತನ ಪಾದಗಳಿಗೆ ಅಡ್ಡಬಿದ್ದೆ. ಆಗ ಆತನು "ನೀನು ನನಗೆ ಅಡ್ಡಬೀಳಬಾರದು, ನಾನು ನಿನ್ನ ಹಾಗೂ ಕ್ರಿಸ್ತೇಸು ಶ್ರುತಪಡಿಸಿದ ಸತ್ಯವನ್ನು ಅಂಗೀಕರಿಸಿದ ನಿನ್ನ ಸಹೋದರರ ಸಹ ಸೇವಕನಷ್ಟೆ. ನೀನು ದೇವರನ್ನು ಆರಾಧಿಸು," ಎಂದನು.

ಯೇಸು ಶ್ರುತಪಡಿಸಿದ ಸತ್ಯವೇ ಪ್ರವಾದಿಗಳ ಜೀವಾಳ.

## ಕಪಟ ಪ್ರವಾದಿಯ ಅಧೋಗತಿ

11 ನಾನು ಈ ದೃಶ್ಯವನ್ನೂ ಕಂಡೆ: ಸ್ವರ್ಗವು ತೆರೆದಿತ್ತು. ಬಿಳಿಯ ಕುದುರೆಯೊಂದು ಕಾಣಿಸಿತು. ಅದರ ಮೇಲೆ ಒಬ್ಬನು ಕುಳಿತಿದ್ದನು. ನಂಬಿಕಸ್ಥನೆಂದೂ ಸತ್ಯವಂತನೆಂದೂ ಆತನ ಹೆಸರು; ಆತನು ನಿಷ್ಪಕ್ಷಪಾತದಿಂದ ನ್ಯಾಯತೀರ್ಪು ಕೊಡುವವನು; ನ್ಯಾಯಬದ್ಧವಾಗಿ ಯುದ್ಧಮಾಡುವವನು. [12]ಆತನ ಕಣ್ಣುಗಳು ಬೆಂಕಿಯ ಕೆಂಡಗಳಂತಿವೆ; ತಲೆಯ ಮೇಲೆ ಅನೇಕ ಕಿರೀಟಗಳಿವೆ. ಆತನ ಹೆಸರನ್ನು ಬರೆದಿಟ್ಟಿದೆ; ಅದು ಆತನಿಗೇ ಹೊರತು ಬೇರೆ ಯಾರಿಗೂ ತಿಳಿಯದು. [13]ಆತನು ಧರಿಸಿದ್ದ ಉಡುಪು ರಕ್ತಪ್ರೋಕ್ಷಿತವಾಗಿತ್ತು. ಆತನಿಗೆ 'ದೇವರ ವಾಕ್ಯ' ಎಂದು ಹೆಸರು. [14]ಸ್ವರ್ಗದ ಸೈನಿಕರು ಬಿಳಿಯ ಕುದುರೆಗಳನ್ನೇರಿ ಆತನನ್ನು ಹಿಂಬಾಲಿಸಿದರು. ಅವರು ಶುಭ್ರವಾದ ಬಿಳಿಯ ಸಮವಸ್ತ್ರಗಳನ್ನು ಧರಿಸಿದ್ದರು. [15]ರಾಷ್ಟ್ರಗಳನ್ನು ಹೊಡೆದುರುಳಿಸುವಂಥ ಹರಿತವಾದ ಖಡ್ಗವೊಂದು ಆತನ ಬಾಯಿಂದ ಹೊರಟಿತು. ಆತನು ಕಬ್ಬಿಣದ ದಂಡದಿಂದ ಅವುಗಳ ಆಳ್ವಿಕೆ ನಡೆಸುವನು. ಸರ್ವಶಕ್ತ ದೇವರ ರೋಷವೆಂಬ ದ್ರಾಕ್ಷಿಯ ಆಲೆಯಲ್ಲಿ ಇರುವವರನ್ನು ತುಳಿದು ಹಾಕುವನು. [16]ಆತನ ಉಡುಪಿನ ಮೇಲೂ ತೊಡೆಯ ಮೇಲೂ 'ರಾಜಾಧಿರಾಜ ಮತ್ತು ಪ್ರಭುಗಳ ಪ್ರಭು' ಎಂಬ ಹೆಸರು ಲಿಖಿತವಾಗಿತ್ತು.

17 ಅನಂತರ ದೇವದೂತನೊಬ್ಬ ಸೂರ್ಯನ ಮೇಲೆ ನಿಂತಿರುವುದನ್ನು ಕಂಡೆ. ಆತನು ಗಟ್ಟಿಯಾದ ಧ್ವನಿಯಿಂದ ಮಧ್ಯಾಕಾಶದಲ್ಲಿ ಹಾರಾಡುವ ಪಕ್ಷಿಗಳಿಗೆ ಹೀಗೆ ಹೇಳಿದನು: "ದೇವರ ದೊಡ್ಡ ಔತಣಕ್ಕೆ ಕೂಡಿಬನ್ನಿ; [18]ರಾಜರುಗಳ ಮಾಂಸವನ್ನು, ಸೇನಾಧಿಪತಿಗಳ ಮಾಂಸವನ್ನು ಮತ್ತು ಪರಾಕ್ರಮಶಾಲಿಗಳ ಮಾಂಸವನ್ನು ತಿನ್ನ ಬನ್ನಿ; ಕುದುರೆಗಳ ಮಾಂಸವನ್ನೂ ರಾವುತರ ಮಾಂಸವನ್ನೂ ಉಣಬನ್ನಿ; ಯಜಮಾನರ, ಗುಲಾಮರ, ಚಿಕ್ಕವರ, ದೊಡ್ಡವರ ಈ ಎಲ್ಲಾ ನರಮಾನವರ ಮಾಂಸವನ್ನು ರುಚಿಸ ಬನ್ನಿ," ಎಂದನು.

19 ಅನಂತರ ಆ ಮೃಗವನ್ನು ಕಂಡೆ. ಕುದುರೆಯ ಮೇಲೆ ಕುಳಿತಿದ್ದಾತನ ಮೇಲೂ ಅವನ ಸೈನ್ಯದ ಮೇಲೂ ಯುದ್ಧಮಾಡುವುದಕ್ಕಾಗಿ, ಆ ಮೃಗವೂ ಭೂಲೋಕದ ರಾಜರೂ ಅವರ ಸೈನ್ಯಗಳೊಡನೆ ಒಟ್ಟಾಗಿ ಸೇರಿಬಂದರು. [20]ಮೃಗವನ್ನು ಸೆರೆಹಿಡಿಯಲಾಯಿತು. ಅದರ ಜೊತೆಯಲ್ಲಿ ಕಪಟ ಪ್ರವಾದಿಯೂ ಸೆರೆಸಿಕ್ಕಿಬಿದ್ದನು. ಮೃಗದ ಮುಂದೆ ಪವಾಡ ಕಾರ್ಯಗಳನ್ನೆಸಗಿ ಅದರ ಮುದ್ರೆ ಒತ್ತಿಸಿಕೊಂಡವರನ್ನೂ ಅದರ ವಿಗ್ರಹಕ್ಕೆ ಪೂಜೆ ಮಾಡಿದವರನ್ನೂ ಮರುಳುಗೊಳಿಸಿದವನು ಇವನೇ. ಇವರಿಬ್ಬರನ್ನೂ ಜೀವಸಹಿತ ಹಿಡಿದು ಗಂಧಕದಿಂದ ಉರಿಯುವ ಅಗ್ನಿಸರೋವರಕ್ಕೆ ಎಸೆಯಲಾಯಿತು.

21ಇನ್ನುಳಿದವರು ಕುದುರೆಯ ಮೇಲೆ ಕುಳಿತಿದ್ದಾತನ ಬಾಯಿಂದ ಹೊರಟ ಖಡ್ಗದಿಂದ ಹತರಾದರು;
ಆಕಾಶದಲ್ಲಿ ಹಾರಾಡುವ ಪಕ್ಷಿಗಳಿಗೆ ಆಹಾರವಾದರು.

## ಪ್ರಥಮ ಪುನರುತ್ಥಾನ

**20** ತರುವಾಯ ದೇವದೂತನೊಬ್ಬನು ಸ್ವರ್ಗದಿಂದ ಇಳಿದು ಬಂದುದನ್ನು ಕಂಡೆ. ಆತನ ಕೈಯಲ್ಲಿ
ಪಾತಾಳದ ಬೀಗದ ಕೈ ಮತ್ತು ದೊಡ್ಡ ಸರಪಣಿ ಇದ್ದವು. 2ಪಿಶಾಚಿಯೂ ಸೈತಾನನೂ ಆಗಿರುವ
ಘಟಸರ್ಪವನ್ನು, ಅಂದರೆ ಪುರಾತನ ಸರ್ಪವನ್ನು, ಆತನು ಹಿಡಿದು ಒಂದು ಸಾವಿರ ವರ್ಷಗಳ ಕಾಲ
ಬಂಧನದಲ್ಲಿಟ್ಟನು. 3ಆ ಒಂದು ಸಾವಿರ ವರ್ಷಗಳ ಕಾಲದವರೆಗೆ, ಅದು ಜನಾಂಗಗಳನ್ನು
ಮರುಳುಗೊಳಿಸದಂತೆ ದೇವದೂತನು ಸೈತಾನನನ್ನು ಪಾತಾಳಕ್ಕೆ ದಬ್ಬಿ, ಬಾಗಿಲು ಮುಚ್ಚಿ, ಅದಕ್ಕೆ ಮುದ್ರೆ
ಹಾಕಿದನು. ಆ ಸಾವಿರ ವರ್ಷಗಳ ಕಾಲ ಮುಗಿದ ಮೇಲೆ ಅವನಿಗೆ ಸ್ವಲ್ಪ ಕಾಲ ಬಿಡುಗಡೆ
ದೊರೆಯುವುದು.

4 ಬಳಿಕ ಸಿಂಹಾಸನಗಳನ್ನು ಕಂಡೆ. ಅವುಗಳ ಮೇಲೆ ಕುಳಿತಿದ್ದವರಿಗೆ ತೀರ್ಪು ಕೊಡುವ
ಅಧಿಕಾರವನ್ನು ಕೊಡಲಾಗಿತ್ತು. ಇದಲ್ಲದೆ, ಕ್ರಿಸ್ತೇಸುವಿನ ಪರವಾಗಿ ಸಾಕ್ಷಿಕೊಟ್ಟು ದೇವರ ವಾಕ್ಯದ
ಪ್ರಚಾರಕ್ಕಾಗಿ ತಲೆತೆತ್ತ ಜೀವಾತ್ಮಗಳನ್ನು ಕಂಡೆ. ಇವರು ಆ ಮೃಗವನ್ನಾಗಲಿ, ಅದರ ವಿಗ್ರಹವನ್ನಾಗಲಿ
ಪೂಜಿಸಿದವರಲ್ಲ; ತಮ್ಮ ಹಣೆಗಳ ಮೇಲಾಗಲಿ, ಕೈಗಳ ಮೇಲಾಗಲಿ ಅದರ ಗುರುತಿನ ಹಚ್ಚೆಯನ್ನೂ
ಚುಚ್ಚಿಸಿಕೊಂಡವರಲ್ಲ. ಇವರು ಜೀವಂತರಾಗಿ ಕ್ರಿಸ್ತೇಸುವಿನೊಡನೆ ಒಂದು ಸಾವಿರ ವರ್ಷಗಳು
ಆಳುವರು. 5ಇದೇ ಪ್ರಥಮ ಪುನರುತ್ಥಾನ. ಮರಣಹೊಂದಿದ್ದ ಇನ್ನುಳಿದವರು ಆ ಒಂದು ಸಾವಿರ
ವರ್ಷಗಳು ಮುಗಿಯುವವರೆಗೆ ಜೀವಂತರಾಗಲಿಲ್ಲ. 6ಆ ಪ್ರಥಮ ಪುನರುತ್ಥಾನದಲ್ಲಿ ಸೇರಿರುವ
ದೇವಜನರು ಭಾಗ್ಯವಂತರು. ಇಂಥವರ ಮೇಲೆ ಎರಡನೆಯ ಮರಣಕ್ಕೆ ಅಧಿಕಾರವಿಲ್ಲ. ಅವರು
ದೇವರಿಗೂ ಕ್ರಿಸ್ತೇಸುವಿಗೂ ಯಾಜಕರಾಗಿ ಸೇವೆಸಲ್ಲಿಸುವರು; ಮತ್ತು ಕ್ರಿಸ್ತೇಸುವಿನೊಡನೆ ಒಂದು ಸಾವಿರ
ವರ್ಷಗಳ ಕಾಲ ಆಳುವರು.

## ಸೈತಾನನ ಸರ್ವನಾಶ

7 ಆ ಒಂದು ಸಾವಿರ ವರ್ಷಗಳು ಮುಗಿದ ನಂತರ ಸೈತಾನನನ್ನು ಬಂಧನದಿಂದ ಬಿಡುಗಡೆ
ಮಾಡಲಾಗುವುದು. 8ಅವನು ಬಂದು ಭೂಮಿಯ ಅಷ್ಟದಿಕ್ಕುಗಳಲ್ಲಿರುವ ಗೋಗ್ ಮತ್ತು ಮಾಗೋಗ್
ಎಂಬ ಜನಾಂಗಗಳನ್ನು ಮರುಳುಗೊಳಿಸುವನು, ಯುದ್ಧ ಮಾಡುವುದಕ್ಕಾಗಿ ಅವರನ್ನು
ಒಟ್ಟುಗೂಡಿಸುವನು. ಅವರ ಸಂಖ್ಯೆ ಸಮುದ್ರ ತೀರದ ಮರಳಿನಷ್ಟಿರುವುದು. 9ಅವರು ದೇಶದಲ್ಲೆಲ್ಲಾ
ಹರಡಿಕೊಂಡು ದೇವಜನರ ಪಾಳೆಯಕ್ಕೂ ದೇವರ ಪ್ರಿಯ ಪಟ್ಟಣಕ್ಕೂ ಮುತ್ತಿಗೆ ಹಾಕಿದರು. ಆಗ
ಸ್ವರ್ಗದಿಂದ ಬೆಂಕಿ ಇಳಿದು ಬಂದು ಅವರನ್ನು ದಹಿಸಿಬಿಟ್ಟಿತು. 10ಜನರನ್ನು ಮರುಳುಗೊಳಿಸುತ್ತಿದ್ದ
ಪಿಶಾಚಿಯನ್ನು ಗಂಧಕದ ಅಗ್ನಿ ಸರೋವರಕ್ಕೆ ಎಸೆಯಲಾಯಿತು. ಆ ಮೃಗವನ್ನೂ ಕಪಟ
ಪ್ರವಾದಿಯನ್ನೂ ಮೊದಲೇ ಅದಕ್ಕೆ ಎಸೆಯಲಾಗಿತ್ತು. ಇವರೆಲ್ಲರೂ ಯುಗಯುಗಾಂತರಗಳವರೆಗೆ
ಹಗಲಿರುಳೆನ್ನದೆ ಅಲ್ಲಿಯೇ ಬೇನೆಬೇಗುದಿಗಳಿಂದ ನರಳುವರು.

## ಅಂತಿಮ ತೀರ್ಪು

11 ಅನಂತರ ಶ್ವೇತವರ್ಣದ ಒಂದು ಮಹಾ ಸಿಂಹಾಸನವನ್ನು ಕಂಡೆ. ಅದರಲ್ಲಿ ಒಬ್ಬರು
ಆಸೀನರಾಗಿದ್ದರು. ಅವರ ಸನ್ನಿಧಿಯಿಂದ ಭೂಮ್ಯಾಕಾಶಗಳು ತಮ್ಮ ಇರುವಿಕೆಯೇ ಇಲ್ಲದಂತೆ

ಕಣ್ಮರೆಯಾಗಿ ಹೋದವು. 12ಇದಲ್ಲದೆ, ಮೃತರಾಗಿದ್ದ ಹಿರಿಯ ಕಿರಿಯರೆಲ್ಲರೂ ಸಿಂಹಾಸನದ
ಸಾನ್ನಿಧ್ಯದಲ್ಲಿ ನಿಂತಿರುವುದನ್ನು ಕಂಡೆ. ಆಗ ಪುಸ್ತಕಗಳನ್ನು ತೆರೆಯಲಾಯಿತು. ಅನಂತರ ಮತ್ತೊಂದು
ಪುಸ್ತಕವನ್ನು ತೆರೆಯಲಾಯಿತು. ಅದು ಜೀವಬಾಧ್ಯರ ಪಟ್ಟಿಯುಳ್ಳ ಪುಸ್ತಕ. ಆ ಪುಸ್ತಕದಲ್ಲಿ ಬರೆದಿದ್ದ
ಪ್ರಕಾರ ಅವರವರ ಕೃತ್ಯಗಳಿಗೆ ತಕ್ಕಂತೆ ಮೃತರಿಗೆ ನ್ಯಾಯತೀರ್ಪು ಕೊಡಲಾಯಿತು. 13ಸಮುದ್ರವು
ತನ್ನಲ್ಲಿದ್ದ ಮೃತರನ್ನು ಒಪ್ಪಿಸಿತು; ಮೃತ್ಯುವೂ ಪಾತಾಳವೂ ತಮ್ಮ ವಶದಲ್ಲಿದ್ದ ಮೃತರನ್ನು ಒಪ್ಪಿಸಿದವು;
ಅವರಲ್ಲಿ ಪ್ರತಿಯೊಬ್ಬನಿಗೂ ಅವನವನ ಕೃತ್ಯಗಳಿಗೆ ತಕ್ಕಂತೆ ನ್ಯಾಯತೀರ್ಪು ಆಯಿತು. 14ಅನಂತರ
ಮೃತ್ಯುವನ್ನೂ ಪಾತಾಳವನ್ನೂ ಅಗ್ನಿಸರೋವರಕ್ಕೆ ಎಸೆಯಲಾಯಿತು. ಆ ಅಗ್ನಿಸರೋವರವೇ
ಎರಡನೆಯ ಮರಣ. 15ಯಾರ ಯಾರ ಹೆಸರು ಜೀವಬಾಧ್ಯರ ಪಟ್ಟಿಯಲ್ಲಿ ಲಿಖಿತವಾಗಿಲ್ಲವೋ
ಅಂಥವರನ್ನು ಅಗ್ನಿ ಸರೋವರಕ್ಕೆ ಎಸೆಯಲಾಯಿತು.

### ನೂತನ ಭೂಮ್ಯಾಕಾಶಗಳು

**21** ತರುವಾಯ ನೂತನ ಆಕಾಶ ಮಂಡಲವನ್ನೂ ನೂತನ ಭೂಮಂಡಲವನ್ನೂ ಕಂಡೆ. ಮೊದಲಿದ್ದ
ಆಕಾಶಮಂಡಲವೂ ಮೊದಲಿದ್ದ ಭೂಮಂಡಲವೂ ಕಣ್ಮರೆಯಾಗಿ ಹೋದವು. ಸಮುದ್ರವು
ಇನ್ನಿಲ್ಲವಾಯಿತು. 2ಇದಲ್ಲದೆ, ಪವಿತ್ರ ನಗರವಾದ ನೂತನ ಜೆರುಸಲೇಮ್ ಸ್ವರ್ಗದಿಂದಲೂ ದೇವರ
ಸನ್ನಿಧಿಯಿಂದಲೂ ಕೆಳಗಿಳಿದು ಬರುವುದನ್ನು ಕಂಡೆ. ಅದು ಮದುಮಗನನ್ನು ಎದುರುಗೊಳ್ಳುವುದಕ್ಕಾಗಿ
ಅಲಂಕೃತಳಾದ ಮದುವಣಗಿತ್ತಿಯಂತೆ ಶೃಂಗಾರಮಯವಾಗಿತ್ತು. 3ಆಗ ಸಿಂಹಾಸನದ ಕಡೆಯಿಂದ
ಬಂದ ಮಹಾಧ್ವನಿ ಇಂತೆಂದಿತು:

"ಇಗೋ ಮಾನವರ ಮಧ್ಯೆಯೇ ಇದೆ
ದೇವಾಲಯ,
ಆತನವರೊಡನೆ ವಾಸಿಸುವನು;
ಅವರಾತನಿಗೆ ಪ್ರಜೆಗಳಾಗುವರು;
ದೇವರೇ ಅವರುಗಳ ಜೊತೆಗಾರ;
ಆತನಲ್ಲದೆ ಅವರಿಗಿಲ್ಲ ಬೇರಾವ ದೇವ.
4 ಒರಸುವನಾತ ಅವರ ಕಂಬನಿಯನೆಲ್ಲಾ,
ಇರದಿನ್ನು ಸಾವುನೋವು ಅವರಿಗೆಲ್ಲಾ;
ಇರವು ಶೋಕ ದುಃಖಗಳಾವುವು
ಮರೆಯಾಗಿ ಹೋದವು ಹಿಂದಿನದೆಲ್ಲವು."

5 ಸಿಂಹಾಸನಾರೂಢನಾಗಿದ್ದವನು ಆಗ, "ಇಗೋ, ನಾನೆಲ್ಲವನ್ನೂ ಹೊಸದಾಗಿಸುತ್ತೇನೆ,"
ಎಂದನು. ಅಲ್ಲದೆ ಅವನು, "ಇದನ್ನು ನೀನು ಬರೆ, ಈ ಮಾತುಗಳು ಸತ್ಯವಾದುವು ಹಾಗೂ
ವಿಶ್ವಾಸಾರ್ಹವಾದುವು," ಎಂದು ಹೇಳಿದನು. 6ಸಿಂಹಾಸನಾರೂಢನಾಗಿದ್ದವನು ನನಗೆ ಮತ್ತೂ
ಹೇಳಿದ್ದೇನೆಂದರೆ:

"ಮುಗಿಸಿದ್ದಾಯಿತು,
'ಅ'ಕಾರವೂ 'ಳ'ಕಾರವೂ ನಾನೇ;
ಆದಿಯೂ ಅಂತ್ಯವೂ ನಾನೇ;
ಬಾಯಾರಿದವರಿಗೆ ಕೊಡುವೆ
ಜೀವಜಲವನು ಉಚಿತವಾಗಿಯೇ.
7ಜಯಶಾಲಿಯಾದವನು ಆಗುವನು

ಇದಕ್ಕೆಲ್ಲಾ ಬಾಧ್ಯನು
ನಾನವನಿಗೆ ದೇವನಾಗಿರುವೆನು,
ಅವನೆನಗೆ ಪುತ್ರನಾಗಿರುವನು
8 ಆದರೆ ಹೇಡಿಗಳಿಗೆ, ಹೇಯಕೃತ್ಯಗಾರರಿಗೆ,
ಅವಿಶ್ವಾಸಿಗಳಿಗೆ, ಹಲವು ಅಸತ್ಯಗಾರರಿಗೆ,
ಕಾಮುಕರಿಗೆ, ಕೊಲೆಗಾರರಿಗೆ
ವಿಗ್ರಹಾರಾಧಕರಿಗೆ, ಮಾಟಮಂತ್ರಗಾರರಿಗೆ
ಗಂಧಕದಿಂದುರಿಯುವ ಅಗ್ನಿಸರೋವರವೇ ಗತಿ
ಇದುವೇ ಅವರೆಲ್ಲರ ಎರಡನೆಯ ಮೃತಿ,"
ಎಂದು ಹೇಳಿದನು.

## ನೂತನ ಜೆರುಸಲೇಮ್

9 ಏಳು ಅಂತಿಮ ವಿಪತ್ತುಗಳಿಂದ ತುಂಬಿದ್ದ ಏಳು ಪಾತ್ರೆಗಳನ್ನು ಹಿಡಿದಿದ್ದ ಏಳು
ದೇವದೂತರುಗಳಲ್ಲಿ ಒಬ್ಬನು ಬಂದು, ನನ್ನೊಡನೆ ಮಾತನಾಡಿ ಇಂತೆಂದನು: "ಇಲ್ಲಿಗೆ ಬಾ, ಯಜ್ಞದ
ಕುರಿಮರಿಗೆ ಸತಿಯಾಗಲಿರುವ ಮದುವಣಗಿತ್ತಿಯನ್ನು ನಿನಗೆ ತೋರಿಸುತ್ತೇನೆ," ಎಂದನು. 10ಆಗ ನಾನು
ಪವಿತ್ರಾತ್ಮವಶನಾದೆ. ಆ ದೇವದೂತನು ನನ್ನನ್ನು ಎತ್ತರವಾದ ಬೆಟ್ಟದ ಮೇಲೆ ಕೊಂಡೊಯ್ದನು. ಅಲ್ಲಿ
ನನಗೆ ಪವಿತ್ರ ನಗರವಾದ ಜೆರುಸಲೇಮನ್ನು ತೋರಿಸಿದನು. ಅದು ಸ್ವರ್ಗದಲ್ಲಿರುವ ದೇವರ ಬಳಿಯಿಂದ
ಕೆಳಗಿಳಿದು ಬರುತ್ತಿತ್ತು; 11ದೇವರ ತೇಜಸ್ಸಿನಿಂದ ಕೂಡಿತ್ತು; ಅಮೂಲ್ಯ ರತ್ನದಂತೆ ಹೊಳೆಯುತ್ತಿತ್ತು;
ಸ್ವಚ್ಛವಾದ ಸ್ಫಟಿಕದಂತೆ ಶುಭ್ರವಾಗಿತ್ತು. 12ಆ ನಗರದ ಸುತ್ತಲೂ ಎತ್ತರವಾದ ಕೋಟೆಯಿತ್ತು. ಅದಕ್ಕೆ
ಹನ್ನೆರಡು ಹೆಬ್ಬಾಗಿಲುಗಳಿದ್ದವು. ಆ ಬಾಗಿಲುಗಳಿಗೆ ಹನ್ನೆರಡು ಮಂದಿ ದೇವದೂತರುಗಳು
ಕಾವಲಿದ್ದರು. ಆ ಬಾಗಿಲುಗಳ ಮೇಲೆ ಇಸ್ರಯೇಲಿನ ಹನ್ನೆರಡು ಕುಲಗಳ ಹೆಸರುಗಳನ್ನು ಬರೆದಿತ್ತು.
13ಪೂರ್ವದಿಕ್ಕಿನಲ್ಲಿ ಮೂರು ಬಾಗಿಲುಗಳು, ಉತ್ತರ ದಿಕ್ಕಿನಲ್ಲಿ ಮೂರು ಬಾಗಿಲುಗಳು, ದಕ್ಷಿಣ ದಿಕ್ಕಿನಲ್ಲಿ
ಮೂರು ಬಾಗಿಲುಗಳು ಮತ್ತು ಪಶ್ಚಿಮ ದಿಕ್ಕಿನಲ್ಲಿ ಮೂರು ಬಾಗಿಲುಗಳು ಇದ್ದವು. 14ಆ ನಗರದ
ಕೋಟೆಗೆ ಹನ್ನೆರಡು ಅಸ್ತಿವಾರಗಳಿದ್ದವು. ಅವುಗಳ ಮೇಲೆ ಹನ್ನೆರಡು ಹೆಸರುಗಳಿದ್ದವು. ಯಜ್ಞದ
ಕುರಿಮರಿಯ ಹನ್ನೆರಡು ಪ್ರೇಷಿತರ ಹೆಸರುಗಳು ಅವು.

15 ನನ್ನೊಡನೆ ಮಾತನಾಡುತ್ತಿದ್ದ ದೇವದೂತನು ಆ ನಗರವನ್ನೂ ಅದರ ಹೆಬ್ಬಾಗಿಲುಗಳನ್ನೂ
ಕೋಟೆಗಳನ್ನೂ ಅಳತೆಮಾಡುವುದಕ್ಕಾಗಿ ಒಂದು ಚಿನ್ನದ ಅಳತೆಗೋಲನ್ನು ಹಿಡಿದಿದ್ದನು. 16ಆ ನಗರ
ಚಚ್ಚೌಕವಾಗಿತ್ತು. ಅದರ ಚದರ ಅಳತೆ 2,400 ಕಿಲೊಮಿಟರುಗಳಷ್ಟಿತ್ತು. 17ಅನಂತರ, ಆತನು ನಗರದ
ಕೋಟೆಯನ್ನು ಅಳೆದನು. ಅದು ಆತನು ಅಳೆದ ಅಳತೆಯ ಪ್ರಮಾಣದಲ್ಲಿ ಅರವತ್ತು ಮಿಟರಿನಷ್ಟು
ಎತ್ತರವಾಗಿತ್ತು. 18ಆ ಕೋಟೆಯನ್ನು ಸೂರ್ಯಕಾಂತ ಶಿಲೆಯಿಂದ ನಿರ್ಮಿಸಲಾಗಿತ್ತು. ನಗರವು ಅಪ್ಪಟ
ಬಂಗಾರದಂತೆ ಥಳಥಳಿಸುತ್ತಿತ್ತು. 19ನಗರದ ಕೋಟೆಯ ಅಸ್ತಿವಾರಗಳು ಸಕಲ ವಿಧವಾದ ರತ್ನಗಳಿಂದ
ಅಲಂಕೃತವಾಗಿತ್ತು. ಮೊದಲನೆಯ ಅಸ್ತಿವಾರವನ್ನು ಸೂರ್ಯಕಾಂತ ಶಿಲೆಯಿಂದಲೂ ಎರಡನೆಯ
ಅಸ್ತಿವಾರವನ್ನು ವೈಢೂರ್ಯದಿಂದಲೂ ಮೂರನೆಯ ಅಸ್ತಿವಾರವನ್ನು ಪಚ್ಚೆಯಿಂದಲೂ ಮತ್ತು
ನಾಲ್ಕನೆಯ ಅಸ್ತಿವಾರವನ್ನು ಪದ್ಮರಾಗದಿಂದಲೂ ಅಲಂಕೃತಗೊಳಿಸಲಾಗಿತ್ತು. 20ಅಂತೆಯೇ, ಐದನೆಯ
ಅಸ್ತಿವಾರವನ್ನು ಗೋಮೇಧಿಕದಿಂದಲೂ ಆರನೆಯದನ್ನು ಮಾಣಿಕ್ಯದಿಂದಲೂ ಏಳನೆಯದನ್ನು
ಪೀತರತ್ನದಿಂದಲೂ ಎಂಟನೆಯದನ್ನು ಬೆರುಲ್ಲದಿಂದಲೂ ಒಂಭತ್ತನೆಯದನ್ನು ಪುಷ್ಯರಾಗದಿಂದಲೂ
ಹತ್ತನೆಯದನ್ನು ಗರುಡ ಪಚ್ಚೆಯಿಂದಲೂ ಹನ್ನೊಂದನೆಯದನ್ನು ಇಂದ್ರನೀಲದಿಂದಲೂ ಹಾಗೂ

ಹನ್ನೆರಡನೆಯದನ್ನು ನೀಲಸ್ಫಟಿಕದಿಂದಲೂ ಅಲಂಕೃತಗೊಳಿಸಲಾಗಿತ್ತು. [21]ಹನ್ನೆರಡು ಹೆಬ್ಬಾಗಿಲುಗಳು ಹನ್ನೆರಡು ಮುತ್ತುಗಳಾಗಿದ್ದವು. ಪ್ರತಿಯೊಂದು ಹೆಬ್ಬಾಗಿಲನ್ನು ಒಂದೊಂದು ಮುತ್ತಿನಿಂದ ಮಾಡಲಾಗಿತ್ತು. ನಗರದ ಬೀದಿ ಸ್ವಚ್ಛವಾದ ಗಾಜಿನಂತಿರುವ ಅಪ್ಪಟ ಬಂಗಾರವಾಗಿತ್ತು.

22 ಆ ನಗರದಲ್ಲಿ ನಾನು ದೇವಾಲಯವನ್ನು ಕಾಣಲಿಲ್ಲ; ಏಕೆಂದರೆ, ಸರ್ವಶಕ್ತ ದೇವರಾದ ಪ್ರಭುವೂ ಯಜ್ಞದ ಕುರಿಮರಿಯಾದಾತನೂ ಅದರ ದೇವಾಲಯವಾಗಿದ್ದಾರೆ. [23]ನಗರಕ್ಕೆ ಬೆಳಕನ್ನು ಕೊಡಲು ಸೂರ್ಯನ ಇಲ್ಲವೆ ಚಂದ್ರನ ಅವಶ್ಯಕತೆ ಇಲ್ಲ. ಏಕೆಂದರೆ, ದೇವರ ತೇಜಸ್ಸೇ ಅದಕ್ಕೆ ಬೆಳಕು; ಯಜ್ಞದ ಕುರಿಮರಿಯೇ ಅದಕ್ಕೆ ಜ್ಯೋತಿ. [24]ಅದರ ಬೆಳಕಿನಲ್ಲಿ ಸರ್ವ ಜನಾಂಗಗಳು ಸಂಚರಿಸುವರು. ಭೂರಾಜರು ತಮ್ಮ ಸಿರಿಸಂಪತ್ತನ್ನು ಅಲ್ಲಿಗೆ ತರುವರು. [25]ಹಗಲಿನಲ್ಲಿ ಅದರ ಹೆಬ್ಬಾಗಿಲುಗಳನ್ನು ಮುಚ್ಚುವಂತಿಲ್ಲ. ರಾತ್ರಿಯೆಂಬುದು ಅಲ್ಲಿ ಇಲ್ಲವೇ ಇಲ್ಲ. [26]ರಾಷ್ಟ್ರಗಳ ಸಿರಿಸಂಪತ್ತನ್ನೂ ಘನಮಾನವನ್ನೂ ಅಲ್ಲಿಗೆ ತರಲಾಗುವುದು. [27]ಆದರೆ ಅಶುದ್ಧವಾದುದು ಯಾವುದೂ ಅದನ್ನು ಸೇರಲಾರದು. ಅಂತೆಯೇ, ಹೇಯ ಕೃತ್ಯಗಳನ್ನೆಸಗುವವನೂ ಅಸತ್ಯವನ್ನು ಆಡುವವನೂ ಅದನ್ನು ಸೇರಲಾರನು. ಯಜ್ಞದ ಕುರಿಮರಿಯ ಜೀವಬಾಧ್ಯರ ಪಟ್ಟಿಯಲ್ಲಿ ಯಾರ ಯಾರ ಹೆಸರುಗಳು ಲಿಖಿತವಾಗಿವೆಯೋ ಅಂಥವರು ಮಾತ್ರ ಅದನ್ನು ಪ್ರವೇಶಿಸಬಲ್ಲರು.

## ದೇವರ ದಾಸರ ಸೌಭಾಗ್ಯ

**22** ಬಳಿಕ ಆ ದೇವದೂತನು ಜೀವಜಲದ ನದಿಯನ್ನು ನನಗೆ ತೋರಿಸಿದನು. ಅದು ಸ್ಫಟಿಕದಂತೆ ಮಿನುಗುತ್ತಿತ್ತು. ಅದು ದೇವರ ಹಾಗೂ ಯಜ್ಞದ ಕುರಿಮರಿಯ ಸಿಂಹಾಸನದಲ್ಲಿ ಉಗಮಿಸಿ, [2]ನಗರದ ಹೆದ್ದಾರಿಯ ಮಧ್ಯದಲ್ಲಿ ಹರಿಯುತ್ತಿತ್ತು. ಆ ನದಿಯ ಎರಡು ದಡಗಳಲ್ಲೂ ಜೀವವೃಕ್ಷವಿತ್ತು. ಅದು ವರ್ಷದಲ್ಲಿ ಹನ್ನೆರಡು ಸಾರಿ ಫಲ ಕೊಡುವಂಥದ್ದು; ಪ್ರತೀ ತಿಂಗಳೂ ಫಸಲನ್ನೀಯುವಂಥದ್ದು. ಆ ವೃಕ್ಷದ ಎಲೆಗಳನ್ನು ರಾಷ್ಟ್ರಗಳಿಗೆ ಸಿದ್ಧೌಷಧಿಯನ್ನಾಗಿ ಉಪಯೋಗಿಸಲಾಗುವುದು. [3]ಶಾಪಗ್ರಸ್ತವಾದುದು ಯಾವುದೂ ಆ ನಗರದಲ್ಲಿ ಇರದು.

ದೇವರ ಮತ್ತು ಯಜ್ಞದ ಕುರಿಮರಿಯ ಸಿಂಹಾಸನವು ಅಲ್ಲಿರುವುದು. ಸದಾ ಯಾಜಕ ಸೇವೆ ಸಲ್ಲಿಸುವ ಅವರ ದಾಸರಿಗೆ ಅದರ ಮುಖದರ್ಶನವಾಗುವುದು. [4]ಆ ಹೆಸರು ಆ ದಾಸರ ಹಣೆಗಳ ಮೇಲೆ ಲಿಖಿತವಾಗಿರುವುದು. [5]ರಾತ್ರಿ ಎಂಬುದೇ ಅಲ್ಲಿ ಇರದು; ದೀಪದ ಇಲ್ಲವೇ ಸೂರ್ಯನ ಬೆಳಕಿನ ಅವಶ್ಯಕತೆಯೂ ಇರದು; ದೇವರಾದ ಪ್ರಭುವೇ ಅವರಿಗೆ ಬೆಳಕಾಗಿರುವರು. ಯುಗಯುಗಾಂತರಕ್ಕೂ ಅವರು ರಾಜ್ಯವಾಳುವರು.

## ಯೇಸುವಿನ ಪುನರಾಗಮನ

6 ಅನಂತರ ಆ ದೇವದೂತನು ನನಗೆ, “ಈ ಮಾತುಗಳು ಸತ್ಯವಾದುವು, ನಂಬಲರ್ಹವಾದುವು. ಪ್ರವಾದಿಗಳಿಗೆ ಆತ್ಮ ಪ್ರೇರಣೆಯನ್ನೀಯುವ ದೇವರಾದ ಪ್ರಭುವೇ ಬೇಗನೆ ಸಂಭವಿಸಲಿರುವುವುಗಳನ್ನು ತಮ್ಮ ದಾಸರಿಗೆ ತಿಳಿಸಲು ತಮ್ಮ ದೂತನನ್ನೇ ಕಳಿಸಿದ್ದಾರೆ.

7 “ಯೇಸುಸ್ವಾಮಿ ನುಡಿಯುವುದನ್ನು ಕೇಳು: ‘ಇಗೋ, ನಾನು ಬೇಗನೆ ಬರುತ್ತೇನೆ.’ ಈ ಪುಸ್ತಕದಲ್ಲಿ ಬರೆದಿರುವ ಪ್ರವಾದನಾ ವಾಕ್ಯಗಳನ್ನು ಕೈಗೊಂಡು ನಡೆಯುವವನು ಧನ್ಯನು!” ಎಂದು ಹೇಳಿದನು.

8 ಯೊವಾನ್ನನೆಂಬ ನಾನೇ ಇವುಗಳನ್ನೆಲ್ಲಾ ಕೇಳಿದವನು ಮತ್ತು ಕಂಡವನು. ಇವುಗಳನ್ನು ಕಂಡು ಕೇಳಿದಾಗ, ಇವುಗಳನ್ನು ನನಗೆ ತೋರಿಸಿದ ದೇವದೂತನನ್ನು ಆರಾಧಿಸಬೇಕೆಂದು ಆತನ ಪಾದಗಳಿಗೆ ಅಡ್ಡಬಿದ್ದೆ. [9]ಆದರೆ ಆತನು, “ನೀನು ನನಗೆ ಅಡ್ಡಬೀಳಬೇಡ, ಪ್ರವಾದಿಗಳಾದ ನಿನ್ನ

ಸಹೋದರರಿಗೂ ಈ ಪುಸ್ತಕದಲ್ಲಿ ಬರೆದಿರುವ ವಾಕ್ಯಗಳನ್ನು ಕೈಗೊಂಡು ನಡೆಯುವವರಿಗೂ ನಿನಗೂ
ನಾನು ಸಹಸೇವಕನು ಮಾತ್ರ. ಆದ್ದರಿಂದ ನೀನು ದೇವರನ್ನು ಆರಾಧಿಸು," ಎಂದು ತಿಳಿಸಿದನು.
10ಇದಲ್ಲದೆ ಆತನು ನನಗೆ, "ಈ ಪುಸ್ತಕದಲ್ಲಿ ಬರೆದಿರುವ ಪ್ರವಾದನಾವಾಕ್ಯಗಳಿಗೆ ಮುದ್ರೆ ಹಾಕಿ
ಮುಚ್ಚಿಡಬೇಡ; ಇವು ನೆರವೇರುವ ಕಾಲವು ಸಮೀಪಿಸಿತು. 11ಅಕ್ರಮಿಯು ತನ್ನ ಅಕ್ರಮವನ್ನು
ಮುಂದುವರೆಸಲಿ. ಅಶುದ್ಧನು ತನ್ನ ಅಶುದ್ಧತೆಯಲ್ಲಿ ಮುಂದುವರಿಯಲಿ. ಸಜ್ಜನನು ತನ್ನ
ಸನ್ನಡತೆಯಲ್ಲಿಯೇ ನಿರತನಾಗಿರಲಿ. ಪವಿತ್ರನು ತನ್ನ ಪಾವಿತ್ರ್ಯತೆಯನ್ನು ಹೆಚ್ಚಿಸಿಕೊಳ್ಳಲಿ," ಎಂದನು.

12 "ಯೇಸುಸ್ವಾಮಿ ನುಡಿಯುವುದನ್ನು ಕೇಳು: 'ಇಗೋ, ನಾನು ಬೇಗನೆ ಬರುತ್ತೇನೆ.
ಪ್ರತಿಯೊಬ್ಬನಿಗೂ ಅವನವನ ಕೃತ್ಯಗಳಿಗೆ ತಕ್ಕಂತೆ ಕೊಡಲಾಗುವ ಪ್ರತಿಫಲವು ನನ್ನ ಕೈಯಲ್ಲೇ ಇದೆ.
13 'ಅ'ಕಾರವೂ 'ಳ'ಕಾರವೂ ನಾನೇ
ಆದಿಯೂ ಅಂತ್ಯವೂ ನಾನೇ
ಆರಂಭವೂ ಸಮಾಪ್ತಿಯೂ ನಾನೇ."

14 ತಮ್ಮ ನಿಲುವಂಗಿಗಳನ್ನು ತೊಳೆದು ಶುಭ್ರವಾಗಿಟ್ಟುಕೊಂಡಿರುವವರು ಭಾಗ್ಯವಂತರು.
ಜೀವವೃಕ್ಷದ ಫಲವನ್ನು ಸವಿಯುವ ಹಕ್ಕು ಅವರಿಗಿರುತ್ತದೆ. ಹೆಬ್ಬಾಗಿಲಿನ ಮೂಲಕ ಅವರು ಆ
ನಗರವನ್ನು ಸೇರುವರು. 15ಆದರೆ ಶುನಕ ಸಮಾನರೂ ಮಾಟಮಂತ್ರಗಾರರೂ ಕಾಮುಕರೂ
ಕೊಲೆಗಾರರೂ ವಿಗ್ರಹಾರಾಧಕರೂ ಅಸತ್ಯವಾದಿಗಳೂ ನಗರದ ಹೊರಗೆ ಬಿದ್ದಿರುವರು.

## ಮುಕ್ತಾಯ

16 "ಯೇಸುವೆಂಬ ನಾನೇ ನನ್ನ ಸಭೆಗಳ ಪ್ರಯೋಜನಾರ್ಥವಾಗಿ ಈ ಸಂಗತಿಗಳ ಬಗ್ಗೆ ನಿಮಗೆ ಸಾಕ್ಷಿನೀಡಲೆಂದು ನನ್ನ ದೂತನನ್ನು ಕಳುಹಿಸಿದೆನು. ನಾನು ದಾವೀದಕುಲಪುತ್ರ. ಅದೇ ವಂಶದ ಕುಡಿ; ಉದಯಕಾಲದ ಉಜ್ವಲ ನಕ್ಷತ್ರ!"

17 ದೇವರಾತ್ಮ ಹಾಗು ಮದುವಣಗಿತ್ತಿ, 'ಬಾ' ಎಂದು ಆಹ್ವಾನಿಸುತ್ತಾರೆ. ಇದನ್ನು ಕೇಳಿಸಿಕೊಳ್ಳುವ ಪ್ರತಿಯೊಬ್ಬನೂ 'ಬಾ' ಎಂದು ಹೇಳಲಿ. ಬಾಯಾರಿದವನು ಬರಲಿ; ಇಷ್ಟವುಳ್ಳವನು ಜೀವಜಲವನ್ನು ಉಚಿತವಾಗಿ ಪಡೆಯಲಿ.

18 ಈ ಪುಸ್ತಕದಲ್ಲಿ ಬರೆದಿರುವ ಪ್ರವಾದನಾ ವಾಕ್ಯಗಳನ್ನು ಕೇಳುವ ಪ್ರತಿಯೊಬ್ಬನಿಗೂ ನಾನು
ಕೊಡುವ ಎಚ್ಚರಿಕೆ ಇದು: "ಯಾವನಾದರೂ ಇವುಗಳಿಗೆ ಏನನ್ನಾದರೂ ಕೂಡಿಸಿದರೆ, ದೇವರು ಅವನ
ಮೇಲೆ ಪುಸ್ತಕದಲ್ಲಿ ಬರೆದಿರುವ ವಿಪತ್ತುಗಳು ಬಂದೆರಗುವಂತೆ ಮಾಡುವರು. 19ಯಾವನಾದರೂ ಈ
ಪುಸ್ತಕದಲ್ಲಿ ಬರೆದಿರುವ ಪ್ರವಾದನಾ ವಾಕ್ಯಗಳಲ್ಲಿ ಏನನ್ನಾದರೂ ತೆಗೆದು ಹಾಕಿದರೆ, ಈ ಪುಸ್ತಕದಲ್ಲಿ
ವಿವರಿಸಿರುವ ಜೀವವೃಕ್ಷದಲ್ಲಿಯೂ ಪವಿತ್ರ ನಗರದಲ್ಲಿಯೂ ಅವನಿಗೆ ಸಿಗುವ ಪಾಲನ್ನು ದೇವರು
ತೆಗೆದುಬಿಡುವರು."

20 ಇದಕ್ಕೆಲ್ಲಾ ಸಾಕ್ಷಿಯಾಗಿರುವಾತನು, "ಹೌದು, ನಾನು ಬೇಗನೆ ಬರುತ್ತೇನೆ," ಎಂದು ಹೇಳುತ್ತಾನೆ.
ಆಮೆನ್. ಪ್ರಭು ಯೇಸುವೇ, ಬನ್ನಿ.

21 ಪ್ರಭು ಯೇಸುವಿನ ಕೃಪಾಶೀರ್ವಾದಗಳು ಎಲ್ಲರಲ್ಲೂ ಇರಲಿ !